23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 302 | ನವದೆಹಲಿ | ಬೆಲೆ ₹10 | ಮೇ 8 2026, ಶುಕ್ರವಾರ



## ನಿತ್ಯ ಪಂಚಾಂಗ 8.05.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಬಹುಳ, ಷಷ್ಠಿ, ಉತ್ತರಾಷಾಢ ನಕ್ಷತ್ರ, ವಿಶ್ವ ರೆಡ್‌ಕ್ರಾಸ್ ದಿನ, ಮಾನ್ವಿ ವೆಂಕಟರಮಣ ಉತ್ಸವ, ಜೇವರ್ಗಿ ಷಣ್ಮುಖ ಶಿವಯೋಗಿ ರಥ, ಪೆಂಬೂರು ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಪಕ್ಷಾಂತರ ತಡೆಗೆ ಶೀಘ್ರವೇ ಇನ್ನಷ್ಟು ಕಠಿಣ ಕ್ರಮ ಜಾರಿ: ಸ್ಪೀಕರ್ ಖಾದರ್

**ಶಾಸಕರಿಗೆ ಸಚಿವ ಸ್ಥಾನ ಹಾಗೂ ಲಾಭದಾಯಕ ಹುದ್ದೆ ವಹಿಸುವುದರಿಂದ ಅನರ್ಹಗೊಳಿಸುವ ಬಗ್ಗೆ ಚರ್ಚೆ**

**ರಾಷ್ಟ್ರೀಯ ಮಟ್ಟದ ಸಮಿತಿಯಿಂದ ಜೂನ್‌ನಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾಗೆ ವರದಿ ಸಲ್ಲಿಕೆ**

ಬೆಂಗಳೂರು, ಮೇ 7: ಪಕ್ಷಗಳಿಂದ ಹೊರಹೋಗುವ ಅಥವಾ ಪಕ್ಷಾಂತರ ಮಾಡುವ ಶಾಸಕರ ವಿರುದ್ಧ ಶೀಘ್ರದಲ್ಲೇ ಇನ್ನಷ್ಟು ಕಠಿಣ ಕ್ರಮಗಳು ಜಾರಿಯಾಗುವ ಸಾಧ್ಯತೆ ಇದೆ. ಅವಿಶ್ವಾಸ ನಿರ್ಣಯದ ವೇಳೆ ಮತದಾನದ ಹಕ್ಕು ಕಳೆದುಕೊಳ್ಳುವುದು ಹಾಗೂ ಸಚಿವ ಸ್ಥಾನ ಸೇರಿದಂತೆ ಲಾಭದಾಯಕ ಸರ್ಕಾರಿ ಹುದ್ದೆಗಳನ್ನು ವಹಿಸುವುದರಿಂದ ಅನರ್ಹಗೊಳ್ಳುವಂತಹ ಶಿಕ್ಷೆಗಳು ವಿಧಿಸುವ ಬಗ್ಗೆ ರಾಷ್ಟ್ರೀಯ ಮಟ್ಟದ ಸಮಿತಿ ಚರ್ಚೆ ನಡೆಸುತ್ತಿದೆ. ಸಂವಿಧಾನದ 10ನೇ ಅನುಸೂಚನೆ (ಪಕ್ಷಾಂತರ ನಿಷೇಧ ಕಾನೂನು) ಕುರಿತ ಸುಧಾರಣೆಗಳನ್ನು ಪರಿಶೀಲಿಸುತ್ತಿರುವ ಸಮಿತಿ ಜೂನ್ ತಿಂಗಳಲ್ಲಿ ರಾಜ್ಯದಲ್ಲಿ ಅಂತಿಮ ಸಭೆ ನಡೆಸಿ ತನ್ನ ವರದಿಯನ್ನು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಸಲ್ಲಿಸಲಿದೆ ಎಂದು ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದ್ದಾರೆ.

ಈ ಸಮಿತಿಗೆ ರಾಹುಲ್ ನಾರ್ವೇಕರ್ ಅಧ್ಯಕ್ಷತೆ ವಹಿಸಿದ್ದು, ಪಕ್ಷಾಂತರ ನಿಷೇಧ ಕಾಯ್ದೆಯನ್ನು ಬಲಪಡಿಸಲು ಅಗತ್ಯ ಕ್ರಮಗಳನ್ನು ಶಿಫಾರಸು ಮಾಡಲು ಫೆಬ್ರವರಿಯಲ್ಲಿ ರಚಿಸಲಾಗಿತ್ತು. ಯು ಟಿ ಖಾದರ್ ಅವರೊಂದಿಗೆ ಸುರಮ ಪಾದಿ ಹಾಗೂ ಶರಿಂಗೈನ್ ಲಾಂಗ್ ಕುಮೇರ್ ಸಮಿತಿಯ ಸದಸ್ಯರಾಗಿದ್ದಾರೆ.

ಈ ಹಿಂದೆ ಮುಂಬೈ ಮತ್ತು ಪುರಿಯಲ್ಲಿ ನಡೆದ ಸಭೆಗಳಲ್ಲಿ ಪ್ರಮುಖವಾಗಿ ಚರ್ಚಿಸಲಾದ ಪ್ರಸ್ತಾವನೆಗಳಲ್ಲಿ, ಪಕ್ಷಾಂತರ ಮಾಡಿದ ಶಾಸಕರಿಗೆ ಅವಿಶ್ವಾಸ ನಿರ್ಣಯದ ವೇಳೆ ಮತದಾನದ ಹಕ್ಕು ನಿರಾಕರಿಸುವುದು ಪ್ರಮುಖವಾಗಿದೆ.



ರಾಜಕೀಯ ಪಕ್ಷಾಂತರಗಳ ಮೂಲಕ ಸರ್ಕಾರಗಳನ್ನು ಉರುಳಿಸುವ ಪ್ರಯತ್ನಗಳನ್ನು ತಡೆಯುವ ಉದ್ದೇಶ ಇದಾಗಿದೆ.ಇದರ ಜೊತೆಗೆ, ಪಕ್ಷಾಂತರ ಮಾಡಿದವರು ಹೊಸ ಸರ್ಕಾರದಲ್ಲಿ ಸಚಿವರಾಗುವುದು, ಮಂಡಳಿ ಮತ್ತು ನಿಗಮಗಳ ಅಧ್ಯಕ್ಷರಾಗುವುದು ಅಥವಾ ಯಾವುದೇ ಲಾಭದಾಯಕ ಹುದ್ದೆ ವಹಿಸುವುದನ್ನು ನಿಷೇಧಿಸುವ ಪ್ರಸ್ತಾವನೆಯೂ ಪರಿಗಣನೆಯಲ್ಲಿದೆ. ಇನ್ನೊಂದು ಮಹತ್ವದ ಸುಧಾರಣೆಯಾಗಿ, ಪಕ್ಷ ವಿಭಜನೆಯ ಸಂದರ್ಭದಲ್ಲಿ ನಿಜವಾದ ರಾಜಕೀಯ ಪಕ್ಷ ಯಾವುದು ಎಂಬ ವಿವಾದಗಳನ್ನು ತೀರ್ಮಾನಿಸಲು ಪ್ರತ್ಯೇಕ ನ್ಯಾಯಮಂಡಳಿ ರಚಿಸುವ ಕುರಿತು ಚರ್ಚೆ ನಡೆಯುತ್ತಿದೆ. ಇದರಿಂದ ವಿಧಾನಸಭಾಧ್ಯಕ್ಷರ ಮೇಲಿನ ಒತ್ತಡ ಕಡಿಮೆಯಾಗಲಿದೆ. ಶಾಸಕರಿಗೆ ಬಾಧ್ಯತೆಯ ನಿರ್ದೇಶನ ನೀಡುವಲ್ಲಿ ಪಕ್ಷದ ವಿಪ್ ಮತ್ತು ವಿಧಾನಮಂಡಲ ಪಕ್ಷದ ಮುಖ್ಯ ವಿಪ್‌ಗಳ ಅಧಿಕಾರದ ಬಗ್ಗೆ ಸ್ಪಷ್ಟತೆ ತರಬೇಕೆಂಬ ವಿಚಾರವನ್ನೂ ಸಮಿತಿ ಪರಿಶೀಲಿಸುತ್ತಿದೆ ಎಂದರು.

ಅನರ್ಹತಾ ಅರ್ಜಿಗಳ ತೀರ್ಮಾನದಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಲು, ಪಕ್ಷಾಂತರ ಮಾಡಿದ ಸದಸ್ಯರ ವಿರುದ್ಧದ ಅರ್ಜಿಗಳನ್ನು ತೀರ್ಮಾನಿಸಲು ಕಾನೂನುಬದ್ಧ ಸಮಯ ಮಿತಿಯನ್ನು ನಿಗದಿಪಡಿಸುವ ಸಾಧ್ಯತೆಯನ್ನೂ ಸಮಿತಿ ಪರಿಶೀಲಿಸುತ್ತಿದೆ. ಈ ಪ್ರಕ್ರಿಯೆ ವರ್ಷಗಳ ಕಾಲ ಸಾಗುತ್ತದೆ. ಇದನ್ನು ಮೂರರಿಂದ ಆರು ತಿಂಗಳೊಳಗೆ ಮುಗಿಸುವಂತೆ ನಿಗದಿ ಮಾಡಲು ಆಶಿಸುತ್ತಿದ್ದೇವೆ ಎಂದು ಯು.ಟಿ ಖಾದರ್ ಹೇಳಿದರು.

**ಮೇ 12, 13ರಂದು ಮೈಸೂರಿನಲ್ಲಿ ಸಭೆ**

ಉತ್ತರ ಪ್ರದೇಶ ವಿಧಾನಸಭಾಧ್ಯಕ್ಷರ ನೇತೃತ್ವದ ನಿಯಮಗಳು ಮತ್ತು ವಿಧಾನಗಳು ಕುರಿತ ಮತ್ತೊಂದು ಸಮಿತಿ ಮೇ 12 ಮತ್ತು 13ರಂದು ಮೈಸೂರಿನಲ್ಲಿ ಸಭೆ ನಡೆಸಲಿದೆ. ವಿವಿಧ ರಾಜ್ಯ ವಿಧಾನಸಭೆಗಳಲ್ಲಿ ಏಕರೂಪ ನಿಯಮಗಳನ್ನು ಜಾರಿಗೊಳಿಸುವ ಸಾಧ್ಯತೆಗಳನ್ನು ಈ ಸಮಿತಿ ಪರಿಶೀಲಿಸಲಿದೆ.ಈ ಸಮಿತಿಯಲ್ಲಿ ಹಿಮಾಚಲ ಪ್ರದೇಶ, ಕರ್ನಾಟಕ, ಮಹಾರಾಷ್ಟ್ರ, ನಾಗಾಲ್ಯಾಂಡ್ ಮತ್ತು ದೆಹಲಿ ವಿಧಾನಸಭಾಧ್ಯಕ್ಷರು ಸದಸ್ಯರಾಗಿದ್ದಾರೆ. ಪ್ರತಿ ರಾಜ್ಯದಲ್ಲೂ ವಿಭಿನ್ನ ನಿಯಮಗಳು ಮತ್ತು ವಿಧಾನಗಳಿದ್ದರೂ, ಸುಮಾರು 80 ಶೇಕಡಾ ನಿಯಮಗಳು ಒಂದೇ ರೀತಿಯವಾಗಿವೆ. ಉತ್ತಮ ಪದ್ಧತಿಗಳನ್ನು ಪರಿಶೀಲಿಸಿ ಸಾಮಾನ್ಯ ನಿಯಮಗಳು ಮತ್ತು ವಿಧಾನಗಳನ್ನು ಶಿಫಾರಸು ಮಾಡುತ್ತೇವೆ. ಆ ವರದಿಯನ್ನು ಆರು ತಿಂಗಳೊಳಗೆ ಸಲ್ಲಿಸಲಾಗುವುದು ಎಂದು ಯು.ಟಿ ಖಾದರ್ ತಿಳಿಸಿದರು.

# 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಶೀಘ್ರವೇ ಜಾಗ ಅಂತಿಮ

**ಮೈನ್ ಆರ್ಡೆಟ್-ಕೆಪಿಎಂಜಿಗೆ ಕಾರ್ಯಸಾಧ್ಯತಾ ವರದಿ ಸಿದ್ಧಪಡಿಸಲು ಗುತ್ತಿಗೆ: ಸಚಿವ ಎಂ.ಬಿ. ಪಾಟೀಲ್**



ಬೆಂಗಳೂರು, ಮೇ 7: ಬೆಂಗಳೂರಿನ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಕಾರ್ಯಸಾಧ್ಯತಾ ವರದಿಯನ್ನು ಸಿದ್ಧಪಡಿಸಲು ಜಾಗತಿಕ ಮಟ್ಟದ ಪರಿಣಿತ ಕಂಪೆನಿಯಾದ ಮೈನ್ ಆರ್ಡೆಟ್ – ಕೆಪಿಎಂಜಿಗೆ ಗುತ್ತಿಗೆ ನೀಡಲಾಗಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯದ ಒಟ್ಟಾರೆ ಹಿತವನ್ನು ಗಮನದಲ್ಲಿರಿಸಿಕೊಂಡು ಯಾವುದೇ ಒತ್ತಡಕ್ಕೂ ಮಣಿಯದೆ ಸೂಕ್ತಜಾಗವನ್ನು ಆಯ್ಕೆ ಮಾಡಲಾಗುವುದು. ದೇವನಹಳ್ಳಿ ಯಲ್ಲಿರುವ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಒತ್ತಡ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಎರಡನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ಮಾಣ ಮಾಡಲು ಕರ್ನಾಟಕ ಸರ್ಕಾರವು ಮುಂದಾಗಿದೆ. ಇದೀಗ ಹೊಸ ಏರ್‌ಪೋರ್ಟ್ ನಿರ್ಮಾಣಕ್ಕೆ ಶೀಘ್ರವೇ ಜಾಗ ಫೈನಲ್ ಆಗಲಿದೆ ಎಂದಿದ್ದಾರೆ.

ಬೆಂಗಳೂರಿನ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಮೂರು ಜಾಗಗಳನ್ನು ಫೈನಲ್ ಮಾಡಲಾಗಿದೆ. ಚೂಡಹಳ್ಳಿ, ಕನಕಪುರ ರಸ್ತೆ ಹಾಗೂ ನೆಲಮಂಗಲ ಇದರಲ್ಲಿ ಪ್ರಮುಖವಾಗಿದೆ. ಬೆಂಗಳೂರಿನ ದಕ್ಷಿಣ ಭಾಗದಲ್ಲೇ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಆಗಲಿದೆ ಎಂದು ಈಚೆಗೆ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ ಶಿವಕುಮಾರ್ ಹೇಳಿದ್ದರು. ಇದೀಗ ಬೆಂಗಳೂರು ನಗರದ 2ನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಯಾವ ಜಾಗ ಸೂಕ್ತ ಎನ್ನುವುದಕ್ಕೆ ಸಂಬಂಧಿಸಿದಂತೆ ಸಿಂಗಾಪುರ ಮೂಲದ ಸಂಸ್ಥೆಯಿಂದ ಕಾರ್ಯ ಸಾಧ್ಯತಾ ವರದಿ ಸಲ್ಲಿಕೆಯಾಗಿದೆ. ಇನ್ನು 3 ತಿಂಗಳಲ್ಲಿ ಬೆಂಗಳೂರು ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದ ಜಾಗ ಫೈನಲ್ ಆಗಲಿದೆ. ಉದ್ದೇಶಿತ ಮೂರು ಜಾಗಗಳ ತಾಂತ್ರಿಕ ಮತ್ತು ಆರ್ಥಿಕ ಕಾರ್ಯಸಾಧ್ಯತೆ ಅಧ್ಯಯನ ವರದಿ ಸಲ್ಲಿಸುವುದಕ್ಕೆ ಸಂಬಂಧಿಸಿದಂತೆ ಸಿಂಗಾಪುರ ಮೂಲದ ಸಂಸ್ಥೆಗೆ ಜವಾಬ್ದಾರಿ ನೀಡಲಾಗಿದೆ.

ಬೆಂಗಳೂರಿನ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದ ವಿಷಯ ಚರ್ಚೆಯ ಮುನ್ನೆಲೆಗೆ ಬಂದಾಗಿನಿಂದಲೂ ದಕ್ಷಿಣ ಬೆಂಗಳೂರಿನ ಹೆಸರು ಮುಂಚೂಣಿಯಲ್ಲಿದೆ. ಕನಕಪುರ ರಸ್ತೆ – ಬೆಂಗಳೂರು ದಕ್ಷಿಣ ಭಾಗವು ಹೆಚ್ಚು ಚರ್ಚೆಯಲ್ಲಿದೆ. ದಕ್ಷಿಣ ಭಾಗದಲ್ಲಿ ಪ್ರಯಾಣಿಕರ ಸಂಖ್ಯೆ ಹಾಗೂ ಸರಕು ಸಾಗಣೆಯ ಬೇಡಿಕೆ ಹೆಚ್ಚಾಗಿರುವುದರಿಂದಾಗಿ ಹೆಚ್ಚು ಮನ್ನಣೆ ಇದೆ. ಅಲ್ಲದೆ ಉತ್ತರ ಬೆಂಗಳೂರಿನಲ್ಲಿ ದೇವನಹಳ್ಳಿಯಲ್ಲಿ ಈಗಾಗಲೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವಿದೆ ಎನ್ನುವ ವಾದವೂ ಇದೆ.

# ವಾಣಿಜ್ಯ ಲಾಭಕ್ಕಾಗಿ ಐಪಿಎಲ್ ಪಂದ್ಯ ಅಹಮದಾಬಾದ್‌ಗೆ ಸ್ಥಳಾಂತರ

**ಬಿಸಿಸಿಐ ನಿಯಮಾವಳಿಯಲ್ಲಿ ಮಾರ್ಪಾಡು: ಗೃಹ ಸಚಿವ ಡಾ.ಜಿ. ಪರಮೇಶ್ವರ್**



ಬೆಂಗಳೂರು, ಮೇ 7: ಬೆಂಗಳೂರಿನಿಂದ ಐಪಿಎಲ್ ಪಂದ್ಯಾವಳಿ ಅಹಮದಾಬಾದ್‌ಗೆ ಸ್ಥಳಾಂತರಗೊಳ್ಳಲು ವಾಣಿಜ್ಯ ಲಾಭದ ಕಾರಣ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಭದ್ರತೆ ವಿಚಾರವಾಗಿ ಯಾವುದೇ ಆಕ್ಷೇಪಣೆಗಳಿಲ್ಲ. ಈಗಾಗಲೇ ನಡೆದ 5 ಪಂದ್ಯಗಳಿಗೆ ಭದ್ರತೆ ಸೇರಿದಂತೆ ಎಲ್ಲಾ ರೀತಿಯ ವ್ಯವಸ್ಥೆಗಳನ್ನು ಮಾಡಲಾಗಿದೆ. ಐಪಿಎಲ್, ಆರ್‌ಸಿಬಿ ಕರ್ನಾಟಕ ಕ್ರಿಕೆಟ್ ಸಂಸ್ಥೆ ಸೇರಿ ಯಾವುದೇ ಸಂಸ್ಥೆ ಭದ್ರತೆಗೆ ಸಂಬಂಧಪಟ್ಟಂತೆ ಆಕ್ಷೇಪಣೆ ವ್ಯಕ್ತಪಡಿಸಿಲ್ಲ ಎಂದರು.

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ 33 ಸಾವಿರ ಆಸನ ವ್ಯವಸ್ಥೆಗಳಿವೆ. ಅದರಲ್ಲಿ ಅತೀ ಗಣ್ಯರು, ಪ್ರಾಯೋಜಕತ್ವದ ಸಂಸ್ಥೆಗಳ ಪ್ರತಿನಿಧಿಗಳು ಮತ್ತು ಆಟಗಾರರ ಕುಟುಂಬ ಸೇರಿ ಸುಮಾರು 7ರಿಂದ 8 ಸಾವಿರ ಟಿಕೆಟ್‌ಗಳನ್ನು ಉಚಿತವಾಗಿ ಕೊಡಬೇಕಾಗುತ್ತದೆ. 25 ಸಾವಿರ ಟಿಕೆಟ್‌ಗಳು ಉಳಿಯುತ್ತಿದ್ದು, ವಾಣಿಜ್ಯೋದ್ದೇಶದಿಂದ ಇದು ಲಾಭವಾಗುವುದಿಲ್ಲ. ಅಹಮದಾಬಾದ್ ಕ್ರೀಡಾಂಗಣದಲ್ಲಿ ಒಂದು ಲಕ್ಷ ಆಸನ ವ್ಯವಸ್ಥೆ ಇದೆ. ಅಲ್ಲಿ ಪಂದ್ಯಾವಳಿ ನಡೆದರೆ ಲಾಭದಾಯಕ ಎಂಬ ಕಾರಣಕ್ಕೆ ಸ್ಥಳಾಂತರ ಮಾಡುತ್ತಿರುವುದಾಗಿ ಅನಧಿಕೃತವಾಗಿ ತಿಳಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಹಿಂದಿನ ಸರಣಿಯಲ್ಲಿ ಗೆದ್ದ ತಂಡದ ತವರಿನಲ್ಲಿ ಮೊದಲ ಹಾಗೂ ಪ್ರಸ್ತುತ ಸರಣಿಯಲ್ಲಿ ಫೈನಲ್‌ಗೆ ಬಂದ ತಂಡಕ್ಕೆ ಸೇರಿದ ಊರಿನಲ್ಲಿ ಕೊನೆಯ ಪಂದ್ಯಾವಳಿ ಆಯೋಜಿಸುವುದು ಬಿಸಿಸಿಐನ ನಿಯಮಾವಳಿಯಲ್ಲಿದೆ. ಆದರೆ ಈ ಬಾರಿ ಅದನ್ನು ಲಾಭದ ಕಾರಣಕ್ಕಾಗಿ ಮಾರ್ಪಾಡು ಮಾಡಿಕೊಂಡಿದ್ದಾರೆ ಎಂದರು.

**ಬಿಜೆಪಿಯವರು ಎಷ್ಟು ಜನರ ಬೆನ್ನಿಗೆ ಚೂರಿ ಹಾಕಿದ್ದಾರೆ?**

ಬಿಜೆಪಿಯವರು ಎಷ್ಟು ಜನರ ಬೆನ್ನಿಗೆ ಚೂರಿ ಹಾಕಿದ್ದಾರೆ ಎಂಬುದನ್ನು ಹೇಳದೆ, ಜಾಣ ಕುರುಡರಂತೆ ವರ್ತಿಸಿ ಕಾಂಗ್ರೆಸ್ ಬಗ್ಗೆ ಟೀಕೆ ಮಾಡುತ್ತಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆರೋಪಿಸಿದ್ದಾರೆ. ತಮಿಳುನಾಡಿನಲ್ಲಿ ಜನಪರ ಸರ್ಕಾರ ರಚನೆಯಾಗಲು ಟಿವಿಕೆಗೆ ಬೆಂಬಲ ನೀಡುತ್ತಿದ್ದೇವೆ. ಇದು ರಾಜಕೀಯ ಸಾಧ್ಯತೆಗಳ ಕಲೆ ಎಂದು ಹೇಳಿದರು.

**ರಾಮಚಂದ್ರರಾವ್ ಅಮಾನತು ವಾಪಸಾತಿಗೆ ಸಮರ್ಥನೆ**

ಡಿಜಿಪಿ ರಾಮಚಂದ್ರ ರಾವ್ ಅಮಾನತು ಹಿಂಪಡೆದಿರುವುದನ್ನು ಪರಮೇಶ್ವರ್ ಸಮರ್ಥಿಸಿಕೊಂಡರು. ಇಲ್ಲಿ ಸರಿ–ತಪ್ಪುಗಳ ವಿಚಾರ ಪ್ರಮುಖ ಅಲ್ಲ. ರಾಮಚಂದ್ರ ರಾವ್ ಈ ತಿಂಗಳ ಕೊನೆಯಲ್ಲಿ ನಿವೃತ್ತರಾಗುತ್ತಿದ್ದಾರೆ. ಅವರಿಗೆ ಪಿಂಚಣಿ ಹಾಗೂ ಇತರ ಭತ್ಯೆಗಳು ಇತ್ಯರ್ಥವಾಗಬೇಕಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿರುವ ರಾಮಚಂದ್ರರಾವ್ ಮನವಿ ಮಾಡಿದ್ದರು. ತನಿಖೆಗೆ ತಾವು ಸಹಕರಿಸುತ್ತೇನೆ. ಅದರಲ್ಲಿ ಯಾವುದೇ ರೀತಿಯ ಅಭಿಪ್ರಾಯ ಬಂದರೂ ಅದನ್ನು ಒಪ್ಪಿಕೊಳ್ಳುವುದಾಗಿ ಭರವಸೆ ನೀಡಿದ್ದಾರೆ. ಹೀಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅನುಮತಿಯೊಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಅಮಾನತ್ತನ್ನು ಹಿಂಪಡೆದಿದೆ ಎಂದು ತಿಳಿಸಿದರು.



ಉಪಚುನಾವಣೆಯಲ್ಲಿ ದಾವಣಗೆರೆ ದಕ್ಷಿಣ ಕ್ಷೇತ್ರದಿಂದ ಆಯ್ಕೆಯಾದ ಶಾಸಕ ಸಮರ್ಥ ಶಾಮನೂರು ಗುರುವಾರ ಬೆಂಗಳೂರಿನ ವಿಧಾನಸೌಧಕ್ಕೆ ಆಗಮಿಸಿದ್ದರು. ಅವರ ತಂದೆ ಎಸ್‌ಎಸ್ ಮಲ್ಲಿಕಾರ್ಜುನ (ತೋಟಗಾರಿಕೆ ಸಚಿವರು) ಮತ್ತು ತಾಯಿ ಪ್ರಭಾ ಮಲ್ಲಿಕಾರ್ಜುನ (ದಾವಣಗೆರೆ ಸಂಸದೆ) ಅವರೂ ಜೊತೆಯಲ್ಲಿದ್ದರು.

# ರಾಜ್ಯಗಳ ಹಕ್ಕು, ಬಂಡವಾಳ ವ್ಯವಸ್ಥಿತವಾಗಿ ಗುಜರಾತ್‌ಗೆ ಹೈಜಾಕ್

**ಐಪಿಎಲ್ ಪಂದ್ಯಗಳ ಸ್ಥಳಾಂತರಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯೆ**



ಬೆಂಗಳೂರು, ಮೇ 7: ಕೇಂದ್ರದ ಬಿಜೆಪಿ ಸರ್ಕಾರವು ರಾಜ್ಯಗಳ ಹಕ್ಕುಗಳನ್ನು ಮತ್ತು ಬಂಡವಾಳವನ್ನು ವ್ಯವಸ್ಥಿತವಾಗಿ ಗುಜರಾತ್‌ಗೆ ಹೈಜಾಕ್ ಮಾಡುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಗಂಭೀರ ಆರೋಪ ಮಾಡಿದ್ದಾರೆ.

ಬೆಂಗಳೂರಿನಲ್ಲಿ ನಡೆಯಬೇಕಿದ್ದ ಐಪಿಎಲ್ ಪಂದ್ಯಗಳನ್ನು ಗುಜರಾತ್‌ಗೆ ಸ್ಥಳಾಂತರಿಸಿದ ವಿಚಾರವಾಗಿ ಮಾತನಾಡಿದ ಅವರು, ಬಿಜೆಪಿ ಸರ್ಕಾರಕ್ಕೆ ಎಲ್ಲವನ್ನೂ ಗುಜರಾತ್‌ಗೆ ಕೊಂಡೊಯ್ಯುವ ಹಪಾಹಪಿ ಇದೆ. ಐಪಿಎಲ್ ಮಾತ್ರವಲ್ಲ, ದೊಡ್ಡ ದೊಡ್ಡ ಬಂಡವಾಳಗಳು ಮತ್ತು ಸೆಮಿಕಂಡಕ್ಟರ್ ಯೋಜನೆಗಳು ಕೂಡ ಅಲ್ಲಿಗೆ ಹೋಗುತ್ತಿವೆ. ಬಿಸಿಸಿಐ ಮತ್ತು ಐಸಿಸಿಯಲ್ಲಿ ಜೈ ಶಾ ಇರುವುದರಿಂದ ಅವರಿಗೆ ಮನಸ್ಸಿಗೆ ಬಂದಂತೆ ಮಾಡುತ್ತಿದ್ದಾರೆ. ಕಂಪನಿಗಳು ತಮ್ಮ ಮೊದಲ ಆಯ್ಕೆ ಕರ್ನಾಟಕ ಅಥವಾ ತಮಿಳುನಾಡು ಎಂದು ಅರ್ಜಿ ಸಲ್ಲಿಸಿದರೂ, ಅಂತಿಮವಾಗಿ ಯೋಜನೆಗಳು ಗುಜರಾತ್ ಅಥವಾ ಅಸ್ಸಾಂಗೆ ಹೋಗುತ್ತಿವೆ. ಇದು ಹೈಜಾಕ್ ರಾಜಕಾರಣವಲ್ಲದೆ ಇನ್ನೇನು ಎಂದು ಪ್ರಶ್ನಿಸಿದ್ದಾರೆ.

ಎಲ್‌ಪಿಜಿ ಗ್ಯಾಸ್ ದರ ಏರಿಕೆಯ ಬಗ್ಗೆ ಬಿಜೆಪಿ ನಾಯಕರು ಮೌನ ವಹಿಸಿರುವುದನ್ನು ಖಂಡಿಸಿದ ಸಚಿವರು, ಬಿಜೆಪಿ ನಾಯಕರು ಎಂತಹ ಹೇಡಿಗಳು ಎಂಬುದು ಅವರ ಮೌನದಲ್ಲೇ ಅರ್ಥವಾಗುತ್ತದೆ. ಕಳೆದ ಹತ್ತು ವರ್ಷಗಳಿಂದ ದೇಶದಲ್ಲಿ ನಿರುದ್ಯೋಗ, ಬೆಲೆ ಏರಿಕೆ ಮತ್ತು ಆರ್ಥಿಕ ಸಮಸ್ಯೆಗಳೇ ಇಲ್ಲ ಎಂಬಂತೆ ಬಿಂಬಿಸುತ್ತಿದ್ದಾರೆ. ಪ್ರಪಂಚದ ಯಾವುದೇ ಹಸಿವು ಅಥವಾ ಬಡತನದ ಸೂಚ್ಯಂಕ ತೆಗೆದು ನೋಡಿ, ಭಾರತ ಎಲ್ಲಿದೆ ಎಂಬುದು ಗೊತ್ತಾಗುತ್ತದೆ. ಪ್ರಧಾನಿ 13 ವರ್ಷಗಳಿಂದ ಒಂದೇ ಒಂದು ಸುದ್ದಿಗೋಷ್ಠಿ ಮಾಡಿಲ್ಲ. ಪ್ರಶ್ನೆ ಕೇಳಿದರೆ ಧರ್ಮ ಮತ್ತು ಮೀಸಲಾತಿಯ ನಶೆ ಏರಿಸುವ ಕೆಲಸ ಮಾಡುತ್ತಾರೆ ಎಂದು ಕಿಡಿಕಾರಿದ್ದಾರೆ.

**ಟಿವಿಕೆಗೆ ಬೆಂಬಲ ನೀಡಿದ್ದಕ್ಕೆ ಸಮರ್ಥನೆ**

ತಮಿಳುನಾಡಿನಲ್ಲಿ ವಿಜಯ್ ಅವರ 'ಟಿವಿಕೆ' ಪಕ್ಷದೊಂದಿಗೆ ಕಾಂಗ್ರೆಸ್ ಮೈತ್ರಿ ಮಾಡಿಕೊಂಡಿರುವ ಬಗ್ಗೆ ಸಮರ್ಥಿಸಿಕೊಂಡ ಸಚಿವರು, "ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಲು ಹೈಕಮಾಂಡ್ ಈ ನಿರ್ಧಾರ ತಗೊಂಡಿದೆ. ಡಿಎಂಕೆ ಜೊತೆಗೂ ನಮ್ಮ ಸಿದ್ಧಾಂತ ಒಂದೇ ಆಗಿದೆ. ಅನಿವಾರ್ಯ ಪರಿಸ್ಥಿತಿಯಲ್ಲಿ ಇಂತಹ ತೀರ್ಮಾನಗಳು ಬೇಕಾಗುತ್ತವೆ" ಎಂದು ಸ್ಪಷ್ಟಪಡಿಸಿದರು. ಇನ್ನು ಕೇರಳದಲ್ಲಿ ಕಾಂಗ್ರೆಸ್ ಮುಖ್ಯಮಂತ್ರಿ ಆಯ್ಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಶಾಸಕರ ಅಭಿಪ್ರಾಯ ಪಡೆದು ಹೈಕಮಾಂಡ್ ಅಂತಿಮ ತೀರ್ಮಾನ ತೆಗೆದುಕೊಳ್ಳಲಿದೆ ಎಂದರು.

# ಕುಡಿಯುವ ನೀರು, ಕೆರೆಗಳನ್ನು ತುಂಬಿಸುವ ಯೋಜನೆಗಳಿಗೆ ಮೊದಲ ಆದ್ಯತೆ: ಸಂಸದ ಡಾ.ಸಿ.ಎನ್.ಮಂಜುನಾಥ್ ಅಭಿಮತ



ರಾಮನಗರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ 2025–26ನೇ ಸಾಲಿನ 4ನೇ ತ್ರೈಮಾಸಿಕ ದಿಶಾ ಪ್ರಗತಿ ಪರಿಶೀಲನಾ ಸಭೆಯು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ. ಸಿ.ಎನ್.ಮಂಜುನಾಥ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಜಿಲ್ಲೆಯಲ್ಲಿ ಜಾರಿಯಲ್ಲಿರುವ ವಿವಿಧ ಕೇಂದ್ರ ಸರ್ಕಾರದ ಜನಪರ ಯೋಜನೆಗಳು, ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳು ಹಾಗೂ ಸಾರ್ವಜನಿಕ ಕಲ್ಯಾಣ ಕಾರ್ಯಕ್ರಮಗಳ ಪ್ರಗತಿ ಕುರಿತು ಇಲಾಖಾವಾರು ಸಮಗ್ರ ಪರಿಶೀಲನೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ಸಂಸದರು, ಸರ್ಕಾರದ ಯೋಜನೆಗಳು ಕಾಗದಗಳಲ್ಲೇ ಸೀಮಿತವಾಗದೇ ನಿಜವಾದ ಫಲಾನುಭವಿಗಳ ಮನೆಬಾಗಿಲಿಗೆ ತಲುಪಬೇಕು. ಜನರ ನಿರೀಕ್ಷೆಗೆ ತಕ್ಕಂತೆ ಅಧಿಕಾರಿಗಳು ಜವಾಬ್ದಾರಿತನ, ಪಾರದರ್ಶಕತೆ ಹಾಗೂ ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಅಭಿವೃದ್ಧಿ ಕಾರ್ಯಗಳಲ್ಲಿ ವಿಳಂಬಕ್ಕೆ ಅವಕಾಶ ಇರಬಾರದು. ಪ್ರತಿಯೊಂದು ಯೋಜನೆಯೂ ಗುಣಮಟ್ಟದೊಂದಿಗೆ, ನಿಗದಿತ ಅವಧಿಯೊಳಗೆ ಪೂರ್ಣಗೊಳ್ಳಬೇಕು, ಎಂದು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.

ಅದೇ ವೇಳೆ ಕುಡಿಯುವ ನೀರಿನ ಸಮಸ್ಯೆ ಪರಿಹಾರ ಹಾಗೂ ಕೆರೆಗಳನ್ನು ತುಂಬಿಸುವ ಕಾರ್ಯಗಳಿಗೆ ಮೊದಲ ಆದ್ಯತೆ ನೀಡಬೇಕು ಎಂದು ಸಂಸದ ಡಾ. ಸಿ. ಎನ್. ಮಂಜುನಾಥ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ, ಜನರ ಮೂಲಭೂತ ಅಗತ್ಯಗಳಿಗೆ ಸ್ಪಂದಿಸುವ ಕಾರ್ಯಗಳು ತ್ವರಿತವಾಗಿ ಜಾರಿಯಾಗಬೇಕೆಂದು ಸೂಚಿಸಿದರು.

ಹಾಗೂ ಸಾರ್ವಜನಿಕರ ಸಮಸ್ಯೆಗಳು ಮತ್ತು ಕುಂದುಕೊರತೆಗಳಿಗೆ ತ್ವರಿತ ಸ್ಪಂದನೆ ನೀಡುವ ಮೂಲಕ ಆಡಳಿತ ವ್ಯವಸ್ಥೆಯ ಮೇಲೆ ಜನರಲ್ಲಿ ಮತ್ತಷ್ಟು ವಿಶ್ವಾಸ ಮೂಡಿಸುವಂತೆ ಮಾರ್ಗದರ್ಶನ ನೀಡಿದರು.


ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸರ್ಕಾರದ ಕಾರ್ಯದರ್ಶಿಗಳು, ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳು, ದಿಶಾ ಸಮಿತಿ ಸದಸ್ಯರು ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೆಣ್ಣುಮಕ್ಕಳ ಮಾನಕ್ಕಿಂತಲೂ ಭ್ರಷ್ಟ ಅಧಿಕಾರಿಗಳ ರಕ್ಷಣೆಯೇ ಕಾಂಗ್ರೆಸ್‌ಗೆ ಮುಖ್ಯವಾಯಿತೇ: ಸರ್ಕಾರಕ್ಕೆ ಅಶೋಕ್ ಪ್ರಶ್ನೆ

ಬೆಂಗಳೂರು, ಮೇ 7: ಲೈಂಗಿಕ ಹಗರಣದ ವಿಡಿಯೋ ಅಸಲಿ ಎಂದು ವರದಿ ಬಂದಿದ್ದರೂ, ಕಾಮುಕ ಅಧಿಕಾರಿಯನ್ನು ರಕ್ಷಿಸುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ನ್ಯಾಯದ ಮೇಲೆ ನಂಬಿಕೆ ಇಲ್ಲದಂತಾಗಿದೆ. ಪೊಲೀಸ್ ಮಹಾನಿರ್ದೇಶಕ ಶ್ರೇಣಿಯ ಅಧಿಕಾರಿಯೊಬ್ಬರ ಮೇಲೆ ಲೈಂಗಿಕ ದೌರ್ಜನ್ಯದ ಆರೋಪ ಕೇಳಿಬಂದಾಗ, ಅದನ್ನು ಗಂಭೀರವಾಗಿ ಪರಿಗಣಿಸಬೇಕಾದ ರಾಜ್ಯ ಸರ್ಕಾರ, ಇಂದು ಅವರ ಅಮಾನತು ಆದೇಶವನ್ನೇ ಹಿಂಪಡೆದು ಅದ್ದೂರಿ ಸ್ವಾಗತ ನೀಡಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ನಿಮ್ಮ ಸರ್ಕಾರದ ಈ ನಡೆಯ ಹಿಂದಿನ ಮರ್ಮವೇನು? ಸಾಕ್ಷಿ ಇದ್ದರೂ ಸಲಾಮು ಹೊಡೆಯುತಿರುವುದೇಕೆ? ವಿಡಿಯೋ ಅಸಲಿ ಎಂದು ತಮ್ಮ ಸರ್ಕಾರವೇ ನೇಮಿಸಿದ ಸಮಿತಿ ವರದಿ ನೀಡಿದ ಮೇಲೂ ಆರೋಪಿತ ಅಧಿಕಾರಿಗೆ ಕ್ಲೀನ್ ಚಿಟ್ ಕೊಡುವ ಧಾವಂತವೇಕೆ, ಕಾನೂನಿಗಿಂತ ವ್ಯಕ್ತಿ ದೊಡ್ಡವರೇ, ನಿವೃತ್ತಿಯ ಹೊಸ್ತಿಲಲ್ಲಿರುವ ಅಧಿಕಾರಿಗೆ ಇಷ್ಟು ಆತುರವಾಗಿ 'ರಿಲೀಫ್' ನೀಡುವ ಮೂಲಕ ನೀವು ಸಂತ್ರಸ್ತ ಮಹಿಳೆಯರಿಗೆ ಯಾವ ಸಂದೇಶ ನೀಡುತ್ತಿದ್ದೀರಿ. ಇದೇನಾ ಕಾಂಗ್ರೆಸ್ ಪಕ್ಷದ ನೈತಿಕತೆ. ಮಹಿಳಾ ಸಬಲೀಕರಣದ ಬಗ್ಗೆ ಗಂಟೆಗಟ್ಟಲೆ ಭಾಷಣ ಮಾಡುವ ನಿಮ್ಮ ಕಾಂಗ್ರೆಸ್‌ಎ ನಾಯಕರಿಗೆ, ಈ ನಿರ್ಧಾರದಿಂದ ಮಹಿಳೆಯರಿಗೆ ಮಾಡುತ್ತಿರುವ ಅವಮಾನ ಕಾಣುತ್ತಿಲ್ಲವೇ. ಒಬ್ಬ ಅಧಿಕಾರಿಯನ್ನ ರಕ್ಷಿಸಲು ಕಾನೂನನ್ನೇ ಗಾಳಿಗೆ ತೂರುತ್ತಿರುವ ಈ ಸರ್ಕಾರಕ್ಕೆ ಜನತೆ ತಕ್ಕ ಪಾಠ ಕಲಿಸಲಿದ್ದಾರೆ. ಕಾಮುಕರಿಗೆ ರಕ್ಷಣೆ ನೀಡುವ ಈ ವಿಕೃತ ಮನಸ್ಥಿತಿಯನ್ನು ಕರ್ನಾಟಕದ ಜನತೆ ಕ್ಷಮಿಸುವುದಿಲ್ಲ. ಅಧಿಕಾರಕ್ಕೆ ಕುತ್ತು ಬರುವ ಭಯವೋ ಅಥವಾ ಒಳಗುಟ್ಟಿನ ರಕ್ಷಣೆಯೋ ಕಾಂಗ್ರೆಸ್ ಸರ್ಕಾರ ಉತ್ತರ ನೀಡಲಿ ಎಂದು ಆರ್. ಅಶೋಕ್ ಆಗ್ರಹಿಸಿದ್ದಾರೆ.

# ಚುನಾವಣಾ ರಾಜಕೀಯದಿಂದ ಎಚ್.ವಿಶ್ವನಾಥ್ ನಿವೃತ್ತಿ ಘೋಷಣೆ



ಬೆಂಗಳೂರು, ಮೇ 7: ಕರ್ನಾಟಕ ರಾಜಕೀಯದ ಹಿರಿಯ ಮುತ್ಸದ್ದಿ, 'ಹಳ್ಳಿಹಕ್ಕಿ' ಎಂದೇ ಖ್ಯಾತರಾಗಿರುವ ಬಿಜೆಪಿ ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ಅವರು ಚುನಾವಣಾ ರಾಜಕೀಯದಿಂದ ನಿವೃತ್ತಿ ಘೋಷಿಸಿದ್ದಾರೆ.

ಗುರುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಮಹತ್ವದ ನಿರ್ಧಾರವನ್ನು ಪ್ರಕಟಿಸಿದ್ದಾರೆ. ಮುಂಬರುವ ಯಾವುದೇ ರೀತಿಯ ಚುನಾವಣೆಗಳಲ್ಲಿ ಸ್ಪರ್ಧಿಸುವುದಿಲ್ಲ ಎಂದು ಎಚ್.ವಿಶ್ವನಾಥ್ ಸ್ಪಷ್ಟಪಡಿಸಿದ್ದಾರೆ. ಈ ಮೂಲಕ ಸುದೀರ್ಘ ಕಾಲದ ಚುನಾವಣಾ ಪಯಣಕ್ಕೆ ತೆರೆ ಎಳೆದಿದ್ದಾರೆ. ರಾಜಕೀಯದಲ್ಲಿ ಮುಂದುವರೆಯುತ್ತೇನೆ, ಆದರೆ ಚುನಾವಣೆಗೆ ಸ್ಪರ್ಧಿಸುವುದಿಲ್ಲ. ನನ್ನ ಮಕ್ಕಳು ಕೂಡ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ವಿಶ್ವನಾಥ್ ಹೇಳಿದ್ದಾರೆ.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವ ಆಚರಣೆಯ ಕುರಿತು ವಿಶ್ವನಾಥ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬಿಎಸ್‌ವೈ ಅವರು ಪ್ರಸ್ತುತ ಪೋಕ್ಸೋ ಪ್ರಕರಣದ ಗಂಭೀರ ಆರೋಪ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಅಭಿಮಾನೋತ್ಸವ ಮಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದ್ದಾರೆ. ಪೋಕ್ಸೋ ಪ್ರಕರಣ ಮತ್ತು ಈ ಹೊತ್ತಿನಲ್ಲಿ ನಡೆಯುತ್ತಿರುವ ಅಭಿಮಾನೋತ್ಸವ ಎರಡೂ ರಾಜ್ಯದ ಘನತೆಗೆ ಕಪ್ಪುಚುಕ್ಕೆಯಾಗಿ ಪರಿಣಮಿಸಿವೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ವಕೀಲರಾಗಿರುವ ಸಿಎಂ ಸಿದ್ದರಾಮಯ್ಯ ಅವರಿಗೆ ಇದೆಲ್ಲಾ ಗೊತ್ತಿಲ್ಲವೇ ಎಂದು ಪ್ರಶ್ನಿಸುವ ಮೂಲಕ ಸರ್ಕಾರದ ನಡೆಯನ್ನೂ ಟೀಕಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 8, 2026, ಶುಕ್ರವಾರ

## ಒಳಪುಟಗಳಲ್ಲಿ

ಕ್ರೀಡಾ ಸಾಧಕರಿಗೆ ಶೇ.2ರಷ್ಟು ಮೀಸಲಾತಿ, ರಾಜ್ಯದಲ್ಲಿ ಪ್ರತ್ಯೇಕ ಶಿಕ್ಷಣ ನೀತಿ ಜಾರಿಗೆ ಸಚಿವ ಸಂಪುಟ ಅನುಮೋದನೆ- ಪು.5

# ಬಿಹಾರದಲ್ಲಿ ಹೊಸ ರಾಜಕೀಯ ಪರ್ವ ಶುರು

## ನಿತೀಶ್ ಕುಮಾರ್ ಪುತ್ರ ಸೇರಿ 31 ಮಂದಿ ಸಚಿವರಾಗಿ ಪ್ರಮಾಣ ಸ್ವೀಕಾರ

**ಪಟನಾ, ಮೇ 7: ಬಿಹಾರ ರಾಜಕೀಯದಲ್ಲಿ ಹೊಸ ಪರ್ವ ಆರಂಭವಾಗಿದೆ. ಸಾಮ್ರಾಟ್ ಚೌಧರಿ ನೇತೃತ್ವದ ಬಿಜೆಪಿ–ಎನ್‌ಡಿಎ ಸರ್ಕಾರವು ನೂತನ ಸಂಪುಟ ವಿಸ್ತರಿಸಿದ್ದು, 31 ಎನ್‌ಡಿಎ ನಾಯಕರು ಸಚಿವರಾಗಿ ಪ್ರಮಾಣವಚನ ಸ್ವೀಕಾರ ಮಾಡಿದ್ದಾರೆ.**




ಮಾಜಿ ಸಿಎಂ ನಿತೀಶ್ ಕುಮಾರ್ ಪುತ್ರ ನಿಶಾಂತ್ ಕುಮಾರ್, ಬಿಜೆಪಿ, ಜೆಡಿಯು, ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಅವರ ಲೋಕ ಜನಶಕ್ತಿ ಪಕ್ಷ (ರಾಮ್ ವಿಲಾಸ್) ಮತ್ತು ಕೇಂದ್ರ ಸಚಿವ ಜಿತನ್ ರಾಮ್ ಮಾಂಝಿ ನೇತೃತ್ವದ ಹಿಂದೂಸ್ತಾನಿ ಅವಾಮ್ ಮೋರ್ಚಾ (ಜಾತ್ಯತೀತ) ದ 31 ನಾಯಕರೊಂದಿಗೆ ಇಂದು ಸಚಿವದಾಗಿ ಪದಗ್ರಹಣ ಮಾಡಿದ್ದಾರೆ. ರಾಜ್ಯಪಾಲ ಲೆಫ್ಟಿನೆಂಟ್ ಜನರಲ್ (ನಿವೃತ್ತ) ಸೈಯದ್ ಅತಾ ಹಸ್ನೈನ್ ಅವರು ಪ್ರಮಾಣ ವಚನ ಬೋಧಿಸಿದ್ದಾರೆ.

ಈ ಐತಿಹಾಸಿಕ ಕ್ಷಣಕ್ಕೆ ಪ್ರಧಾನಿ ನರೇಂದ್ರ ಮೋದಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ನಿತೀಶ್ ಕುಮಾರ್ ಸಾಕ್ಷಿಯಾದರು. ಎನ್‌ಡಿಎ ಮೈತ್ರಿಕೂಟದ ಪ್ರಮುಖ ನಾಯಕರೆಲ್ಲರೂ ಒಂದೇ ವೇದಿಕೆಯಲ್ಲಿ ಕಾಣಿಸಿಕೊಳ್ಳುವ ಮೂಲಕ ಮುಂಬರುವ ಚುನಾವಣೆಗೆ ತಮ್ಮ ಒಗ್ಗಟ್ಟಿನ ಸಂದೇಶ ರವಾನಿಸಿದರು.

ನೂತನ ಸಂಪುಟದಲ್ಲಿ ಅನುಭವ ಮತ್ತು ಯುವ ಉತ್ಸಾಹಕ್ಕೆ ಆದ್ಯತೆ ನೀಡಲಾಗಿದೆ. ನಿಶಾಂತ್ ಕುಮಾರ್ ಸಂಪುಟ ಸೇರಿರುವುದು ಬಿಹಾರ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ಜಿ ಉಪಮುಖ್ಯಮಂತ್ರಿ ವಿಜಯ್ ಕುಮಾರ್ ಸಿನ್ಹಾ, ಅನುಭವಿಗಳಾದ ಶ್ರಾವಣ್ ಕುಮಾರ್ ಮತ್ತು ಅಶೋಕ್ ಚೌಧರಿ ಅವರು ಮತ್ತೆ ಸಂಪುಟ ಸೇರಿದ್ದಾರೆ. ಎನ್‌ಡಿಎ ಮೈತ್ರಿಕೂಟದ ಐದೂ ಪಕ್ಷಗಳಾದ ಬಿಜೆಪಿ, ಜೆಡಿ(ಯು), ಎಲ್‌ಜೆಪಿ (ರಾಮ್ ವಿಲಾಸ್), ಹ್ಯಾಮ್ ಮತ್ತು ಆರ್‌ಎಲ್‌ಎಂ ನಾಯಕರಿಗೆ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡಲಾಗಿದೆ.

ನಿತೀಶ್ ಕುಮಾರ್ ಅವರು ರಾಜ್ಯಸಭೆಗೆ ಆಯ್ಕೆಯಾಗಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರ, ಕಳೆದ ತಿಂಗಳು ಬಿಹಾರದಲ್ಲಿ ದೊಡ್ಡ ಬದಲಾವಣೆ ಉಂಟಾಗಿತ್ತು. ಬಿಜೆಪಿ ನಾಯಕ ಸಾಮ್ರಾಟ್ ಚೌಧರಿ ಅವರು ರಾಜ್ಯದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿದ್ದರು. ಇದೀಗ ಚೌಧರಿ ಅವರ ನೇತೃತ್ವದಲ್ಲಿ ಹೊಸ ಸಂಪುಟ ರಚನೆಯಾಗಿದ್ದು, ಆಡಳಿತ ನಡೆಸಲು ಎನ್‌ಡಿಎ ಮುಂದಾಗಿದೆ.

## ದೀದಿಗೆ ರಾಜ್ಯಪಾಲ ಶಾಕ್ ಬಂಗಾಳ ಸಚಿವ ಸಂಪುಟ ವಜಾ



**ಕೊಲ್ಕತ್ತಾ, ಮೇ 7:** ಇತ್ತೀಚೆಗೆ ನಡೆದ ಪಶ್ಚಿಮ ಬಂಗಾಲ ವಿಧಾನಸಭೆ ಚುನಾವಣೆಯಲ್ಲಿ ಸೋತ ನಂತರವೂ ಮಮತಾ ಬ್ಯಾನರ್ಜಿ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲು ನಿರಾಕರಿಸಿದ್ದರಿಂದ ರಾಜ್ಯದ ರಾಜಕೀಯದಲ್ಲಿ ಸಾಂವಿಧಾನಿಕ ಬಿಕ್ಕಟ್ಟು ಎದುರಾಗಿತ್ತು. ಇದರ ನಡುವೆ ರಾಜ್ಯಪಾಲ ಆರ್.ಎನ್. ರವಿ ಅವರು ತಮ್ಮ ವಿಶೇಷ ಅಧಿಕಾರ ಬಳಸಿ ಸಂಪುಟವನ್ನೇ ಶುಕ್ರವಾರ ವಜಾಗೊಳಿಸಿ ಅಧಿಸೂಚನೆ ಹೊರಡಿಸಿದ್ದಾರೆ.

ಈ ಐತಿಹಾಸಿಕ ನಿರ್ಧಾರವನ್ನು ಭಾರತೀಯ ಸಂವಿಧಾನದ 174(2)(ಬಿ) ವಿಧಿಯ ಅಡಿಯಲ್ಲಿ ತೆಗೆದುಕೊಳ್ಳಲಾಗಿದೆ. ರಾಜ್ಯಪಾಲರ ಸೂಚನೆಯ ಮೇರೆಗೆ ಮುಖ್ಯ ಕಾರ್ಯದರ್ಶಿ ದುಷ್ಯಂತ್ ನರಿಯಾಲ ಅವರು ಹೊರಡಿಸಿದ ಈ ಆದೇಶದ ನಂತರ, ರಾಜ್ಯ ಸರ್ಕಾರ ಅಸ್ತಿತ್ವದಲ್ಲಿಲ್ಲ. ರಾಜ್ಯಪಾಲರ ಈ ಕಠಿಣ ಕ್ರಮವು ಬಂಗಾಳದ ರಾಜಕೀಯದಲ್ಲಿ ಕೋಲಾಹಲವನ್ನು ಸೃಷ್ಟಿಸಿದೆ. ಸಂಪುಟ ಮತ್ತು ವಿಧಾನಸಭೆ ಎರಡೂ ತಕ್ಷಣದಿಂದ ಜಾರಿಗೆ ಬರುವಂತೆ ವಿಸರ್ಜಿಸಲ್ಪಟ್ಟಿವೆ.

ಇಡೀ ಕ್ರಮವು ಭಾರತೀಯ ಸಂವಿಧಾನದ ವಿಧಿಯ ಸುತ್ತ ಸುತ್ತುತ್ತದೆ. ಈ ವಿಧಿಯು ರಾಜ್ಯಪಾಲರಿಗೆ ರಾಜ್ಯ ವಿಧಾನಸಭೆಯನ್ನು ವಿಸರ್ಜಿಸಲು ಅಧಿಕಾರ ನೀಡುತ್ತದೆ. ಸಾಮಾನ್ಯವಾಗಿ, ರಾಜ್ಯಪಾಲರು ಮುಖ್ಯಮಂತ್ರಿಯ ಸಲಹೆಯ ಮೇರೆಗೆ ಹಾಗೆ ಮಾಡುತ್ತಾರೆ. ಆದಾಗ್ಯೂ, ಪ್ರಸ್ತುತ ಸಂದರ್ಭಗಳಲ್ಲಿ, ಸರ್ಕಾರ ಮತ್ತು ರಾಜಭವನದ ನಡುವಿನ ಸಂಘರ್ಷ ಉತ್ತುಂಗದಲ್ಲಿದ್ದಾಗ, ರಾಜ್ಯಪಾಲರು ಮಮತಾ ಬ್ಯಾನರ್ಜಿ ಸರ್ಕಾರದ ಅಸ್ತಿತ್ವವನ್ನು ಕೊನೆಗೊಳಿಸಲು ಈ ವೀಟೋ–ತರಹದ ಅಧಿಕಾರವನ್ನು ಬಳಸಿದರು. ಮುಖ್ಯ ಕಾರ್ಯದರ್ಶಿ ದುಷ್ಯಂತ್ ನರಿಯಾಲ ಅವರು ಹೊರಡಿಸಿದ ಅಧಿಸೂಚನೆಯು ಈ ನಿರ್ಧಾರವನ್ನು ರಾಜಭವನದ ನೇರ ಆದೇಶದ ಮೇರೆಗೆ ತೆಗೆದುಕೊಳ್ಳಲಾಗಿದೆ ಎಂದು ಸ್ಪಷ್ಟಪಡಿಸುತ್ತದೆ.

ಐತಿಹಾಸಿಕ ವಜಾ: ರಾಜ್ಯಪಾಲ ಆರ್.ಎನ್. ರವಿ ಅವರು ಮಮತಾ ಬ್ಯಾನರ್ಜಿ ಅವರ ಸಂಪುಟವನ್ನು ವಜಾಗೊಳಿಸಿದ್ದಾರೆ. ಮೇ 7, 2026 ರಿಂದ ಜಾರಿಗೆ ಬರುವಂತೆ ವಿಧಾನಸಭೆಯನ್ನು ವಿಸರ್ಜಿಸುವುದಾಗಿ ಘೋಷಿಸಿದ್ದಾರೆ.

# 118 ಶಾಸಕರ ಸಹಿ ಜತೆ ಬನ್ನಿ; ವಿಜಯ್ ವಾಪಸ್ ಕಳಿಸಿದ ರಾಜ್ಯಪಾಲ ಅರ್ಲೇಕರ್

## ಸರ್ಕಾರ ರಚಿಸಲು ನಿಮ್ಮ ಪಕ್ಷಕ್ಕೆ ಅಗತ್ಯ ಬೆಂಬಲವಿಲ್ಲ: ಟಿವಿಕೆ ಮುಖ್ಯಸ್ಥ ವಿಜಯ್‌ಗೆ ಮನವರಿಕೆ



**ಚೆನ್ನೈ, ಮೇ 7:** ತಮಿಳುನಾಡಿನ ರಾಜಕೀಯ ಬೆಳವಣಿಗೆಗಳು ತೀವ್ರ ಕುತೂಹಲ ಕೆರಳಿಸಿವೆ. ತಮಿಳುನಾಡಿನಲ್ಲಿ ಹೊಸ ಸರ್ಕಾರ ರಚಿಸಲು ಹಕ್ಕೊತ್ತಾಯ ಮಂಡಿಸಲು ಹೋದ ಟಿವಿಕೆ ಮುಖ್ಯಸ್ಥ ವಿಜಯ್ ಅವರಿಗೆ ರಾಜ್ಯಪಾಲ ರಾಜೇಂದ್ರ ಅರಳೇಕರ್ ಅವರು ಸತತ ಎರಡನೇ ದಿನವೂ ನಿರಾಸೆ ಮೂಡಿಸಿದ್ದಾರೆ. ಬಹುಮತ ಸಾಬೀತುಪಡಿಸಲು ಅಗತ್ಯವಿರುವ 118 ಶಾಸಕರ ಸಹಿಗಳೊಂದಿಗೆ ಬನ್ನಿ ಎಂದು ಸ್ಪಷ್ಟವಾಗಿ ಸೂಚಿಸಿ ರಾಜ್ಯಪಾಲರು ಜೋಸೆಫ್ ವಿಜಯ್ ಅವರನ್ನು ಬರಿಗೈಯಲ್ಲಿ ವಾಪಸ್ ಕಳುಹಿಸಿದ್ದಾರೆ.

ಸರ್ಕಾರ ರಚಿಸಲು ನಿಮ್ಮ ಪಕ್ಷಕ್ಕೆ ಅಗತ್ಯವಾದ ಬೆಂಬಲವಿಲ್ಲ ಎಂದು ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಟಿವಿಕೆ ಮುಖ್ಯಸ್ಥ ವಿಜಯ್ ಅವರಿಗೆ ವಿವರಿಸಿದ್ದಾರೆ ಎಂದು ತಮಿಳುನಾಡು ಲೋಕಭವನ ಗುರುವಾರ ತಿಳಿಸಿದೆ.

ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರ ಆಹ್ವಾನದ ಮೇರೆಗೆ ಟಿವಿಕೆ ಮುಖ್ಯಸ್ಥ ವಿಜಯ್ ಅವರು ಲೋಕಭವನಕ್ಕೆ ಗುರುವಾರ ಭೇಟಿ ನೀಡಿ, ಅವರೊಂದಿಗೆ ಸಮಾಲೋಚನೆ ನಡೆಸಿದರು. ಸಭೆಯಲ್ಲಿ ಸರ್ಕಾರ ರಚಿಸಲು ಅಗತ್ಯವಾದ ಶಾಸಕರ ಬೆಂಬಲವನ್ನು ನೀವು ಹೊಂದಿಲ್ಲ. ವಿಧಾನಸಭೆಯಲ್ಲಿ ಬಹುಮತ ಸಾಬೀತುಪಡಿಸಲು ಬೇಕಾದ ಸಂಖ್ಯಾ ಬಲವನ್ನು ನೀವು ತೋರಿಸಿಲ್ಲ ಹೀಗಾಗಿ ಆಹ್ವಾನ ನೀಡಲಾಗಿಲ್ಲ ಎಂದು ರಾಜ್ಯಪಾಲರು ವಿಜಯ್‌ಗೆ ವಿವರಿಸಿದರು ಎಂದು ಲೋಕಭವನದ ಪ್ರಕಟಣೆ ತಿಳಿಸಲಾಗಿದೆ. ಹೀಗಾಗಿ ಸರ್ಕಾರ ರಚನೆ ವಿಳಂಬವಾಗುತ್ತಿದೆ. ಬಹುಮತಕ್ಕೆ ಅಗತ್ಯವಾದ ಶಾಸಕರ ಪಟ್ಟಿ ಹಾಗೂ ಸಹಿಯೊಂದಿಗೆ ಲೋಕಭವನಕ್ಕೆ ಬನ್ನಿ ಎಂದು ರಾಜ್ಯಪಾಲರು ಸೂಚಿಸಿದ್ದಾರೆ ಎಂದು ತಿಳಿದು ಬಂದಿದೆ. 24 ಗಂಟೆಗಳ ಅವಧಿಯಲ್ಲಿ ಸರ್ಕಾರ ರಚನೆಗೆ ಸಂಬಂಧಿಸಿದಂತೆ ವಿಜಯ್ ಗುರುವಾರ ಎರಡನೇ ಬಾರಿಗೆ ರಾಜ್ಯಪಾಲರನ್ನು ಭೇಟಿಯಾಗಿದ್ದರು. 234 ಸದಸ್ಯಬಲದ ವಿಧಾನಸಭೆಯಲ್ಲಿ ಸರ್ಕಾರ ರಚಿಸಲು 118 ಸ್ಥಾನಗಳು ಬೇಕಾಗಿವೆ. ಆದರೆ ವಿಜಯ್ ಬಳಿ ಅಷ್ಟೊಂದು ಸಂಖ್ಯಾ ಬಲವಿಲ್ಲ. ಕಾಂಗ್ರೆಸ್ ತನ್ನ ಐವರು ಸದಸ್ಯರ ಬೆಂಬಲವನ್ನು ಘೋಷಿಸಿದ್ದರು. ಇನ್ನು 5–6 ಸ್ಥಾನಗಳ ಕೊರತೆ ಇದೆ.

# ಅಣ್ಣಾಡಿಎಂಕೆ ಜೊತೆಗಿನ ಮೈತ್ರಿ ವದಂತಿ ನಿರಾಕರಿಸಿದ ಡಿಎಂಕೆ

## ಟಿವಿಕೆಗೆ ಆರು ತಿಂಗಳು ತೊಂದರೆ ಕೊಡಲ್ಲ: ಎಂ.ಕೆ ಸ್ಟಾಲಿನ್



**ಚೆನ್ನೈ, ಮೇ 7:** ತಮಿಳುನಾಡಿನಲ್ಲಿ ಅತಂತ್ರ ಪರಿಸ್ಥಿತಿ ನಿರ್ಮಾಣವಾದ ಬೆನ್ನಲ್ಲೇ ಸರ್ಕಾರ ರಚನೆಯ ಕಸರತ್ತು ಜೋರಾಗಿದೆ. 108 ಸ್ಥಾನಗಳೊಂದಿಗೆ ಅತಿದೊಡ್ಡ ಪಕ್ಷವಾಗಿರುವ ಟಿವಿಕೆ ಗದ್ದುಗೆ ಹಿಡಿಯಲು ಸರ್ಕಸ್ ನಡೆಸುತ್ತಿದೆ. ಇನ್ನೊಂದೆಡೆ, ಬದ್ಧ ಎದುರಾಳಿಗಳಾಗಿರುವ ಡಿಎಂಕೆ ಮತ್ತು ಎಐಎಡಿಎಂಕೆ ಮೈತ್ರಿ ವದಂತಿ ಎದ್ದಿದೆ.

ಟಿವಿಕೆಗೆ ಕಾಂಗ್ರೆಸ್ ಬೆಂಬಲ ಘೋಷಿಸಿದ ಬೆನ್ನಲ್ಲೇ ಸಾಂಪ್ರದಾಯಿಕ ದ್ರಾವಿಡ ಪಕ್ಷಗಳು ಮೈತ್ರಿಯ ಮಾತುಕತೆ ನಡೆಸಿವೆ ಎಂಬ ವರದಿಗಳು ಬುಧವಾರ ಹೊರಬಂದಿದ್ದವು. ಆದರೆ ಈ ವರದಿಗಳನ್ನು ಡಿಎಂಕೆ ಮುಖ್ಯಸ್ಥ ಎಂ.ಕೆ.ಸ್ಟಾಲಿನ್ ತಳ್ಳಿಹಾಕಿದ್ದಾರೆ. ತಮಿಳುನಾಡಿನಲ್ಲಿ ಹೊಸ ಸರ್ಕಾರ ರಚಿಸಲಿರುವ ನಟ ಮತ್ತು ರಾಜಕಾರಣಿ ವಿಜಯ್ ಅವರಿಗೆ ಪಕ್ಷವು ಕನಿಷ್ಠ 6 ತಿಂಗಳ ಕಾಲ ಯಾವುದೇ ಅಡೆತಡೆಗಳನ್ನು ಸೃಷ್ಟಿಸುವುದಿಲ್ಲ ಎಂದು ಸ್ಟಾಲಿನ್ ಸ್ಪಷ್ಟಪಡಿಸಿದ್ದಾರೆ.


ಸದ್ಯಕ್ಕೆ ಡಿಎಂಕೆ ಯಾವುದೇ ರಾಜಕೀಯ ಗೊಂದಲ ಸೃಷ್ಟಿ ಮಾಡಲ್ಲ. ಮುಂದಿನ ದಿನಗಳಲ್ಲಿ ಸಾಂವಿಧಾನಿಕ ಬಿಕ್ಕಟ್ಟು ಅಥವಾ ಇನ್ನೊಂದು ಚುನಾವಣೆಯನ್ನು ಡಿಎಂಕೆ ಬಯಸುವುದಿಲ್ಲ. ಆರು ತಿಂಗಳ ಕಾಲ ವಿಜಯ್ ಅವರ ಆಡಳಿತವನ್ನು ಸೂಕ್ಷ್ಮವಾಗಿ ಗಮನಿಸುತ್ತೇವೆ ಎಂದು ಸ್ಟಾಲಿನ್ ತಿಳಿಸಿದ್ದಾರೆ. ಸರ್ಕಾರ ರಚನೆ ಸಂಬಂಧ ಡಿಎಂಕೆ ಜೊತೆ ಮೈತ್ರಿಗೆ ಎಐಡಿಎಂಕೆ ಪ್ರಯತ್ನಿಸಿದೆ ಎಂದು ವರದಿಯಾಗಿದೆ. ಮತದಾರರ ತೀರ್ಪಿನಂತೆ ವಿರೋಧ ಪಕ್ಷದಲ್ಲಿರುವುದಾಗಿ ಡಿಎಂಕೆ ತಿಳಿಸಿದೆ ಎಂದು ಹೇಳಲಾಗುತ್ತಿದೆ.

ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ ಟಿವಿಕೆ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದರೂ, ಮ್ಯಾಜಿಕ್ ನಂಬರ್ ತಲುಪಲು ಸಾಧ್ಯವಾಗಿಲ್ಲ. ಟಿವಿಕೆ 108 ಸ್ಥಾನಗಳಲ್ಲಿ ಜಯಿಸಿದ್ದು, ಬಹುಮತಕ್ಕೆ ಇನ್ನೂ 10 ಸ್ಥಾನಗಳ ಅಗತ್ಯವಿದೆ. ಇನ್ನು ಡಿಎಂಕೆ 59, ಎಐಎಡಿಎಂಕೆ 47, ಕಾಂಗ್ರೆಸ್ 5, ಪಿಎಂಕೆ 4, ಐಯುಎಂಎಲ್ 2, ಸಿಪಿಐ 2 ಮತ್ತು ಸಿಪಿಐ–ಎಂ 2, ವಿಸಿಕೆ 2 ಕ್ಷೇತ್ರಗಳಲ್ಲಿ ಜಯ ಸಾಧಿಸಿವೆ. ಬಿಜೆಪಿ, ಡಿಎಂಡಿಕೆ ಮತ್ತು ಎಎಂಎಂಕೆ ತಲಾ 1 ಸ್ಥಾನಗಳನ್ನು ಪಡೆದಿವೆ.

ಯಾವ ಪಕ್ಷವೂ ಮ್ಯಾಜಿಕ್ ನಂಬರ್ 118 ತಲುಪದ ಕಾರಣ ಅತಂತ್ರ ಪರಿಸ್ಥಿತಿ ನಿರ್ಮಾಣವಾಗಿದೆ. ಬಹುಮತದ ಸನಿಹದಲ್ಲಿರುವ ಟಿವಿಕೆ ಮುಖ್ಯಸ್ಥ ವಿಜಯ್ ಅವರು ಸರ್ಕಾರ ರಚನೆಗೆ ಮುಂದಾದರೂ ಈವರೆಗೆ ಖಚಿತ ಬೆಂಬಲ ಸಿಕ್ಕಿಲ್ಲ. ಇದರಿಂದಾಗಿ ತಮಿಳುನಾಡು ರಾಜಕಾರಣ ಸದ್ಯ ಕುತೂಹಲ ಹುಟ್ಟಿಸಿದೆ.

ಸರ್ಕಾರ ರಚನೆಯ ಹೊಸ್ತಿಲಲ್ಲಿರುವ ಟಿವಿಕೆ ಜೊತೆ ಕೈಜೋಡಿಸುವುದಾಗಿ ಕಾಂಗ್ರೆಸ್ ಘೋಷಿಸಿದೆ. ಈ ಮೂಲಕ ಡಿಎಂಕೆಯೊಂದಿಗಿನ ಬಹುಕಾಲದ ಮೈತ್ರಿಯನ್ನು 'ಕೈ' ಬಿಟ್ಟಿದೆ. ಈ ಬೆನ್ನಲ್ಲೇ ಕಾಂಗ್ರೆಸ್ ವಿರುದ್ಧ ಡಿಎಂಕೆ ಹರಿಹಾಯ್ದಿದೆ.

# ಸುವೇಂದು ಅಧಿಕಾರಿಯ ಆಪ್ತ ಸಹಾಯಕ ಚಂದ್ರನಾಥ ರಥ ಹತ್ಯೆ



## ಬಂಗಾಳದಲ್ಲಿ ಮತ್ತೆ ತಲೆ ಎತ್ತಿದ ರಾಜಕೀಯ ಹತ್ಯಾಪರ್ವ

**ಕೋಲ್ಕತ್ತಾ, ಮೇ 7:** ಬಿಜೆಪಿ ನಾಯಕ ಸುವೇಂದು ಅಧಿಕಾರಿಯ ಆಪ್ತ ಸಹಾಯಕ ಚಂದ್ರನಾಥ ರಥ ಅವರನ್ನು ಮೇ 6ರ ರಾತ್ರಿ ಪಶ್ಚಿಮ ಬಂಗಾಳದ ಮಧ್ಯಮಗ್ರಾಮದಲ್ಲಿ ಗುಂಡು ಹಾರಿಸಿ ಹತ್ಯೆ ಮಾಡಲಾಗಿದೆ. ಆರೋಪಿಗಳು ಸಿನಿಮಾ ಶೈಲಿಯಲ್ಲಿ ಸಂಚು ರೂಪಿಸಿ ಕೃತ್ಯ ಎಸಗಿದ್ದಾರೆ.

ಹತ್ಯೆಗೆ ನಕಲಿ ನಂಬರ್ ಪ್ಲೇಟ್ ಹೊಂದಿದ್ದ ಕಾರು ಬಳಸಿರುವ ಆರೋಪಿಗಳು, ಕಾರಿನ ಚಾಸಿಸ್ ನಂಬರ್ ಸಹ ಬದಲಿಸಿದ್ದಾರೆ. ಮೊದಲು ಕಾರಿನಲ್ಲಿ ಬಂದ ದುಷ್ಕರ್ಮಿಗಳ ತಂಡ ಚಂದ್ರನಾಥ ರಥ ಅವರ ಕಾರನ್ನು ಮಧ್ಯಮಗ್ರಾಮದ ಡೋಲ್ತಾಲಾ ಬಳಿ ಹಿಂಬಾಲಿಸಿ, ಅಡ್ಡಗಟ್ಟಿದೆ.

ಈ ಸಮಯದಲ್ಲಿ ಬೈಕ್‌ನಲ್ಲಿ ಬಂದ ದುಷ್ಕರ್ಮಿಗಳು ಕಾರಿನ ಮೇಲೆ 4 ಬಾರಿ ಗುಂಡು ಹಾರಿಸಿ ಹತ್ಯೆ ಮಾಡಿದ್ದಾರೆ. ಕೃತ್ಯ ಎಸಗಿದ ಬಳಿಕ ನಕಲಿ ನಂಬರ್ ಪ್ಲೇಟ್ ಹೊಂದಿದ್ದ ಕಾರಿನಲ್ಲಿದ್ದವರು, ಕಾರನ್ನು ಅಲ್ಲೇ ಬಿಟ್ಟು ಬೈಕ್‌ನಲ್ಲಿ ಪರಾರಿಯಾಗಿದ್ದಾರೆ.

ಚಂದ್ರನಾಥ ರಥ ಅವರ ಎದೆಯ ಭಾಗಕ್ಕೆ ಎರಡು ಗುಂಡುಗಳು ತಗುಲಿವೆ. ಅವು ಹೃದಯಕ್ಕೆ ಹಾನಿ ಮಾಡಿವೆ. ಒಂದು ಗುಂಡು ಹೊಟ್ಟೆಯ ಭಾಗಕ್ಕೆ ಹೊಕ್ಕಿದೆ. ಅವರನ್ನು ಬದುಕಿಸಲು ಯಾವುದೇ ಅವಕಾಶ ಇರಲಿಲ್ಲ ಎಂದು ವೈದ್ಯರು ಹೇಳಿದ್ದಾರೆ.

ದಾಳಿಯ ಸಮಯದಲ್ಲಿ ಅತ್ಯಾಧುನಿಕ ಬಂದೂಕುಗಳನ್ನು ಬಳಸಲಾಗಿದೆ ಎಂದು ಪೊಲೀಸರು ಶಂಕಿಸಿದ್ದಾರೆ. ದಾಳಿಕೋರರು ಗ್ಲಾಕ್ 47 ಎಕ್ಸ್ ಪಿಸ್ತೂಲ್‌ಗಳನ್ನು ಬಳಸಿರಬಹುದು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಾಮಾನ್ಯ ಅಪರಾಧಿಗಳು ಈ ರೀತಿಯ ಆಯುಧ ವನ್ನು ಬಳಸುವುದಿಲ್ಲ. ವೃತ್ತಿಪರ ಶೂಟರ್‌ಗಳು ಭಾಗಿಯಾಗಿದ್ದಾರೆಯೇ ಎಂದು ನಾವು ಪರಿಶೀಲಿಸುತ್ತಿದ್ದೇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

"ಚಂದ್ರನಾಥ ಅವರ ಕಾರು ನನ್ನ ಕಾರನ್ನು ದಾಟುತ್ತಿದ್ದಂತೆ, ಅದು ಇದ್ದಕ್ಕಿದ್ದಂತೆ ಮಧ್ಯದಲ್ಲಿ ನಿಂತಿತು. ಈ ವೇಳೆ ಬೈಕ್‌ನಲ್ಲಿ ಬಂದ ವ್ಯಕ್ತಿಯೊಬ್ಬ ಕಾರಿನ ಎಡಭಾಗದಲ್ಲಿ ಗುಂಡು ಹಾರಿಸಲು ಪ್ರಾರಂಭಿಸಿದ. ನನಗೆ 2 ಸುತ್ತು ಗುಂಡು ಹಾರಿಸಿದ ಶಬ್ದ ಕೇಳಿಸಿತು.

ಕೃತ್ಯದ ಬಳಿಕ ಅಲ್ಲಿಂದ ಆತ ಪರಾರಿಯಾದ. ದಾಳಿಕೋರ ವೃತ್ತಿಪರನಂತೆ ಕಾಣುತ್ತಿದ್ದ. ಬೈಕ್‌ಗೆ ನಂಬರ್ ಪ್ಲೇಟ್ ಇರಲಿಲ್ಲ. ಈ ಘಟನೆ ರಾತ್ರಿ 10:30 ರಿಂದ ರಾತ್ರಿ 11 ಗಂಟೆಯ ನಡುವೆ ಸಂಭವಿಸಿದೆ" ಎಂದು ಪ್ರತ್ಯಕ್ಷದರ್ಶಿಯೊಬ್ಬರು ಹೇಳಿದ್ದಾರೆ.

ಆರಂಭಿಕ ತನಿಖೆಯ ಪ್ರಕಾರ, ನಾಲ್ಕು ಬೈಕ್‌ಗಳು ಮತ್ತು ಒಂದು ಕಾರನ್ನು ಕೊಲೆ ಮಾಡಲು ದುಷ್ಕರ್ಮಿಗಳು ಬಳಸಿದ್ದಾರೆ. ರಥ ಅವರ ಕಾರಿಗೆ ಅಡ್ಡಲಾಗಿ ಬಂದ ಅನುಮಾನಾಸ್ಪದ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ.

ಕಾರಿನ ನಂಬರ್ ಪ್ಲೇಟ್ ನಕಲಿ ಎಂದು ಗೊತ್ತಾಗಿದೆ. ಅಲ್ಲದೇ ಕಾರಿನ ಚಾಸಿಸ್ ಸಂಖ್ಯೆಯನ್ನು ತಿರುಚಿರುವ ಶಂಕೆ ಇದೆ ಎಂದು ಬಂಗಾಳದ ಪೊಲೀಸ್ ಮಹಾನಿರ್ದೇಶಕ ಸಿದ್ಧ ನಾಥ್ ಗುಪ್ತಾ ಹೇಳಿದರು. ಅಪರಾಧ ನಡೆದ ಸ್ಥಳದಿಂದ ಖಾಲಿ ಕಾರ್ಟ್ರಿಡ್ಜ್‌ಗಳು ಮತ್ತು ಸಜೀವ ಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ. ದಾಳಿಯ ಹಿಂದಿನ ಉದ್ದೇಶ ಸ್ಪಷ್ಟವಾಗಿಲ್ಲ ಎಂದು ತಿಳಿಸಿದ್ದಾರೆ.




**ನವದೆಹಲಿಯಲ್ಲಿ ನವೀಕರಿಸಿದ ನೆಹರು ಪ್ಲೇಸ್ ಅಂಚೆ ಕಚೇರಿಯನ್ನು ಗುರುವಾರ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಕೇಂದ್ರ ಸಂಪರ್ಕ ಮತ್ತು ಈಶಾನ್ಯ ಪ್ರದೇಶದ ಅಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಪಾಲ್ಗೊಂಡಿದ್ದರು.**

# ಸಿಎಂ ಸ್ಥಾನಕ್ಕಾಗಿ ಕಾಂಗ್ರೆಸ್ ಉನ್ನತ ನಾಯಕರನ್ನು ಭೇಟಿಯಾದ ಚೆನ್ನಿತ್ತಾಲ



**ನವದೆಹಲಿ, ಮೇ. 7:** ಕೇರಳ ಮುಖ್ಯಮಂತ್ರಿ ಹುದ್ದೆಗೆ ಸ್ಪರ್ಧೆ ತೀವ್ರಗೊಳ್ಳುತ್ತಿದೆ. ಹಿರಿಯ ಕಾಂಗ್ರೆಸ್ ನಾಯಕ ರಮೇಶ್ ಚೆನ್ನಿತ್ತಾಲ ಬುಧವಾರ ದೆಹಲಿಯಲ್ಲಿ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿದ್ದಾರೆ ಎಂದು ವರದಿಯಾಗಿದೆ.

ಕೇರಳದಲ್ಲಿ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಭರ್ಜರಿ ಗೆಲುವು ಕಂಡಿದೆ. ವಿಡಿ ಸತೀಶನ್, ಕೆಸಿ ವೇಣುಗೋಪಾಲ್ ಮತ್ತು ಚೆನ್ನಿತ್ತಾಲಹೀಗೆ ಮೂವರು ಪ್ರಮುಖ ನಾಯಕರ ನಡುವೆ ಸಿಎಂ ಸ್ಥಾನಕ್ಕೆ ಸ್ಪರ್ಧೆ ನಡೆಯುತ್ತಿದೆ.

ಬಹುಪಾಲು ಕಾಂಗ್ರೆಸ್ ಶಾಸಕರ ಬೆಂಬಲದ ಹೊರತಾಗಿಯೂ, 2021ರಲ್ಲಿ ಪ್ರತಿಪಕ್ಷ ನಾಯಕ ಹುದ್ದೆಗೆ ತಮ್ಮನ್ನು ಕಡೆಗಣಿಸಲಾಗಿದೆ ಎಂದು ಚೆನ್ನಿತ್ತಾಲನಾಯಕತ್ವಕ್ಕೆ ತಿಳಿಸಿದ್ದಾರೆ. ಹಾಗೆಯೇ ಈಗ ಸಿಎಂ ಸ್ಥಾನಕ್ಕೆ ತಾವು ಅರ್ಹರು ಎಂದು ವಾದಿಸಿದ್ದಾರೆ ಎನ್ನಲಾಗಿದೆ. ಇನ್ನು ಈ ಸಭೆಯಲ್ಲಿ ವೇಣುಗೋಪಾಲ್ ಕೂಡ ಭಾಗವಹಿಸಿದ್ದರು ಎಂದು ವರದಿಯಾಗಿದೆ.

ಸದ್ಯ ಸಿಎಂ ಸ್ಪರ್ಧೆಯಲ್ಲಿ ಮೊದಲ ಸ್ಥಾನದಲ್ಲಿ ವೇಣುಗೋಪಾಲ್ ಇದ್ದಾರೆ. ಅದರ ನಂತರದ ಸ್ಥಾನದಲ್ಲಿ ವಿಡಿ ಸತೀಶನ್ ಇದ್ದಾರೆ ಎಂದು ಹೇಳಲಾಗಿದೆ. ಆದರೆ ವೇಣುಗೋಪಾಲ್ ಬಹುಪಾಲು ಶಾಸಕರ ಬೆಂಬಲವನ್ನು ಹೊಂದಿದ್ದರೂ, ಪ್ರತಿಯೊಂದು ಕ್ಷೇತ್ರದ ಚುನಾಯಿತ ಪ್ರತಿನಿಧಿಗಳನ್ನು ಅವರ ವೈಯಕ್ತಿಕ ಪ್ರಭಾವ, ಸ್ಥಾನಗಳು ಮತ್ತು ಇತರ ಅಂಶಗಳ ಆಧಾರದ ಮೇಲೆ ಜನರು ಆಯ್ಕೆ ಮಾಡಿದ್ದಾರೆ. ಆದ್ದರಿಂದ ವೇಣುಗೋಪಾಲ್‌ಗೆ ಸಿಎಂ ಸ್ಥಾನ ಕೊಡಲಾಗದು ಎಂಬ ವಾದಗಳೂ ಇವೆ.

ಇನ್ನು ಈ ಹಿಂದೆ ಸಂಘಟನಾ ಪ್ರಧಾನ ಕಾರ್ಯದರ್ಶಿಯಾದ ಕೆ.ಸಿ. ವೇಣುಗೋಪಾಲ್ ಅವರು ಕೇರಳದ ಮುಂದಿನ ಸಿಎಂ ಆಗಬಹುದು ಎಂಬ ಸುಳಿವನ್ನು ಕೇರಳ ಕಾಂಗ್ರೆಸ್ ಮುಖ್ಯಸ್ಥ ಸನ್ನಿ ಜೋಸೆಫ್ ನೀಡಿದ್ದರು. ಶಾಸಕರಲ್ಲದ ಒಬ್ಬರು ಮುಖ್ಯಮಂತ್ರಿಯಾಗುವ ಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ, ಸನ್ನಿ ಜೋಸೆಫ್ ಉತ್ತರಿಸುತ್ತಾ ಅದು ಸಾಧ್ಯವಿದೆ ಎಂದಿದ್ದಾರೆ. ಏಕೆ ಸಾಧ್ಯವಿಲ್ಲ. ಅಚ್ಯುತ ಮೆನನ್ ಅವರು ಸಿಎಂ ಆದಾಗ ಶಾಸಕರಾಗಿರಲಿಲ್ಲ ಎಂದು ಸನ್ನಿ ಜೋಸೆಫ್ ಹೇಳಿದ್ದರು.

# ಆಪರೇಷನ್ ಸಿಂಧೂರ್‌ಗೆ ಒಂದು ವರ್ಷ: ಸಶಸ್ತ್ರ ಪಡೆಗಳಿಗೆ ಪ್ರಧಾನಿ ನಮನ




**ನವದೆಹಲಿ, ಮೇ 7:** ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಡೆದು ಒಂದು ವರ್ಷ ಪೂರೈಸಿದ ಸಂದರ್ಭದಲ್ಲಿ ಸಶಸ್ತ್ರ ಪಡೆಗಳ ಧೈರ್ಯ, ನಿಖರತೆ ಮತ್ತು ಸಂಕಲ್ಪಕ್ಕೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ವಂದನೆ ಸಲ್ಲಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ಮುಗ್ಧ ಭಾರತೀಯರ ಮೇಲೆ ದಾಳಿ ಮಾಡುವ ಧೈರ್ಯ ತೋರಿದವರಿಗೆ ಸಶಸ್ತ್ರ ಪಡೆಗಳು ತಕ್ಕ ಪ್ರತ್ಯುತ್ತರ ನೀಡಿವೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯು ಭಯೋತ್ಪಾದನೆಯ ವಿರುದ್ಧ ಭಾರತದ ದೃಢ ಪ್ರತಿಕ್ರಿಯೆ ಮತ್ತು ರಾಷ್ಟ್ರೀಯ ಭದ್ರತೆಯನ್ನು ರಕ್ಷಿಸುವ ದೇಶದ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ.

ಈ ಕಾರ್ಯಾಚರಣೆಯು ಸಶಸ್ತ್ರ ಪಡೆಗಳ ವೃತ್ತಿಪರತೆ, ಸನ್ನದ್ಧತೆ ಮತ್ತು ಸಂಘಟಿತ ಶಕ್ತಿಯನ್ನು ಪ್ರದರ್ಶಿಸಿದೆ. ಮೂರೂ ಪಡೆಗಳ ಪಡೆಗಳ ನಡುವೆ ಹೆಚ್ಚುತ್ತಿರುವ ಸಹಭಾಗಿತ್ವವನ್ನು ಪ್ರದರ್ಶಿಸುತ್ತದೆ. ಜೊತೆಗೆ ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆಗಾಗಿ ಭಾರತದ ತುಡಿತವು ರಾಷ್ಟ್ರೀಯ ಭದ್ರತೆಗೆ ನೀಡಿರುವ ಶಕ್ತಿಯನ್ನು ತಿಳಿಸುತ್ತದೆ ಎಂದಿದ್ದಾರೆ.

ಭಯೋತ್ಪಾದನೆಯನ್ನು ಸೋಲಿಸುವ ಮತ್ತು ಅದನ್ನು ಸಕ್ರಿಯವಾಗಿರಿಸುವ ಪರಿಸರ ವ್ಯವಸ್ಥೆಯನ್ನು ನಾಶಪಡಿಸುವ ತನ್ನ ಸಂಕಲ್ಪದಲ್ಲಿ ಭಾರತವು ಸದಾ ದೃಢವಾಗಿ ಮುನ್ನಡೆಯುತ್ತಿದೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಸಶಸ್ತ್ರ ಪಡೆಗಳು ತಮ್ಮ ಶೌರ್ಯವನ್ನು ಪ್ರದರ್ಶಿಸಿದವು ಮತ್ತು ಭಾರತದ ಜನರ ಮೇಲೆ ದಾಳಿ ಮಾಡಿದವರಿಗೆ ದಿಟ್ಟ ತಿರುಗೇಟು ನೀಡಿವೆ. ಪ್ರತಿಯೊಬ್ಬ ಭಾರತೀಯನೂ ಸಶಸ್ತ್ರ ಪಡೆಗಳ ಬಗ್ಗೆ ಹೆಮ್ಮೆ ಪಡುತ್ತಾರೆ ಎಂದಿದ್ದಾರೆ.

ಇಂದಿಗೆ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಡೆದು ಒಂದು ವರ್ಷದ ನಂತರ, ಭಯೋತ್ಪಾದನೆಯನ್ನು ಸೋಲಿಸುವ ಮತ್ತು ಅದನ್ನು ಸಕ್ರಿಯವಾಗಿರಿಸುವ ಪರಿಸರ ವ್ಯವಸ್ಥೆಯನ್ನು ನಾಶಪಡಿಸುವ ನಮ್ಮ ಸಂಕಲ್ಪದಲ್ಲಿ ಎಂದಿನಂತೆ ದೃಢವಾಗಿದ್ದೇವೆ."

"ಒಂದು ವರ್ಷದ ಹಿಂದೆ, ನಮ್ಮ ಸಶಸ್ತ್ರ ಪಡೆಗಳು ತಮ್ಮ ಶೌರ್ಯವನ್ನು ಪ್ರದರ್ಶಿಸಿದವು ಮತ್ತು ನಮ್ಮ ಜನರ ಮೇಲೆ ದಾಳಿ ಮಾಡಿದವರಿಗೆ ದಿಟ್ಟ ಪ್ರತ್ಯುತ್ತರ ನೀಡಿದ್ದವು. ಪ್ರತಿಯೊಬ್ಬ ಭಾರತೀಯನೂ ನಮ್ಮ ಸಶಸ್ತ್ರ ಪಡೆಗಳ ಬಗ್ಗೆ ಹೆಮ್ಮೆ ಹೊಂದಿದ್ದಾರೆ. ನಮ್ಮ ಪಡೆಗಳು ಮತ್ತು ಅವರ ಯಶಸ್ಸಿಗೆ ಗೌರವದ ಸಂಕೇತವಾಗಿ, ನಾವೆಲ್ಲರೂ ಎಕ್ಸ್, ಫೇಸ್‌ಬುಕ್, ಇನ್ಸ್ಟಾಗ್ರಾಮ್ ಮತ್ತು ವಾಟ್ಸಾಪ್ ಸೇರಿದಂತೆ ಸಾಮಾಜಿಕ ಮಾಧ್ಯಮಗಳಲ್ಲಿನ ನಮ್ಮ ಡಿಪಿ ಕೆಳಗೆ ಹಂಚಿಕೊಂಡ ಚಿತ್ರಕ್ಕೆ ಬದಲಾಯಿಸೋಣ ಎಂದು ಮೋದಿ ಕರೆ ನೀಡಿದ್ದಾರೆ.

# ಪಹಲ್ಗಾಮ್ ಪ್ರತೀಕಾರಕ್ಕೆ ಒಂದು ವರ್ಷ ಆಪರೇಷನ್ ಸಿಂಧೂರ ನಿಲ್ಲದು: ಭಾರತ

## ಪಾಕ್ ವಿರುದ್ಧದ ಪ್ರತೀಕಾರದ ವಿಶೇಷ ವಿಡಿಯೋ ಹಂಚಿಕೊಂಡ ವಾಯುಪಡೆ

**ನವದೆಹಲಿ, ಮೇ 7:** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕ್ ಮೂಲದ ಉಗ್ರರು ನಡೆಸಿದ ನರಮೇಧಕ್ಕೆ ಪ್ರತೀಕಾರವಾಗಿ ಭಾರತ ನಡೆಸಿದ ಆಪರೇಷನ್ ಸಿಂಧೂರ ವಿಶೇಷ ಕಾರ್ಯಾಚರಣೆಗೆ ಇಂದಿಗೆ 1 ವರ್ಷ ಪೂರ್ಣಗೊಂಡಿದೆ. ಈ ಹೊತ್ತಿನಲ್ಲೇ ಪಾಕ್ ವಿರುದ್ಧ ತೀರಿಸಿಕೊಂಡ ಪ್ರತೀಕಾರ ಹಾಗೂ ಭಾರತೀಯ ಮೂರು ಸೇನೆಗಳ ಪರಾಕ್ರಮವನ್ನು ನೆನಪಿಸುವ ವಿಶೇಷ ವಿಡಿಯೋವೊಂದನ್ನು ಭಾರತೀಯ ವಾಯುಪಡೆ ಹಂಚಿಕೊಂಡಿದೆ.




ಎಕ್ಸ್ ಖಾತೆಯಲ್ಲಿ ವಿಡಿಯೋ ಹಂಚಿಕೊಂಡಿರುವ ಭಾರತೀಯ ವಾಯುಪಡೆ, ಆಪರೇಷನ್ ಸಿಂಧೂರ ನ್ಯಾಯ ದೊರಕಿಸಿದೆ. ಈ ಕಾರ್ಯ ನಿಖರವಾಗಿದ್ದು, ನೆನಪಿನಲ್ಲಿ ಶಾಶ್ವತವಾಗಿ ಉಳಿಯುತ್ತದೆ ಎಂದು ಬರೆದುಕೊಂಡಿದೆ. ಅಲ್ಲದೇ, ಭಾರತ ಯಾವುದನ್ನೂ ಮರೆಯುವುದಿಲ್ಲ- ಭಾರತ ಯಾವುದನ್ನೂ ಕ್ಷಮಿಸುವುದಿಲ್ಲ, ಆಪರೇಷನ್ ಸಿಂಧೂರ ಮುಂದುವರಿಯುತ್ತದೆ ಎಂದು ವಾಯುಪಡೆ ಎಚ್ಚರಿಸಿದೆ.

ಅಲ್ಲದೇ ವಾಯುಪಡೆ ಹಂಚಿಕೊಂಡ ಇದೇ ವಿಡಿಯೋನಲ್ಲಿ ಪ್ರಧಾನಿ ನರೇಂದ್ರ ಮೋದಿ ಸಹ ಉಗ್ರರ ವಿರುದ್ಧ ಗುಡುಗಿದ್ದಾರೆ. ಭಾರತವು ಪ್ರತಿಯೊಬ್ಬ ಭಯೋತ್ಪಾದಕ ಮತ್ತು ಅವರ ಬೆಂಬಲಿಗರನ್ನ ಗುರುತಿಸಿ, ಪತ್ತೆಮಾಡಿ ಶಿಕ್ಷಿಸುತ್ತದೆ ಎಂದು ಹೇಳಿದ್ದಾರೆ.

ದಶಕಗಳಿಂದ ಭಾರತದ ಮಣ್ಣಿನಲ್ಲಿ ಪಾಕಿಸ್ತಾನ ನಡೆಸುತ್ತಿರುವ ಭಯೋತ್ಪಾದನಾ ಕೃತ್ಯಗಳಿಗೆ ಕೇವಲ ಮೌಖಿಕ ಎಚ್ಚರಿಕೆ ನೀಡುವ ಬದಲು, ನೇರವಾಗಿ ತಿರುಗೇಟು ಕೊಡುವ ಕೆಲಸವನ್ನು ಭಾರತ ಈ ಕಾರ್ಯಾಚರಣೆ ಮೂಲಕ ಸಾಬೀತು ಮಾಡಿತ್ತು. ಹಾಗಾಗಿ ಪಾಕಿಸ್ತಾನವು ಭಯೋತ್ಪಾದಕ ಸಂಘಟನೆಗಳನ್ನು ತನ್ನ ಪರೋಕ್ಷ ಯುದ್ಧದ ದಾಳಗಳಾಗಿ ಬಳಸಿಕೊಳ್ಳುತ್ತಿರುವುದನ್ನ ಎದುರಿಸುವಲ್ಲಿ, ಆಪರೇಷನ್ ಸಿಂಧೂರ ಭಾರತದ ಇತಿಹಾಸದಲ್ಲಿ ಒಂದು ಮಹತ್ವದ ಮೈಲಿಗಲ್ಲಾಗಿದೆ.

2025ರ ಮೇ 7ರಂದು ಆರಂಭವಾದ ಈ ಕಾರ್ಯಾಚರಣೆಯು, ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ಮೂಲಸೌಕರ್ಯಗಳ ವಿರುದ್ಧ ನಡೆದ ತೀವ್ರಗತಿಯ ಮತ್ತು ನಿಖರ ಅಭಿಯಾನವಾಗಿತ್ತು. ಇದು ಸಂಘರ್ಷವು ಮಿತಿಮೀರದಂತೆ ಎಚ್ಚರವಹಿಸಿ ಶತ್ರುವಿಗೆ ಗರಿಷ್ಠ ಹಾನಿ ಉಂಟುಮಾಡುವಂತೆ ವಿನ್ಯಾಸಗೊಳಿಸಲಾದ ಭಾರತದ ಸಂಘಟಿತ ಮಿಲಿಟರಿ ಸಾಮರ್ಥ್ಯದ ಪ್ರದರ್ಶನವಾಗಿತ್ತು. 1 ವರ್ಷದ ನಂತರ, ಇದು ಭಾರತದ ಬೆಳೆಯುತ್ತಿರುವ ಕಾರ್ಯತಂತ್ರದ ಪ್ರಬುದ್ಧತೆಗೆ ಸಾಕ್ಷಿಯಾಗಿ ನಿಂತಿದೆ.

ಪರಮಾಣು ಶಸ್ತ್ರಾಸ್ತ್ರ ಹೊಂದಿರುವ ಎದುರಾಳಿಯನ್ನು ಹೊಣೆಗಾರರನ್ನಾಗಿ ಮಾಡುವುದು ಮತ್ತು ಪರಿಸ್ಥಿತಿಯನ್ನು ಹತೋಟಿಯಲ್ಲಿಟ್ಟು ಕೊಂಡೇ ಅಚಲ ಸಂಕಲ್ಪ ಹಾಗೂ ದೃಢ ಉದ್ದೇಶದೊಂದಿಗೆ ತಿರುಗೇಟು ನೀಡುವ ಸಾಮರ್ಥ್ಯವನ್ನು ಭಾರತ ಸಾಬೀತುಪಡಿಸಿದೆ. ಈ ಎಲ್ಲ ದೃಶ್ಯಗಳನ್ನು ನೆನಪಿಸುವ 1:28 ನಿಮಿಷದ ವಿಡಿಯೋವನ್ನು ಭಾರತೀಯ ವಾಯುಪಡೆ ಹಂಚಿಕೊಂಡಿದೆ.

# ಚುನಾವಣಾ ಆಯೋಗದ ಸ್ವಾತಂತ್ರ್ಯ: ರಾಜಕೀಯ ಪಕ್ಷಗಳ ನಿಲುವು ದುರದೃಷ್ಟಕರ- ಸುಪ್ರೀಂ ಬೇಸರ

**ಹೊಸದೆಹಲಿ, ಮೇ 7:** ರಾಜಕೀಯ ಪಕ್ಷಗಳು ವಿರೋಧ ಪಕ್ಷದ ಸ್ಥಾನದಲ್ಲಿದ್ದಾಗ ಸ್ವತಂತ್ರ ಚುನಾವಣಾ ಆಯೋಗಕ್ಕಾಗಿ ಒತ್ತಾಯಿಸುತ್ತವೆ, ಆದರೆ ಅಧಿಕಾರಕ್ಕೆ ಬಂದ ತಕ್ಷಣ ಈ ವಿಷಯದಲ್ಲಿ ಮೌನವಹಿಸುತ್ತವೆ ಅಥವಾ ಸಂಪೂರ್ಣ ವಿರುದ್ಧವಾದ ನಿಲುವು ತಳೆಯುತ್ತವೆ ಎಂದು ಸುಪ್ರೀಂ ಕೋರ್ಟ್ ಬೇಸರ ವ್ಯಕ್ತಪಡಿಸಿದೆ.



ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳು ಸಂವಿಧಾನದ ಮೂಲ ಆಶಯವಾಗಿದ್ದು, ಇದಕ್ಕೆ ಸ್ವತಂತ್ರ ಮತ್ತು ನಿಷ್ಪಕ್ಷಪಾತ ಚುನಾವಣಾ ಆಯೋಗ ಅತ್ಯಗತ್ಯ ಎಂದು ಕೋರ್ಟ್ ಗುರುವಾರ ಸ್ಪಷ್ಟಪಡಿಸಿದೆ.

ನ್ಯಾಯಮೂರ್ತಿ ದೀಪಂಕರ್ ದತ್ತಾ ನೇತೃತ್ವದ ಪೀಠವು (ನ್ಯಾಯಮೂರ್ತಿ ಸತೀಶ್ ಚಂದ್ರ ಶರ್ಮಾ ಅವರನ್ನೂ ಒಳಗೊಂಡಂತೆ), "ಯಾರು ಅಧಿಕಾರಕ್ಕೆ ಬಂದರೂ ಇದನ್ನೇ ಮಾಡುತ್ತಿದ್ದಾರೆ. ಇದು ದೇಶದ ಪಾಲಿಗೆ ಅತ್ಯಂತ ದುರದೃಷ್ಟಕರ," ಎಂದು ವಿಷಾದಿಸಿತು. ಸಂಸದರೊಬ್ಬರು ಈ ಹಿಂದೆ ಹೇಳಿದ್ದ "ಆಯ್ಕೆಯಾಗದವರ ದಬ್ಬಾಳಿಕೆ" ಎಂಬ ಮಾತನ್ನು ಉಲ್ಲೇಖಿಸಿದ ನ್ಯಾಯಮೂರ್ತಿ ದತ್ತಾ, ಇದನ್ನು "ಆಯ್ಕೆಯಾದವರ ದಬ್ಬಾಳಿಕೆ" ಎಂದು ಕರೆಯಬಹುದು ಎಂದರು. ಇದಕ್ಕೆ ಪೂರಕವಾಗಿ ನ್ಯಾಯಮೂರ್ತಿ ಶರ್ಮಾ ಅವರು ಇದನ್ನು "ಬಹುಮತದ ದಬ್ಬಾಳಿಕೆ" ( ಎಂದು ಬಣ್ಣಿಸಿದರು.

ಎನ್‌ಜಿಒ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಪರ ವಾದ ಮಂಡಿಸಿದ ವಕೀಲ ಪ್ರಶಾಂತ್ ಭೂಷಣ್, ಎಲ್ಲಾ ಸರ್ಕಾರಗಳು ಚುನಾವಣಾ ಆಯುಕ್ತರ ನೇಮಕಾತಿಗೆ ಸಂಬಂಧಿಸಿದ ಕಾನೂನಿನ ಕೊರತೆಯನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ಬಳಸಿಕೊಳ್ಳುತ್ತಿವೆ ಎಂದು ದೂರಿದರು. ಚುನಾವಣಾ ಆಯುಕ್ತರ ನೇಮಕಾತಿ ಸಮಿತಿಯಿಂದ ಭಾರತದ ಮುಖ್ಯ ನ್ಯಾಯಮೂರ್ತಿಗಳನ್ನು ಹೊರಗಿಟ್ಟಿರುವ 2023ರ ಹೊಸ ಕಾನೂನಿನ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿದ ಅರ್ಜಿಗಳ ವಿಚಾರಣೆಯನ್ನು ಕೋರ್ಟ್ ನಡೆಸುತ್ತಿದೆ. 2023ರ ಕಾಯ್ದೆಯ ಸೆಕ್ಷನ್ 7ರ ಪ್ರಕಾರ, ನೇಮಕಾತಿ ಸಮಿತಿಯು ಪ್ರಧಾನ ಮಂತ್ರಿ (ಅಧ್ಯಕ್ಷರು), ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ಪ್ರಧಾನ ಮಂತ್ರಿಯವರಿಂದ ನಾಮನಿರ್ದೇಶನಗೊಂಡ ಕೇಂದ್ರ ಸಂಪುಟ ಸಚಿವರನ್ನು ಒಳಗೊಂಡಿರುತ್ತದೆ. ಸಮಿತಿಯಲ್ಲಿ ಸಿಜೆಐ ಬದಲಿಗೆ ಕೇಂದ್ರ ಸಚಿವರನ್ನು ಸೇರಿಸಿರುವುದು ನೇಮಕಾತಿ ಪ್ರಕ್ರಿಯೆಯಲ್ಲಿ ಸರ್ಕಾರದ ಪ್ರಭಾವಕ್ಕೆ ಹೆಚ್ಚು ಅವಕಾಶ ಮಾಡಿಕೊಡುತ್ತದೆ ಮತ್ತು ಇದು ಆಯೋಗದ ನಿಷ್ಪಕ್ಷಪಾತತೆಯನ್ನು ಕುಂದಿಸುತ್ತದೆ ಎಂದು ಅರ್ಜಿದಾರರು ವಾದಿಸಿದರು. ಮಾರ್ಚ್ 2, 2023 ರ ಸುಪ್ರೀಂ ಕೋರ್ಟ್ ತೀರ್ಪಿನಲ್ಲಿ, ಸಂಸತ್ತು ಕಾನೂನು ರೂಪಿಸುವವರೆಗೆ ಪ್ರಧಾನಿ, ವಿರೋಧ ಪಕ್ಷದ ನಾಯಕ ಮತ್ತು ಸಿಜೆಐ ಒಳಗೊಂಡ ಸಮಿತಿಯೇ ನೇಮಕಾತಿ ಮಾಡಬೇಕು ಎಂದು ಸೂಚಿಸಲಾಗಿತ್ತು. ಈಗಿನ ಕಾನೂನು ಈ ತೀರ್ಪಿನ ಆಶಯಕ್ಕೆ ವಿರುದ್ಧವಾಗಿದೆಯೇ ಎಂಬುದನ್ನು ನ್ಯಾಯಾಲಯ ಪರಿಶೀಲಿಸುತ್ತಿದೆ.

# ಟಿವಿಕೆಯಿಂದ ಸೆಳೆಯುವ ಯತ್ನ: ಎಡಿಎಂಕೆ 28 ಶಾಸಕರು ರೆಸಾರ್ಟ್‌ಗೆ ಸ್ಥಳಾಂತರ

**ಪುದುಚೇರಿ, ಮೇ 7:** ತಮಿಳುನಾಡಿನಲ್ಲಿ ಸರ್ಕಾರ ರಚನೆಗೆ ಸಂಬಂಧಿಸಿದಂತೆ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿದ್ದು, ಇಪ್ಪತ್ತೆಂಟು ಎಐಎಡಿಎಂಕೆ ಶಾಸಕರನ್ನು ಪುದುಚೇರಿಯ ಪೂರನ್‌ಕುಪ್ಪಂನಲ್ಲಿರುವ ಖಾಸಗಿ ರೆಸಾರ್ಟ್‌ಗೆ ಸ್ಥಳಾಂತರ ಮಾಡಲಾಗಿದೆ ಎಂದು ವರದಿಯಾಗಿದೆ.



ಟಿವಿಕೆ ಪಕ್ಷಕ್ಕೆ ಬೆಂಬಲ ನೀಡುವ ವಿಚಾರಕ್ಕೆ ಎಐಎಡಿಎಂಕೆ ಪಕ್ಷದಲ್ಲಿ ಬಿರುಕು ಮೂಡಿದ್ದು, ಕೆಲವು ಶಾಸಕರು ವಿಜಯ್ ಪರ ಒಲವು ಹೊಂದಿದ್ದಾರೆ. ಹೀಗಾಗಿ ಎಐಎಡಿಎಂಕೆ ಹಿರಿಯ ನಾಯಕ ಸಿವಿ ಷಣ್ಮುಗಂ ಬೆಂಬಲಿಗ ಶಾಸಕರನ್ನು ರೆಸಾರ್ಟ್‌ಗೆ ಸ್ಥಳಾಂತರ ಮಾಡಲಾಗಿದೆ ಎನ್ನಲಾಗಿದೆ.

ಎಐಎಡಿಎಂಕೆಯ ಶಾಸಕರು ರೆಸಾರ್ಟ್‌ನಲ್ಲಿರುವ ವೀಡಿಯೋಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿವೆ. ಟಿವಿಕೆ ನಮ್ಮ ಶಾಸಕರನ್ನು ಸೆಳೆಯುವ ಪ್ರಯತ್ನ ಮಾಡಬಹುದು ಎಂಬ ಭೀತಿಯಿಂದ ಅವರನ್ನು ರೆಸಾರ್ಟ್ ಕರೆದೊಯ್ಯಲಾಗಿದೆ ಎಂದು ಎಐಎಡಿಎಂಕೆ ಹೇಳಿದೆ. ತಮಿಳಗ ವೆಟ್ರಿ ಕಳಗಂ(ಟಿವಿಕೆ) ಮುಖ್ಯಸ್ಥ ವಿಜಯ್ ಅವರು ಈಗಾಗಲೇ ಐದು ಕಾಂಗ್ರೆಸ್ ಶಾಸಕರ ಬೆಂಬಲವನ್ನು ಪಡೆದುಕೊಂಡಿದ್ದಾರೆ. ಆದರೆ ತಮಿಳುನಾಡು ವಿಧಾನಸಭೆಯಲ್ಲಿ ಬಹುಮತವನ್ನು ತಲುಪಲು ಇನ್ನೂ ಐದು ಶಾಸಕರ ಬೆಂಬಲದ ಅಗತ್ಯವಿದೆ.

# ನಕಲಿ ಎನ್‌ಕೌಂಟರ್ ಪ್ರಕರಣ: ಖುಲಾಸೆ ಆದೇಶ ಎತ್ತಿಹಿಡಿದ ಹೈಕೋರ್ಟ್

**ಮುಂಬೈ, ಮೇ 7:** ದೇಶಾದ್ಯಂತ ಭಾರಿ ಸಂಚಲನ ಮೂಡಿಸಿದ್ದ 2005ರ ಸೊಹ್ರಾಬುದ್ದೀನ್ ಶೇಖ್ ನಕಲಿ ಎನ್‌ಕೌಂಟರ್ ಪ್ರಕರಣದಲ್ಲಿ, ಎಲ್ಲಾ 22 ಮಂದಿ ಆರೋಪಿಗಳನ್ನು ಖುಲಾಸೆಗೊಳಿಸಿ ಸಿಬಿಐ ವಿಶೇಷ ನ್ಯಾಯಾಲಯ ನೀಡಿದ್ದ ಆದೇಶವನ್ನು ಬಾಂಬೆ ಹೈಕೋರ್ಟ್ ಗುರುವಾರ ಎತ್ತಿಹಿಡಿದಿದೆ.

ಮುಖ್ಯ ನ್ಯಾಯಮೂರ್ತಿ ಶ್ರೀ ಚಂದ್ರಶೇಖರ್ ಹಾಗೂ ನ್ಯಾಯಮೂರ್ತಿ ಗೌತಮ್ ಅನ್ಖಾದ್ ಅವರನ್ನೊಳಗೊಂಡ ವಿಭಾಗೀಯ ಪೀಠವು ಈ ಮಹತ್ವದ ತೀರ್ಪು ನೀಡಿದ್ದು, ಆರೋಪಿಗಳ ಖುಲಾಸೆಯನ್ನು ಪ್ರಶ್ನಿಸಿ ಸೋಹ್ರಾಬುದ್ದೀನ್ ಸಹೋದರರಾದ ರುಬಾಬುದ್ದೀನ್ ಮತ್ತು ನಯಾಬುದ್ದೀನ್ ಸಲ್ಲಿಸಿದ್ದ ಮೇಲ್ಮನವಿಗಳನ್ನು ವಜಾಗೊಳಿಸಿದೆ.

ನವೆಂಬರ್ 2005ರಲ್ಲಿ ಗುಜರಾತ್ ಮತ್ತು ರಾಜಸ್ಥಾನ ಪೊಲೀಸರು ಜಂಟಿಯಾಗಿ ಕಾರ್ಯಾಚರಣೆ ನಡೆಸಿ, ಸೊಹ್ರಾಬುದ್ದೀನ್ ಶೇಖ್ ಮತ್ತು ಆತನ ಪತ್ನಿ ಕೌಸರ್ ಅವರನ್ನು ಗಾಂಧಿನಗರದ ಬಳಿ ನಕಲಿ ಎನ್‌ಕೌಂಟರ್‌ನಲ್ಲಿ ಹತ್ಯೆ ಮಾಡಿದ್ದಾರೆ ಎಂಬುದು ಆರೋಪವಾಗಿತ್ತು. ಇದರ ಏಕೈಕ ಸಾಕ್ಷಿಯಾಗಿದ್ದ ಅವರ ಸಹಚರ ತುಳಸಿರಾಮ್ ಪ್ರಜಾಪತಿಯನ್ನು ಸಹ 2006ರ ಡಿಸೆಂಬರ್‌ನಲ್ಲಿ ಇದೇ ರೀತಿ ಹತ್ಯೆ ಮಾಡಲಾಗಿತ್ತು ಎಂದು ಪ್ರಕರಣ ದಾಖಲಾಗಿತ್ತು. ಈ ಪ್ರಕರಣದ ಸುದೀರ್ಘ ವಿಚಾರಣೆ ನಡೆಸಿದ್ದ ಮುಂಬೈನ ಸಿಬಿಐ ವಿಶೇಷ ನ್ಯಾಯಾಲಯವು, ಡಿಸೆಂಬರ್ 21, 2018 ರಂದು ತನ್ನ ತೀರ್ಪು ಪ್ರಕಟಿಸಿತ್ತು. ಹತ್ಯೆಗಳ ಹಿಂದೆ ಪಿತೂರಿ ನಡೆದಿದೆ ಎಂಬುದನ್ನು ಯಾವುದೇ ಸಂಶಯಕ್ಕೆ ಎಡೆಮಾಡಿಕೊಡದಂತೆ ಸಾಬೀತುಪಡಿಸಲು ಪ್ರಾಸಿಕ್ಯೂಷನ್ ವಿಫಲವಾಗಿದೆ ಎಂದು ಅಭಿಪ್ರಾಯಪಟ್ಟಿದ್ದ ನ್ಯಾಯಾಲಯವು, ಎಲ್ಲಾ 22 ಆರೋಪಿಗಳನ್ನು ದೋಷಮುಕ್ತಗೊಳಿಸಿತ್ತು. ಖುಲಾಸೆಗೊಂಡವರಲ್ಲಿ ಗುಜರಾತ್ ಮತ್ತು ರಾಜಸ್ಥಾನದ 21 ಮಂದಿ ಪೊಲೀಸ್ ಸಿಬ್ಬಂದಿ ಹಾಗೂ ಗುಜರಾತ್ನ ಫಾರ್ಮ್‌ಹೌಸ್ ಮಾಲೀಕರೊಬ್ಬರು ಸೇರಿದ್ದರು.



ವಿಶೇಷ ನ್ಯಾಯಾಲಯದ ಈ ತೀರ್ಪನ್ನು ಪ್ರಶ್ನಿಸಿ ಸೊಹ್ರಾಬುದ್ದೀನ್ ಸಹೋದರರು 2019ರ ಏಪ್ರಿಲ್‌ನಲ್ಲಿ ಬಾಂಬೆ ಹೈಕೋರ್ಟ್ ಮೆಟ್ಟಿಲೇರಿದ್ದರು. ಪ್ರಕರಣದ ವಿಚಾರಣೆ ನ್ಯಾಯಯುತವಾಗಿ ನಡೆದಿಲ್ಲ ಹಾಗೂ ಪ್ರಮುಖ ಸಾಕ್ಷಿಗಳ ಹೇಳಿಕೆಗಳನ್ನು ಸರಿಯಾಗಿ ಪರಿಗಣಿಸಿಲ್ಲ ಎಂದು ಅವರು ವಾದಿಸಿದ್ದರು. ಒಟ್ಟು 210 ಸಾಕ್ಷಿಗಳ ಪೈಕಿ 92 ಮಂದಿ ಪ್ರತಿಕೂಲ ಸಾಕ್ಷಿಗಳಾಗಿದ್ದನ್ನು ಮೇಲ್ಮನವಿಯಲ್ಲಿ ಪ್ರಸ್ತಾಪಿಸಲಾಗಿತ್ತು.

ಆದರೆ, ಪ್ರಕರಣದ ತನಿಖೆ ನಡೆಸಿದ್ದ ಸಿಬಿಐ, 2018ರ ಸಿಬಿಐ ವಿಶೇಷ ನ್ಯಾಯಾಲಯದ ತೀರ್ಪನ್ನು ತಾನು ಒಪ್ಪಿಕೊಂಡಿರುವುದಾಗಿ ಹಾಗೂ ತಾನು ಮೇಲ್ಮನವಿ ಸಲ್ಲಿಸುವುದಿಲ್ಲ ಎಂದು ಹೈಕೋರ್ಟ್ಗೆ ಸ್ಪಷ್ಟಪಡಿಸಿತ್ತು.

ವಾದ-ಪ್ರತಿವಾದಗಳನ್ನು ಆಲಿಸಿದ ಹೈಕೋರ್ಟ್ ವಿಭಾಗೀಯ ಪೀಠವು, ಆರೋಪಿಗಳ ವಿರುದ್ಧದ ಆರೋಪಗಳನ್ನು ದೃಢೀಕರಿಸಲು ಸೂಕ್ತ ಸಾಕ್ಷ್ಯಾಧಾರಗಳ ಕೊರತೆ ಇರುವುದನ್ನು ಗಮನಿಸಿ ಕೆಳ ನ್ಯಾಯಾಲಯದ ಆದೇಶವನ್ನು ಇದೀಗ ಎತ್ತಿಹಿಡಿದಿದೆ.

# 36 ಗಂಟೆಗಳಲ್ಲಿ 8 ಎನ್‌ಕೌಂಟರ್ ಪೊಲೀಸರಿಂದ 12 ಪಾತಕಿಗಳ ಸೆರೆ



**ಲಖನೌ, ಮೇ7:** ಉತ್ತರ ಪ್ರದೇಶದಲ್ಲಿ ಕಳೆದ 36 ಗಂಟೆಗಳೊಳಗೆ ಪೊಲೀಸರು ಬರೋಬ್ಬರಿ 8 ಎನ್‌ಕೌಂಟರ್ ನಡೆಸಿದ್ದು, 12 ಆರೋಪಿಗಳನ್ನು ಬಂಧಿಸಿದ್ದಾರೆ. ರಾಜ್ಯದ ಮುಜಫರ್‌ನಗರ ಜಿಲ್ಲೆಯಲ್ಲಿ ಕಳೆದ 36 ಗಂಟೆಗಳಲ್ಲಿ ಈ ಎನ್‌ಕೌಂಟರ್ ನಡೆದಿದ್ದು, ಒಟ್ಟು 10 ಮಂದಿ ಗಾಯಗೊಂಡಿದ್ದಾರೆ. ದರೋಡೆ, ದರೋಡೆ ಯತ್ನ, ಮೊಬೈಲ್ ಕಳವು ಮತ್ತು ಪಶು ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದರೆಂದು ಆರೋಪಿಸಲಾದ 12 ಮಂದಿಯನ್ನು ಈ ಎನ್‌ಕೌಂಟರ್ ನಡೆಸಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಂಧಿತರಾದ ಆರೋಪಿಗಳಲ್ಲಿ 10 ಮಂದಿಗೆ ಗುಂಡೇಟಿನ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಮಾಧ್ಯಮಗಳಿಗೆ ಮಾಹಿತಿ ನೀಡಿದ ಹಿರಿಯ ಪೊಲೀಸ್ ಅಧೀಕ್ಷಕ ಸಂಜಯ್ ಕುಮಾರ್, ಮುಜಫರ್‌ನಗರ ಜಿಲ್ಲೆಯ ಬುಧಾನಾ, ಮನ್ಸೂರ್‌ಪುರ್, ಸಿಟಿ, ನ್ಯೂ ಮಂಡಿ ಮತ್ತು ಶಾಹಪುರ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಈ ಎನ್‌ಕೌಂಟರ್‌ಗಳು ನಡೆದಿವೆ. ಬಂಧಿತರನ್ನು ಶಾರುಖ್ ಶೇಖ್, ಮನೀಶ್, ಶಿವಂ, ಸಲ್ಮಾನ್, ಖುಷ್ನಸೀಬ್, ಅಮರ್, ಗುಡ್ಡು, ಅಭಿಷೇಕ್, ಅರ್ಶಾದ್ ಮತ್ತು ಮೊಮಿನ್ ಸೇರಿದಂತೆ ಇತರರು ಎಂದು ಗುರುತಿಸಲಾಗಿದೆ ಎಂದು ತಿಳಿಸಿದ್ದಾರೆ.

ಈ ಪ್ರಕರಣದ ಕುರಿತು ಮುಂದಿನ ತನಿಖೆ ಮುಂದುವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಹಾರಾಟದ ವೇಳೆ ದಾರಿ ತಪ್ಪಿದ ವಿಮಾನ

- ಪೈಲಟ್‌ನ ಸಮಯಪ್ರಜ್ಞೆಯಿಂದ ಜುಹು ಏರ್‌ಪೋರ್ಟ್‌ನಲ್ಲಿ ಲ್ಯಾಂಡಿಂಗ್
- ಉಪಮುಖ್ಯಮಂತ್ರಿ ಸೇರಿ ಏಕನಾಥ್‌ಶಿಂಧೆ ನಿಟ್ಟುಸಿರು

**ಮುಂಬೈ, ಮೇ 7:** ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಪ್ರಯಾಣಿಸುತ್ತಿದ್ದ ವಿಮಾನವು ಹಾರಾಟದ ವೇಳೆ ಕೆಲಕಾಲ ದಾರಿ ತಪ್ಪಿದ ಘಟನೆ ಗುರುವಾರ ನಡೆದಿದೆ. ಆದರೆ ಪೈಲಟ್‌ನ ಸಮಯಪ್ರಜ್ಞೆ ವಿಮಾನವನ್ನು ಸುರಕ್ಷಿತವಾಗಿ ಜುಹು ಏರ್‌ಪೋರ್ಟ್‌ನಲ್ಲಿ ಇಳಿಸಲಾಗಿದೆ. ಮೂಲಗಳ ಪ್ರಕಾರ, ಹವಾಮಾನ ಹಾಗೂ ತಾಂತ್ರಿಕ ಸಂವಹನದ ಅಡಚಣೆಗಳಿಂದ ವಿಮಾನದ ದಿಕ್ಕಿನಲ್ಲಿ ಗೊಂದಲ ಉಂಟಾಗಿತ್ತು ಎನ್ನಲಾಗಿದೆ. ಪರಿಸ್ಥಿತಿಯನ್ನು ಗಮನಿಸಿದ ಪೈಲಟ್ ತಕ್ಷಣವೇ ವಿಮಾನ ನಿಯಂತ್ರಣ ಕೇಂದ್ರದೊಂದಿಗೆ ಸಂಪರ್ಕ ಸಾಧಿಸಿ, ಸುರಕ್ಷಿತ ಮಾರ್ಗದರ್ಶನದ ಮೂಲಕ ವಿಮಾನವನ್ನು ಜುಹು ವಿಮಾನ ನಿಲ್ದಾಣದಲ್ಲಿ ಯಶಸ್ವಿಯಾಗಿ ಲ್ಯಾಂಡ್ ಮಾಡಿದ್ದಾರೆ. ಘಟನೆ ವೇಳೆ ವಿಮಾನದಲ್ಲಿದ್ದ ಪ್ರಯಾಣಿಕರಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಆದರೆ ಸುರಕ್ಷಿತ ಲ್ಯಾಂಡಿಂಗ್ ಬಳಿಕ ಎಲ್ಲರೂ ನಿಟ್ಟುಸಿರು ಬಿಟ್ಟರು. ಉಪ ಮುಖ್ಯಮಂತ್ರಿ ಶಿಂಧೆ ಅವರು ಸಹ ಪೈಲಟ್‌ನ ತಕ್ಷಣದ ನಿರ್ಧಾರ ಮತ್ತು ಕಾರ್ಯಕ್ಷಮತೆಯನ್ನು ಶ್ಲಾಘಿಸಿದ್ದಾರೆ. ಈ ಘಟನೆ ಕುರಿತು ವಿಮಾನಯಾನ ಅಧಿಕಾರಿಗಳು ಹೆಚ್ಚಿನ ಮಾಹಿತಿ ಸಂಗ್ರಹಿಸುತ್ತಿದ್ದು, ತಾಂತ್ರಿಕ ಮತ್ತು ಹವಾಮಾನ ಸಂಬಂಧಿತ ಅಂಶಗಳ ಪರಿಶೀಲನೆ ನಡೆಯುತ್ತಿದೆ.

# ಪಶ್ಚಿಮ ಬಂಗಾಲವನ್ನು ಪ್ರತ್ಯೇಕ ರಾಷ್ಟ್ರವೆಂದು ಘೋಷಿಸಿ: ಮಮತಾಗೆ ಬಾಂಗ್ಲಾ ಒತ್ತಾಯ

- ದೆಹಲಿ ವಿರುದ್ಧ ಯುದ್ಧ ಘೋಷಿಸಿ, ನಿಮ್ಮ ಬೆಂಬಲಕ್ಕೆ 17 ಕೋಟಿ ಬಾಂಗ್ಲಾದೇಶಿಗಳಿದ್ದಾರೆ
- ಮೊಹಮ್ಮದ್ ನೂರುಲ್ ಹುಡಾ ಪ್ರಚೋದನಾಕಾರಿ ಹೇಳಿಕೆಯ ವೀಡಿಯೋ ವೈರಲ್

**ಕೋಲ್ಕತ್ತಾ, ಮೇ 7:** ಇತ್ತೀಚೆಗೆ ನಡೆದ ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ ಐತಿಹಾಸಿಕ ಗೆಲುವು ಸಾಧಿಸಿದ್ದು, 15 ವರ್ಷಗಳ ಮಮತಾ ಬ್ಯಾನರ್ಜಿ ಆಡಳಿತ ಅಂತ್ಯಗೊಂಡಿದೆ. ಟಿಎಂಸಿ ಹೀನಾಯ ಸೋಲಿನ ನಂತರ ರಾಜ್ಯದಲ್ಲಿ ಚುನಾವಣೋತ್ತರ ಹಿಂಸಾಚಾರ ತೀವ್ರಗೊಂಡಿದೆ. ಇದರ ಬೆನ್ನಲ್ಲೇ ಬಾಂಗ್ಲಾದೇಶದ ನಾಯಕರೊಬ್ಬರು ಉರಿಯುವ ಬೆಂಕಿಗೆ ತುಪ್ಪ ಸುರಿಯುವಂತಹ ಅಪಾಯಕಾರಿ ಹೇಳಿಕೆ ನೀಡಿದ್ದು, ಪಶ್ಚಿಮ ಬಂಗಾಳವನ್ನು ಪ್ರತ್ಯೇಕ ರಾಷ್ಟ್ರವೆಂದು ಘೋಷಿಸುವಂತೆ ಮಮತಾ ಬ್ಯಾನರ್ಜಿ ಅವರಿಗೆ ಒತ್ತಾಯಿಸಿದ್ದು, ಹೊಸ ವಿವಾದಕ್ಕೆ ನಾಂದಿ ಹಾಡಿದ್ದಾರೆ.

ಬಾಂಗ್ಲಾದೇಶದ ನಾಯಕ ಮೊಹಮ್ಮದ್ ನೂರುಲ್ ಹುಡಾ ಈ ಪ್ರಚೋದನಕಾರಿ ಹೇಳಿಕೆ ನೀಡಿದ್ದು, ಮಮತಾ ಬ್ಯಾನರ್ಜಿ ಅವರಿಗೆ "ದೆಹಲಿಯ ವಿರುದ್ಧ ಯುದ್ಧ ಘೋಷಿಸುವಂತೆ" ಆಗ್ರಹಿಸಿದ್ದಾರೆ ಮತ್ತು ನಿಮ್ಮ ಬೆನ್ನಿಗೆ 17 ಕೋಟಿ ಬಾಂಗ್ಲಾದೇಶಿ ಮುಸ್ಲಿಮರು ನಿಲ್ಲುತ್ತಾರೆ ಎಂದು ಹೇಳಿದ್ದಾರೆ. ಈ ಹೇಳಿಕೆಯು ಭಾರತದ ಸಾರ್ವಭೌಮತ್ವಕ್ಕೆ ನೇರ ಸವಾಲಾಗಿದ್ದು, ಭದ್ರತಾ ಸಂಸ್ಥೆಗಳ ಕೆಂಗಣ್ಣಿಗೆ ಗುರಿಯಾಗಿದೆ. ವೈರಲ್ ಆಗಿರುವ ವಿಡಿಯೋದಲ್ಲಿ ನೂರುಲ್ ಹುಡಾ ಮಮತಾ ಬ್ಯಾನರ್ಜಿ ಅವರನ್ನು ಉದ್ದೇಶಿಸಿ ಮಾತನಾಡುತ್ತಾ, ನೀವು ಯಾವುದೇ ಕಾರಣಕ್ಕೂ ಸೋಲೊಪ್ಪಬಾರದು. ಪಶ್ಚಿಮ ಬಂಗಾಳವನ್ನು ಸ್ವತಂತ್ರ ಎಂದು ಘೋಷಿಸಿ. ಭಾರತ ಸರ್ಕಾರದ ವಿರುದ್ಧ ಯುದ್ಧ ಆರಂಭಿಸಿ ಎಂದು ಕರೆ ನೀಡಿದ್ದಾರೆ.

ಈ ವಿಡಿಯೋದಲ್ಲಿರುವ ವ್ಯಕ್ತಿ ತನ್ನನ್ನು ತಾನು ಬಾಂಗ್ಲಾದೇಶದ ನಾಯಕನೆಂದು ಬಿಂಬಿಸಿಕೊಂಡಿದ್ದರೂ, ಆತನ ನಿಜವಾದ ಗುರುತಿನ ಬಗ್ಗೆ ಗೊಂದಲಗಳಿವೆ. ಇತ್ತೀಚೆಗಷ್ಟೇ ಬಾಂಗ್ಲಾದೇಶದಲ್ಲಿ ನಡೆದ ಪ್ರತಿಭಟನೆಯ ವೇಳೆ ಸುದ್ದಿಯಲ್ಲಿದ್ದರು.




ವಿಶ್ವ ಥಲಸ್ಸೇಮಿಯಾ ದಿನದ ಅಂಗವಾಗಿ ಬೆಂಗಳೂರಿನಲ್ಲಿ ಗುರುವಾರ ಡಿಕೆಎಂಎಸ್ ಫೌಂಡೇಶನ್ ಇಂಡಿಯಾ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ, 12 ವರ್ಷದ ಥಲಸ್ಸೇಮಿಯಾ ಬದುಕುಳಿದ ಸಮೀಕ್ಷಾ ತನ್ನ ಕಾಂಡಕೋಶ ದಾನಿ ದಿಲೀಪ್ ಕೆ ಅವರನ್ನು ಮೊದಲ ಬಾರಿಗೆ ಭೇಟಿಯಾದ ಹೃದಯಸ್ಪರ್ಶಿ ಕ್ಷಣ.

# ಜೂನ್ ಅಂತ್ಯದೊಳಗೆ ಬೆಂಗಳೂರು-ಮುಂಬೈ ಸೂಪರ್‌ಫಾಸ್ಟ್ ರೈಲು ಸಂಚಾರ ಆರಂಭ

- ಸಚಿವ ಪ್ರಲ್ಹಾದ ಜೋಶಿ ಮನವಿಗೆ ಸಚಿವ ಅಶ್ವಿನಿ ವೈಷ್ಣವ ಸ್ಪಂದನೆ
- ಕ್ರಮೇಣವಾಗಿ ವಂದೇಭಾರತ್ ಸ್ಲೀಪರ್ ರೈಲಾಗಿ ಪರಿವರ್ತನೆ

**ಬೆಂಗಳೂರು, ಮೇ7:** ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಆಶಯದಂತೆ ಉತ್ತರ ಕರ್ನಾಟಕ ಮತ್ತು ಮಧ್ಯ ಕರ್ನಾಟಕದ ಸಂಪರ್ಕ ಸೇತುವಾಗಿ "ಬೆಂಗಳೂರು-ಮುಂಬೈ ಸೂಪರ್ ಫಾಸ್ಟ್ ರೈಲು" ಜೂನ್ ಅಂತ್ಯದೊಳಗೆ ಸಂಚಾರ ಆರಂಭಿಸಲಿದೆ. ಅಲ್ಲದೆ, ನಂತರದ ದಿನಗಳಲ್ಲಿದು "ವಂದೇ ಭಾರತ್ ಸ್ಲೀಪರ್" ರೈಲಾಗಿ ಪರಿವರ್ತನೆಗೊಳ್ಳುವ ಸೂಚನೆ ಸಹ ಸಿಕ್ಕಿದೆ.




ಈ ಕುರಿತಂತೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

ರಾಜಧಾನಿ ಬೆಂಗಳೂರಿನಿಂದ ಪ್ರಮುಖ ವಾಣಿಜ್ಯ ನಗರಿ ಮುಂಬೈಗೆ ತೆರಳುವ ಈ "ಸೂಪರ್ ಫಾಸ್ಟ್" ರೈಲು ಮಧ್ಯ ಕರ್ನಾಟಕದ ತುಮಕೂರು, ದಾವಣಗೆರೆ, ಹಾವೇರಿ ಹಾಗೂ ಉತ್ತರ ಕರ್ನಾಟಕದ ಹುಬ್ಬಳ್ಳಿ-ಧಾರವಾಡ ಮತ್ತು ಬೆಳಗಾವಿ ಮಾರ್ಗದ ಮೂಲಕ ಸಂಚರಿಸಲಿದೆ. ತಮ್ಮ ಒತ್ತಾಸೆಯಂತೆ ಈ "ಬೆಂಗಳೂರು-ಮುಂಬೈ ಸೂಪರ್ ಫಾಸ್ಟ್" ರೈಲು ಸಂಚಾರವನ್ನು ಬಹುತೇಕ ಜೂನ್ ಅಂತ್ಯದೊಳಗೆ ಆರಂಭಿಸುವುದಾಗಿ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

**ವಂದೇ ಭಾರತ್ ಸ್ಲೀಪರ್ ಆಗಿಸಿ:** ಇದೇ ವೇಳೆ ಸಚಿವ ಜೋಶಿ ಅವರು, ಮುಂದಿನ ದಿನಗಳಲ್ಲಿ ಬೆಂಗಳೂರು-ಮುಂಬೈ ನಡುವಿನ ಈ ಸೂಪರ್ ಫಾಸ್ಟ್ ರೈಲನ್ನು "ವಂದೇ ಭಾರತ್ ಸ್ಲೀಪರ್" ರೈಲಾಗಿ ಸಹ ಬದಲಾಯಿಸುವಂತೆ ಮನವಿ ಮಾಡಿದ್ದು, ಇದಕ್ಕೂ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸಮ್ಮತಿ ವ್ಯಕ್ತಪಡಿಸಿದ್ದಾರೆ.

ಇದರೊಂದಿಗೆ, ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮೀಜಿ ರೈಲ್ವೆ ನಿಲ್ದಾಣದ ನವೀಕರಣ ಮತ್ತು ಹೆಚ್ಚಿನ ಅತ್ಯಾಧುನಿಕ ಸೌಕರ್ಯಗಳನ್ನು ಕಲ್ಪಿಸುವ ಕುರಿತು ಸಚಿವ ಜೋಶಿ ಅವರು ರೈಲ್ವೆ ಸಚಿವರೊಂದಿಗೆ ಚರ್ಚಿಸಿದರು.

ಬೆಳಗಾವಿ ಸಂಸದರು, ಮಾಜಿ ಸಿಎಂ ಆದ ಜಗದೀಶ ಶೆಟ್ಟರ್ ಅವರ ಪ್ರಸ್ತಾವನೆಯಂತೆ ಲೋಕಾಪುರ-ಸವದತ್ತಿ-ಧಾರವಾಡ ರೈಲ್ವೆ ಮಾರ್ಗ ಮರು ಸರ್ವೇ ಬಗ್ಗೆ ಸಹ ಸಚಿವದ್ವಯರು ಸುದೀರ್ಘ ಚ ಚ ನಡೆಸಿದ್ದು, ಈ ಸಂಬಂಧ ರೈಲ್ವೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಬೆಂಗಳೂರು-ಮುಂಬೈ ಸೂಪರ್ ಫಾಸ್ಟ್ ನೂತನ ರೈಲು ಸಂಚಾರಕ್ಕೆ ಅನುವು ಮಾಡಿಕೊಟ್ಟ ಪ್ರಧಾನಿ ನರೇಂದ್ರ ಮೋದಿ ಮತ್ತು ಸಚಿವ ಅಶ್ವಿನಿ ವೈಷ್ಣವ್ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ರಾಜ್ಯದ ಪರವಾಗಿ ಸಚಿವ ಪ್ರಲ್ಹಾದ ಜೋಶಿ ಧನ್ಯವಾದ ಅರ್ಪಿಸಿದ್ದಾರೆ.

### ಆರೋಗ್ಯ ಸೌಧದಲ್ಲಿ ತುರ್ತು ಕಾರ್ಯಾಚರಣೆ ಕೇಂದ್ರ ಉದ್ಘಾಟನೆ

## ಆರೋಗ್ಯ ಸ್ಥಿತಿ, ವಿಪತ್ತು ಎದುರಿಸಲು ಆರೋಗ್ಯ ಇಲಾಖೆ ಸಜ್ಜು: ದಿನೇಶ್ ಗುಂಡೂರಾವ್

**ಬೆಂಗಳೂರು, ಮೇ.7:** ರಾಜ್ಯದಲ್ಲಿ ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿ ಮತ್ತು ವಿಪತ್ತುಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ಎದುರಿಸಲು ಆರೋಗ್ಯ ಇಲಾಖೆ ಸಜ್ಜಾಗಿದೆ. ಈ ನಿಟ್ಟಿನಲ್ಲಿ ಅತ್ಯಾಧುನಿಕ ಆರೋಗ್ಯ ತುರ್ತು ಕಾರ್ಯಾಚರಣೆ ಕೇಂದ್ರವನ್ನು ಗುರುವಾರ ಉದ್ಘಾಟಿಸಲಾಯಿತು.



ಆರೋಗ್ಯ ಸೌಧದಲ್ಲಿ ಸ್ಥಾಪಿಸಲಾಗಿರುವ ಈ ಕೇಂದ್ರವನ್ನು ಉದ್ಘಾಟಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ರಾಜ್ಯದ ಸಾರ್ವಜನಿಕ ಆರೋಗ್ಯ ಮೂಲಸೌಕರ್ಯ ಬಲವರ್ಧನೆಗೆ ಇದು ಸಹಕಾರಿಯಾಗಲಿದೆ. ದೇಶವು ಸಾಂಕ್ರಾಮಿಕ ರೋಗಗಳು ಮತ್ತು ಪ್ರಕೃತಿ ವಿಕೋಪಗಳು ಸೇರಿದಂತೆ ವಿವಿಧ ಆರೋಗ್ಯ ತುರ್ತು ಪರಿಸ್ಥಿತಿಗಳಿಗೆ ಅತೀ ಹೆಚ್ಚು ಅಪಾಯಕ್ಕೊಳಗಾಗುವ ರಾಷ್ಟ್ರವಾಗಿದೆ. ಕೋವಿಡ್–19 ಮಹಾಮಾರಿಯು ಆರೋಗ್ಯ ವ್ಯವಸ್ಥೆ ಮೇಲ್ವಿಚಾರಣೆ ಮತ್ತು ತ್ವರಿತ ಪ್ರತಿಕ್ರಿಯೆ ವ್ಯವಸ್ಥೆಯಲ್ಲಿದ್ದ ಅಗತ್ಯಗಳನ್ನು ಎತ್ತಿ ತೋರಿಸಿತ್ತು.

ಈ ಸವಾಲುಗಳನ್ನು ಎದುರಿಸಲು ಭಾರತ ಸರ್ಕಾರದ 'ಪ್ರಧಾನಮಂತ್ರಿ ಆಯುಷ್ಮಾನ್ ಭಾರತ ಆರೋಗ್ಯ ಮೂಲಸೌಕರ್ಯ ಮಿಷನ್' ಅಡಿಯಲ್ಲಿ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ. ತುರ್ತು ಪರಿಸ್ಥಿತಿಗಳಲ್ಲಿ ಸಮಯೋಚಿತ ನಿರ್ಧಾರ, ಸಂಪನ್ಮೂಲಗಳ ಪರಿಣಾಮಕಾರಿ ಬಳಕೆ ಹಾಗೂ ನೈಜ-ಸಮಯದ ಮಾಹಿತಿ ನಿರ್ವಹಣೆಗೆ ಇದು ಕೇಂದ್ರಿಯ ನಿಯಂತ್ರಣ ಘಟಕವಾಗಿ ಕಾರ್ಯ ನಿರ್ವಹಿಸಲಿದೆ. ಇಂತಹ ಅತ್ಯಾಧುನಿಕ ಕೇಂದ್ರವನ್ನು ಸ್ಥಾಪಿಸಿ ಕಾರ್ಯಾರಂಭಗೊಳಿಸಿರುವ ದೇಶದ ಮೊದಲ ಪ್ರಮುಖ ರಾಜ್ಯಗಳಲ್ಲಿ ಕರ್ನಾಟಕವೂ ಒಂದಾಗಿದೆ ಎಂದರು.

**ರಾಜ್ಯಾದ್ಯಂತ ಪ್ಯಾಲಿಯೇಟಿವ್ ಕೇರ್ ಕೇಂದ್ರ ವಿಸ್ತರಣೆ:**

ಹಿಂದಿನ ವ್ಯವಸ್ಥೆಯಲ್ಲಿ ಪ್ರತಿಕ್ರಿಯೆಗಳು ವಿಭಜಿತವಾಗಿದ್ದವು. ನೈಜ–ಸಮಯದ ಮಾಹಿತಿಯ ಕೊರತೆಯಿತ್ತು. ಆದರೆ ಈ ಹೊಸ **HEOC** ಕೇಂದ್ರವು 24 ಗಂಟೆಗಳ ನಿರಂತರ ಮೇಲ್ವಿಚಾರಣೆ ನಡೆಸಲಿದೆ. ಏಕೀಕೃತ ಸಂವಹನ ಮತ್ತು ತ್ವರಿತ ಸಂಪನ್ಮೂಲ ನಿಯೋಜನೆಗೆ ಅವಕಾಶ ಕಲ್ಪಿಸಿದೆ. ಇದು ಪ್ರತಿಕ್ರಿಯಾತ್ಮಕ ವ್ಯವಸ್ಥೆಯಿಂದ ಪೂರ್ವಸಿದ್ಧತಾ ಆಧಾರಿತ ವ್ಯವಸ್ಥೆಗೆ ಪರಿವರ್ತನೆಗೊಳ್ಳುವ ಪ್ರಮುಖ ಹೆಜ್ಜೆ ಇದಾಗಿದೆ. ಅತ್ಯಾಧುನಿಕ ಸೌಲಭ್ಯ ಒಳಗೊಂಡ ಕೇಂದ್ರ ಬೆಂಗಳೂರು ಆರೋಗ್ಯ ಸೌಧದಲ್ಲಿರುವ ಈ ಕೇಂದ್ರವು ಉನ್ನತ ಗುಣಮಟ್ಟದ ವೀಡಿಯೋ ವಾಲ್, ವೀಡಿಯೋ ಕಾನ್ಫರೆನ್ಸ್ ವ್ಯವಸ್ಥೆ, ಡೇಟಾ ಸರ್ವರ್, ನೆಟ್‌ವರ್ಕ್ ವ್ಯವಸ್ಥೆ ಮತ್ತು ನೈಜ–ಸಮಯದ ಡ್ಯಾಶ್‌ಬೋರ್ಡ್‌ಗಳನ್ನು ಹೊಂದಿದೆ. ತುರ್ತು ಕರೆ ನಿರ್ವಹಣೆ ಮತ್ತು ಸಂಪೂರ್ಣ ಮೇಲ್ವಿಚಾರಣೆಗೆ ಬೇಕಾದ ಎಲ್ಲಾ ತಾಂತ್ರಿಕ ಸೌಲಭ್ಯಗಳನ್ನು ಇಲ್ಲಿ ಒದಗಿಸಲಾಗಿದೆ.

ಜಿಲ್ಲಾಮಟ್ಟದಲ್ಲೂ ಕೇಂದ್ರ ತೆರೆಯಲು ಚಿಂತನೆ ಈ ಕೇಂದ್ರದ ಯಶಸ್ವಿ ಕಾರ್ಯಾಚರಣೆಗೆ ಆರೋಗ್ಯ ಇಲಾಖೆಯ ಜೊತೆಗೆ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಪೊಲೀಸ್ ಇಲಾಖೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ಜಿಲ್ಲಾಡಳಿತಗಳು ಕೈಜೋಡಿಸಿವೆ. ವಾಚ್ ಮೋಡ್, ಅಲರ್ಟ್ ಮೋಡ್, ಪ್ರತಿಕ್ರಿಯೆ ಮೋಡ್ ಮತ್ತು ಪುನಶ್ಚೇತನ ಮೋಡ್ ಎಂಬ ನಾಲ್ಕು ಹಂತಗಳಲ್ಲಿ ಈ ಕೇಂದ್ರವು ಕೆಲಸ ಮಾಡಲಿದೆ. ರಾಜ್ಯಮಟ್ಟದ ಈ ಕೇಂದ್ರಿಯ ನಿಯಂತ್ರಣ ಕೇಂದ್ರವು ಮುಂದಿನ ದಿನಗಳಲ್ಲಿ ಜಿಲ್ಲಾ ಮಟ್ಟಕ್ಕೂ ವಿಸ್ತರಣೆಗೊಳ್ಳಲಿದೆ.

ಪ್ರತಿ ಜಿಲ್ಲೆಯಲ್ಲೂ ನೋಡಲ್ ಅಧಿಕಾರಿಗಳ ಮೂಲಕ ಸಂಪರ್ಕ ಸಾಧಿಸಲಿದೆ. ಒಟ್ಟಾರೆಯಾಗಿ, ಈ ಆರೋಗ್ಯ ತುರ್ತು ಕಾರ್ಯಾಚರಣೆ ಕೇಂದ್ರವು ತಂತ್ರಜ್ಞಾನ ಮತ್ತು ಸಮನ್ವಯದ ಮೂಲಕ ಭವಿಷ್ಯದ ಆರೋಗ್ಯ ಸವಾಲುಗಳಿಗೆ ಪರಿಣಾಮಕಾರಿ ಪ್ರತಿಕ್ರಿಯೆ ನೀಡುವ ಸಾಮರ್ಥ್ಯವನ್ನು ಹೆಚ್ಚಿಸಲಿದೆ. ಕರ್ನಾಟಕವು ಈ ಯೋಜನೆಯ ಮೂಲಕ ರಾಷ್ಟ್ರ ಮಟ್ಟದಲ್ಲಿ ಮಾದರಿಯಾಗಿದ್ದು, ಭವಿಷ್ಯದ ಆರೋಗ್ಯ ಭದ್ರತಾ ವ್ಯವಸ್ಥೆಗೆ ದಿಟ್ಟ ಹೆಜ್ಜೆಯಿಟ್ಟಿದೆ ಎಂದು ಆರೋಗ್ಯ ಇಲಾಖೆಯು ಪ್ರಕಟಣೆಯಲ್ಲಿ ಮಾಹಿತಿ ನೀಡಿದೆ.



ವಾಣಿಜ್ಯ ಅನಿಲ ಸಿಲಿಂಡರ್‌ಗಳ ತೀವ್ರ ಕೊರತೆ, ಹಠಾತ್ ಬೆಲೆ ಏರಿಕೆ ಮತ್ತು ಹೋಟೆಲ್ ಉದ್ಯಮದಲ್ಲಿನ ಬಿಕ್ಕಟ್ಟಿನ ವಿರುದ್ಧ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ಸದಸ್ಯರು ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

## ತಮಗೆ ಚಲಾಯಿಸಿದ್ದ ಮತ ತಿರುಚಲಾಗಿದೆ ಮರು ಪರಿಶೀಲನೆ ಮಾಡುವಂತೆ ಚುನಾವಣಾ ಆಯುಕ್ತರಿಗೆ ಟಿ.ಡಿ.ರಾಜೇಗೌಡ ಒತ್ತಾಯ



**ಬೆಂಗಳೂರು, ಮೇ 7:** ಶೃಂಗೇರಿ ಕ್ಷೇತ್ರದ ಮರು ಮತಎಣಿಕೆಯಲ್ಲಿ ಸೋತ ಕಾಂಗ್ರೆಸ್ ಅಭ್ಯರ್ಥಿ ರಾಜೇಗೌಡ ಅವರು, ತಮ್ಮ ಮತವನ್ನು ಟ್ಯಾಂಪರ್ ಮಾಡಿ ಅಸಿಂಧು ಮಾಡಿದ್ದರಿಂದ ಗಂಭೀರ ಆರೋಪ ಮಾಡಿದ್ದಾರೆ.

ಅಲ್ಲದೇ ಈ ಬಗ್ಗೆ ಚುನಾವಣಾ ಆಯುಕ್ತರಿಗೆ ದೂರು ನೀಡುವ ಮೂಲಕ ಮರು ಪರಿಶೀಲನೆಗೆ ಒತ್ತಾಯಿಸಿದ್ದಾರೆ. ಬಳಿಕ ಮಾತನಾಡಿದ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ರಾಜೇಗೌಡ, 2023ರ ಚುನಾವಣೆ ಮತ ಎಣಿಕೆಯ ವೇಳೆ ಜೆಡಿಎಸ್, ಕಾಂಗ್ರೆಸ್, ಬಿಜೆಪಿ, ಪಕ್ಷೇತರರ ಅಭ್ಯರ್ಥಿಗಳ ಕೌಂಟಿಂಗ್ ಏಜೆಂಟ್ ಇದ್ದು, ಆಗ ಪಾರದರ್ಶಕವಾಗಿ ಮತ ಎಣಿಕೆ ಆಗಿದೆ. ಮತ ಎಣಿಕೆ ಬಳಿಕ ರಾಜೇಗೌಡ ಗೆದ್ದರು ಎಂದು ಘೋಷಣೆ ಮಾಡಿದ್ದು, ವ್ಯಾಲಿಡ್ ಯಾವುದು, ಇನ್ವ್ಯಾಲಿಡ್ ಯಾವುದು ಎಂದು ಎಲ್ಲರಿಗೂ ತೋರಿಸಿದ್ದರು. ಬಳಿಕ ನನ್ನ ಮೇಲೆ ಅನೇಕ ಆರೋಪ ಮಾಡಿ ಕೇಸ್ ಹಾಕಿದ್ದರು, ಹೀಗಾಗಿ ಮರು ಎಣಿಕೆಗೆ ಉಚ್ಚ ನ್ಯಾಯಾಲಯ ಆದೇಶ ಮಾಡಿತ್ತು. ಮರುಎಣಿಕೆ ವೇಳೆ ಬಂಡಲ್ ಬಂಡಲ್ ಇನ್‌ವ್ಯಾಲಿಡ್ ಆಗಿದೆ. ವೋಟ್ ಟ್ಯಾಂಪರಿಂಗ್ ಆಗಿದೆ ಎನ್ನುವುದು ನಮ್ಮ ಅನಿಸಿಕೆ. ನ್ಯಾಯಯುತ ತನಿಖೆ ಆಗಲಿ ಎಂದು ಚುನಾವಣಾ ಆಯೋಗಕ್ಕೆ ಮನವಿ ಮಾಡಿದ್ದೇವೆ. ಕೇಂದ್ರ ಚುನಾವಣಾ ಆಯೋಗಕ್ಕೆ ಮನವಿ ಕಳುಹಿಸುತ್ತೇವೆ ಎಂದು ರಾಜೇಗೌಡ ಹೇಳಿದ್ದಾರೆ.

ವ್ಯಾಲಿಡ್ ವೋಟ್ ಇನ್ವ್ಯಾಲಿಡ್ ಮಾಡ್ತಾರೆ ಎಂದು ಗೊತ್ತಿರಲಿಲ್ಲ. ಫೋರೆನ್ಸಿಕ್ ಟೆಸ್ಟ್ ಮಾಡಬೇಕು. ಎಫ್‌ಐಆರ್ ಆಗಿದ್ದು, ಅದಕ್ಕೆ ತಡೆ ಹೋಗಿದ್ದಾರೆ. ಚುನಾವಣಾ ಆಯೋಗವನ್ನ ಬಳಸಿಕೊಂಡಿದ್ದಾರೆಂದು ನಮ್ಮ ಅಭಿಪ್ರಾಯವಾಗಿದೆ ತನಿಖೆ ಆದರೆ ಸತ್ಯಾಸತ್ಯತೆ ಹೊರ ಬರುತ್ತೆ ಎಂದು ರಾಜೇಗೌಡ ಹೇಳಿದ್ದಾರೆ. ಮತ್ತೊಂದೆಡೆ ಶೃಂಗೇರಿ ಅಂಚೆ ಮತ ತಿದ್ದಿದ ಆರೋಪ ಪ್ರಕರಣ ಸಂಬಂಧ ಎಫ್‌ಐಆರ್ ರದ್ದು ಕೋರಿ ಶಾಸಕ ಡಿ.ಎನ್. ಜೀವರಾಜ್ ಕೋರ್ಟ್ ಮೊರೆಹೋಗಿದ್ದು, ನ್ಯಾ. ವಿ. ಶ್ರೀಶಾನಂದ ಅವರ ಪೀಠದಲ್ಲಿ ನಡೆದ ವಿಚಾರಣೆ ನಡೆದಿದ್ದು, ಜೂನ್ 3ಕ್ಕೆ ಎಲ್ಲಾ ಅರ್ಜಿಗಳ ವಿಚಾರಣೆ ಮುಂದೂಡಿಕೆ ಮಾಡಲಾಗಿದ್ದು, ಮಧ್ಯಂತರ ತಡೆ ನೀಡಿ ನ್ಯಾ.ವಿ.ಶ್ರೀಶಾನಂದ ಅವರಿದ್ದ ಪೀಠ ಆದೇಶ ಹೊರಡಿಸಿದೆ. ಶಾಸಕ ಡಿ.ಎನ್. ಜೀವರಾಜ್, ಕೆ.ಎನ್. ರಮೇಶ್, ವೇದಮೂರ್ತಿ ಅರ್ಜಿ ವಿಚಾರಣೆ ಮಾಡಿದ್ದು, ಜೂ.3ರ ವರೆಗೆ ಹೈಕೋರ್ಟ್ ವಿಚಾರಣೆ ಮಧ್ಯಂತರ ತಡೆಯಾಜ್ಞೆ ನೀಡಿದೆ. ದೂರುದಾರರ ಪರ ವಕೀಲರು ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ಕೋರಿದ್ದಾರೆ.

ಮತ್ತೊಂದೆಡೆ ಎಫ್‌ಐಆರ್ ರದ್ದು ಕೋರಿ ಶಾಸಕ ಡಿ.ಎನ್. ಜೀವರಾಜ್ ಸಲ್ಲಿಸಿದ್ದ ಅರ್ಜಿಯನ್ನು ಕೋರ್ಟ್ ವಿಚಾರಣೆ ನಡೆಸಿದ್ದು, ಮಹತ್ವದ ತೀರ್ಪು ನೀಡಿದೆ.

## ಲೋಕೋಪಯೋಗಿ ಇಲಾಖೆಯಲ್ಲಿ ಅನ್ಯ ಇಲಾಖೆಗಳ ಅಧಿಕಾರಿಗಳ ನಿಯೋಜನೆ ಸ್ಥಗಿತಗೊಳಿಸಿ



**ಬೆಂಗಳೂರು, ಮೇ.7:** ಲೋಕೋಪಯೋಗಿ ಇಲಾಖೆಯಲ್ಲಿ ಈಗಾಗಲೇ ಅರ್ಹ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು ಹಾಗೂ ಮೇಲ್ದರ್ಜೆಯ ಅಧಿಕಾರಿಗಳು ಲಭ್ಯ ವಿದ್ದರೂ, ಇತರ ಇಲಾಖೆಗಳ ಅಧಿಕಾರಿಗಳನ್ನು ವರ್ಗಾವಣೆ, ನಿಯೋಜನೆ ಹಾಗೂ ಪ್ರಭಾರಿಯಾಗಿ ನಿಯೋಜಿಸುತ್ತಿರುವ ಕ್ರಮವನ್ನು ತಕ್ಷಣ ಸ್ಥಗಿತಗೊಳಿಸಿ ಎಂದು ಕರ್ನಾಟಕ ರಾಜ್ಯ ಯುವ ಸಮೂಹದ ಅಧ್ಯಕ್ಷ ಡಾ. ಎಸ್. ಸಂಗಮೇಶ್ ಆಗ್ರಹಿಸಿದ್ದಾರೆ.


ಈ ಕುರಿತು ಮುಖ್ಯ ಕಾರ್ಯದರ್ಶಿ ಮನವಿ ಸಲ್ಲಿಸಿರುವ ಅವರು, ಲೋಕೋಪಯೋಗಿ ಇಲಾಖೆ ಯೊಳಗಿನ ಅಧಿಕಾರಿಗಳ ಸೇವಾ ಹಕ್ಕು, ಹಿರಿತನ ಹಾಗೂ ಪದೋನ್ನತಿ ಅವಕಾಶಗಳಿಗೆ ಗಂಭೀರ ಅನ್ಯಾಯವಾಗುತ್ತಿದೆ. ಇಲಾಖೆಯಲ್ಲಿಯೇ ಅನೇಕ ಅರ್ಹ ಅಧಿಕಾರಿಗಳು ಸಮರ್ಪಕ ಹುದ್ದೆ ಹಂಚಿಕೆ ಮತ್ತು ಆಡಳಿತಾತ್ಮಕ ಜವಾಬ್ದಾರಿಗಳಿಲ್ಲದೇ ಕಾರ್ಯ ನಿರ್ವಹಿಸುತ್ತಿರುವ ಸಂದರ್ಭದಲ್ಲಿ, ಇತರೆ ಇಲಾಖೆಗಳ ಅಧಿಕಾರಿಗಳಿಗೆ ಆದ್ಯತೆ ನೀಡುತ್ತಿರುವುದು ಆಡಳಿತಾತ್ಮಕ ಅಸಮತೋಲನಕ್ಕೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಲೋಕೋಪಯೋಗಿ ಇಲಾಖೆ ಅಭಿಯಂತರರ ಸಂಘವು ಕೂಡ ಈಗಾಗಲೇ ಸರ್ಕಾರಕ್ಕೆ ಮನವಿ ಸಲ್ಲಿಸಿ, ಪ್ರತಿ ಇಲಾಖೆಯ ಅಧಿಕಾರಿಗಳು ತಮ್ಮ ಮೂಲ ಇಲಾಖೆ ಯಲ್ಲಿಯೇ ಕಾರ್ಯ ನಿರ್ವಹಿಸುವಂತೆ ಕ್ರಮ ಕೈಗೊಳ್ಳಬೇಕು ಹಾಗೂ ಲೋಕೋಪಯೋಗಿ ಇಲಾಖೆಗೆ ನಿಯೋಜನೆಗೊಂಡಿರುವ ಇತರೆ ಇಲಾಖೆಗಳ ಅಧಿಕಾರಿಗಳನ್ನು ಹಿಂಪಡೆಯಬೇಕು. ಇಲಾಖೆಯೊಳಗೆ ಅರ್ಹ ಅಧಿಕಾರಿಗಳು ಲಭ್ಯವಿರುವಾಗ ಹೊರಗಿನ ಇಲಾಖೆಗಳ ಅಧಿಕಾರಿಗಳಿಗೆ ಆದ್ಯತೆ ನೀಡುವುದು ಸಂವಿಧಾನಾತ್ಮಕ ಸಮಾನತೆ ಮತ್ತು ಸೇವಾ ನ್ಯಾಯತತ್ವಗಳಿಗೆ ವಿರುದ್ಧವಾಗಿದೆ ಎಂದು ಹೇಳಿದ್ದಾರೆ.

ಸೇವಾ ನ್ಯಾಯಶಾಸ್ತ್ರ ಮತ್ತು ಆಡಳಿತಾತ್ಮಕ ಕಾನೂನು ತತ್ವಗಳ ಪ್ರಕಾರ ಡೆಪ್ಯುಟೇಶನ್ ಒಂದು ತಾತ್ಕಾಲಿಕ ಹಾಗೂ ಅಪವಾದಾತ್ಮಕ ವ್ಯವಸ್ಥೆಯಾಗಿದ್ದು, ಇಲಾಖೆ ಯೊಳಗಿನ ಅಧಿಕಾರಿಗಳ ಹಕ್ಕುಗಳಿಗೆ ಧಕ್ಕೆ ಉಂಟುಮಾಡುವ ರೀತಿಯಲ್ಲಿ ಬಳಸಲಾಗಬಾರದು.

ಸುಪ್ರೀಂಕೋರ್ಟ್ ನ ಹಲವು ತೀರ್ಪುಗಳ ಪ್ರಕಾರ ಹೊರಗಿನ ಇಲಾಖೆಗಳ ಅಧಿಕಾರಿಗಳಿಗೆ ಅನಗತ್ಯ ಆದ್ಯತೆ ನೀಡುವುದು ಸೇವಾ ಸಮತೋಲನ ಹಾಗೂ ಆಡಳಿತಾತ್ಮಕ ನ್ಯಾಯತತ್ವಗಳಿಗೆ ವಿರುದ್ಧವಾಗಿದೆ ಎಂದು ತಿಳಿಸಿದ್ದಾರೆ.

### ಜೀವಾವಧಿ ಶಿಕ್ಷೆ ಪ್ರಶ್ನಿಸಿದ್ದ ಮಾಜಿ ಶಾಸಕ ವಿನಯ್ ಕುಲಕರ್ಣಿ ಅರ್ಜಿ ವಿಚಾರಣೆ ಮೇ 26ಕ್ಕೆ



**ಬೆಂಗಳೂರು, ಮೇ 7:** ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಯೋಗೀಶ್ ಗೌಡ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ದಂತೆ ಜೀವಾವಧಿ ಶಿಕ್ಷೆ ಪ್ರಶ್ನಿಸಿ ಮಾಜಿ ಶಾಸಕ ವಿನಯ್ ಕುಲಕರ್ಣಿ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಮೇ.26ಕ್ಕೆ ಮುಂದೂಡಿದೆ. ಪ್ರಕರಣದಲ್ಲಿ ವಿನಯ್ ಕುಲ ಕರ್ಣಿ ಅವರು ಮುಖ್ಯ ಪಿತೂರಿಗಾರ ಎಂಬ ಆರೋಪ ಹೊತ್ತಿದ್ದರು. ಈ ಕುರಿತು ಸುದೀರ್ಘ ವಿಚಾರಣೆ ನಡೆಸಿದ್ದ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು, ಏಪ್ರಿಲ್ 17ರಂದು ಮಹತ್ವದ ತೀರ್ಪು ನೀಡಿತ್ತು. ವಿನಯ್ ಕುಲಕರ್ಣಿ ಸೇರಿ ಒಟ್ಟು 16 ಆರೋಪಿಗಳಿಗೆ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿ ಆದೇಶಿಸಿತ್ತು. ಈ ತೀರ್ಪು ಪ್ರಕಟವಾದ ಬೆನ್ನಲ್ಲೇ, ನಿಯಮದಂತೆ ವಿನಯ್ ಕುಲಕರ್ಣಿ ಅವರು ತಮ್ಮ ಶಾಸಕ ಸ್ಥಾನದಿಂದ ಅನರ್ಹಗೊಂಡಿದ್ದಾರೆ. ವಿಶೇಷ ನ್ಯಾಯಾಲಯ ನೀಡಿದ ಈ ತೀರ್ಪನ್ನು ಪ್ರಶ್ನಿಸಿ ವಿನಯ್ ಕುಲಕರ್ಣಿ ಅವರು ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು. ಶಿಕ್ಷೆಗೆ ತಡೆ ನೀಡಬೇಕು ಮತ್ತು ತೀರ್ಪನ್ನು ಮರು ಪರಿಶೀಲಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿತ್ತು. ಈ ಅರ್ಜಿಯ ಪ್ರಾಥಮಿಕ ವಿಚಾರಣೆ ನಡೆಸಿದ ನ್ಯಾಯಾಲಯವು, ಮುಂದಿನ ವಿಚಾರಣೆಯನ್ನು ಮೇ 26ಕ್ಕೆ ನಿಗದಿಪಡಿಸಿದೆ.ಕೊಲೆ ಸಂಚು ರೂಪಿಸಿದ ಪ್ರಬಲ ಆರೋಪ ಸಾಬೀತಾಗಿರುವ ಹಿನ್ನೆಲೆಯಲ್ಲಿ ಈ ಕಾನೂನು ಹೋರಾಟ ವಿನಯ್ ಕುಲಕರ್ಣಿ ಅವರಿಗೆ ಅತ್ಯಂತ ನಿರ್ಣಾಯಕವಾಗಿದೆ. ಮೇ 26ರಂದು ಹೈಕೋರ್ಟ್ ಯಾವ ನಿರ್ಧಾರ ತೆಗೆದುಕೊಳ್ಳಲಿದೆ ಎಂಬುದು ಈಗ ಕುತೂಹಲ ಮೂಡಿಸಿದೆ.

## ಕ್ರೀಡಾ ಸಾಧಕರಿಗೆ ಶೇ.2ರಷ್ಟು ಮೀಸಲಾತಿ, ರಾಜ್ಯದಲ್ಲಿ ಪ್ರತ್ಯೇಕ ಶಿಕ್ಷಣ ನೀತಿ ಜಾರಿಗೆ ಸಚಿವ ಸಂಪುಟ ಅನುಮೋದನೆ



**ಬೆಂಗಳೂರು, ಏ.7:** ಕ್ರೀಡೆಗಳಲ್ಲಿ ಸಾಧನೆ ಮಾಡಿದವರಿಗೆ ರಾಜ್ಯದ ಸಿವಿಲ್ ಸೇವೆಗಳಲ್ಲಿ ಶೇ 2 ರಷ್ಟು ಮೀಸಲಾತಿ ಕಲ್ಪಿಸುವ ಮಹತ್ವದ ತೀರ್ಮಾನವನ್ನು ರಾಜ್ಯ ಸಚಿವ ಸಂಪುಟ ಸಭೆ ಕೈಗೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಂಪುಟ ಸಭೆಯ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಕ್ರೀಡಾ ಮೀಸಲಾತಿ ಕಲ್ಪಿಸಲು ಕರ್ನಾಟಕ ನಾಗರಿಕ ಸೇವಾ ತಿದ್ದುಪಡಿ ನಿಯಮಗಳು 2026 ವಿಧೇಯಕ್ಕೆ ಅನುಮೋದನೆ ನೀಡಲಾಗಿದೆ ಎಂದರು.

ಕೇಂದ್ರ ಸರ್ಕಾರದ ನೂತನ ಶಿಕ್ಷಣ ನೀತಿ ಬದಲಿಗೆ ರಾಜ್ಯದಲ್ಲಿ ಪ್ರತ್ಯೇಕ ಶಿಕ್ಷಣ ನೀತಿಯನ್ನು ಜಾರಿಗೊಳಿಸುವ ಕುರಿತು ರಾಜ್ಯ ಶಿಕ್ಷಣ ನೀತಿ ಆಯೋಗ ಸಲ್ಲಿಸಿರುವ ಅಂತಿಮ ವರದಿಯನ್ನು ಜಾರಿಗೆ ತರಲು ಸಂಪುಟ ಸಮ್ಮತಿಸಿದೆ. ಕೇಂದ್ರ ಸರ್ಕಾರದ ಶಿಕ್ಷಣ ನೀತಿಗೆ ಸೆಡ್ಡು ಹೊಡೆದಿರುವ ರಾಜ್ಯ ಸರ್ಕಾರ, ಪ್ರತ್ಯೇಕ ಶಿಕ್ಷಣ ನೀತಿಯನ್ನು ಜಾರಿಗೆ ತರಲು ಮುಂದಾಗಿದೆ.

ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಯನ್ನು 400 ಹಾಸಿಗೆ ಸಾಮರ್ಥ್ಯದಿಂದ 600 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಕಾಮಗಾರಿಯನ್ನು 180 ಕೋಟಿ ರೂ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಸಂಪುಟ ಸಮ್ಮತಿಸಿದೆ. ಈ ಮೂಲಕ ಮೈಸೂರು ಭಾಗದಲ್ಲಿ ಜಯದೇವ ಹೃದ್ರೋಗ ಸಂಸ್ಥೆಯ ಕಾರ್ಯಚಟುವಟಿಕೆಯನ್ನು ವಿಸ್ತರಿಸಲು ಕಾರ್ಯೋನ್ಮುಖವಾಗಿದೆ.

ಮೈಸೂರಿನ ಚಾಮರಾಜೇಂದ್ರ ಮೃಗಾಲಯ ಮತ್ತು ಬೆಂಗಳೂರಿನ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಇಮ್ಮರ್ಸಿಬಲ್ ರೂಂ ಮತ್ತು ಡಿಜಿಟಲ್ ಮೃಗಾಲಯ ಮಾರ್ಗದರ್ಶಿ ಯೋಜನೆಯನ್ನು ಸಾರ್ವಜನಿಕ, ಖಾಸಗಿ ಸಹಭಾಗಿತ್ವದಡಿ ಅನುಕ್ರಮವಾಗಿ 44.62 ಮತ್ತು 35.22 ಕೋಟಿ ರೂ ಮೊತ್ತದಲ್ಲಿ ಕೈಗೆತ್ತಿಕೊಳ್ಳಲು ತೀರ್ಮಾನಿಸಲಾಗಿದೆ.

ವಿಶೇಷವಾಗಿ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಸಾರ್ವಜನಿಕ ಮತ್ಸ್ಯಾಗಾರ ಅಭಿವೃದ್ಧಿ ಯೋಜನೆಯನ್ನು ಪಿಪಿಪಿ ಮಾದರಿಯಲ್ಲಿ 30 ವರ್ಷಗಳ ಅವಧಿಗೆ 144.44 ಕೋಟಿ ರೂ ಮೊತ್ತದಲ್ಲಿ ಕಾರ್ಯಗತಗೊಳಿಸಲು ಸಮ್ಮತಿಸಿದೆ.

ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ತಿದ್ದುಪಡಿ ವಿಧೇಯಕ ? 2026ಕ್ಕೆ ಸಂಪುಟ ಅನುಮೋದನೆ ನೀಡಿದ್ದು, ಮುಂದಿನ ವಿಧಾನಮಂಡಲ ಅಧಿವೇಶನದಲ್ಲಿ ವಿಧೇಯಕ ಮಂಡಿಸಲು ತೀರ್ಮಾನಿಸಲಾಗಿದೆ.

ರಾಯಚೂರು ಜಿಲ್ಲೆಯ ಹಟ್ಟಿ ಚಿನ್ನದ ಗಣಿ ಟೌನ್ ಶಿಪ್ ಗೆ ಬಸವಸಾಗರ ಅಣೆಕಟ್ಟೆಯಿಂದ ಕುಡಿಯುವ ನೀರು ಸರಬರಾಜು ಮಾಡುವ 132.50 ಕೋಟಿ ರೂಪಾಯಿ ಮೊತ್ತದ ಹೊಸ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕಲಬುರಗಿ ಮತ್ತು ಯಾದಗಿರಿ ಭಾಗದಲ್ಲಿ ಕರ್ನಾಟಕ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನ ಮತ್ತು ಸ್ಟೇಟ್ ಸೆಕ್ಟರ್ ಯೋಜನೆಯಡಿ ಮೂರು ಹೊಸ ಕೈಗಾರಿಕಾ ಹೊಸಹತುಗಳನ್ನು 200.07 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಲು ಸಂಪುಟ ಸಮ್ಮತಿಸಿದೆ.


ಕೋಲಾರ ಜಿಲ್ಲೆಯ ಬಂಗಾರಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಾಜ್ಯ ಹೆದ್ದಾರಿ –5 ಮತ್ತು ರಾಜ್ಯ ಹೆದ್ದಾರಿ 95 ರಲ್ಲಿ 20.74 ಕಿಲೋಮೀಟರ್ ಉದ್ದದ ಚತುಷ್ಪಥ ಹೆದ್ದಾರಿಯನ್ನು 66 ಕೋಟಿ ರೂ ಮೊತ್ತದಲ್ಲಿ ಕೈಗೆತ್ತಿಕೊಳ್ಳುವ ಮತ್ತು ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದ ಆವರಣದಲ್ಲಿ 22 ಕೋಟಿ ರೂ ಅಂದಾಜು ಮೊತ್ತದಲ್ಲಿ ಡಿಜಟಲ್ ತಾರಾಲಯವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ.

ದಕ್ಷಿಣ ಕನ್ನಡದ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದ ಮಾಸ್ಟರ್ ಪ್ಲಾನ್ ಯೋಜನೆಯ ಮೂರನೇ ಹಂತದ ಕಾಮಗಾರಿಯನ್ನು 604.65 ಕೋಟಿ ರೂ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಮತ್ತು ದೊಡ್ಡಬಳ್ಳಾಪುರದ ಘಾಟಿ ಸುಬ್ರಹ್ಮಣ್ಯ ದೇವಾಲಯದ ಸಮಗ್ರ ಅಭಿವೃದ್ಧಿ ಕಾಮಗಾರಿಯನ್ನು 23.76 ಕೋಟಿ ರೂ ವೆಚ್ಚದಲ್ಲಿ ಕೈಗೆತ್ತಿಕೊಳ್ಳುವ ಪ್ರಸ್ತಾವನೆಗಳಿಗೆ ಅಂಗೀಕಾರ ಕೊಟ್ಟಿದೆ.

ಉಡುಪಿಯ ಬ್ರಹ್ಮಾವರ ತಾಲ್ಲೂಕಿನ ಚಂತಾರು ಗ್ರಾಮದಲ್ಲಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ 20 ಸೆಂಟ್ ಮತ್ತು ಧಾರವಾಡದ ಮಳಾಪುರ ಗ್ರಾಮದಲ್ಲಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ 5 ಗುಂಟೆ ಜಮೀನನ್ನು ನೀಡಲು ಸಂಪುಟ ಅನುಮತಿ ನೀಡಿದೆ.

## ಮಹಿಳಾ ಕೈದಿಗಳ ಆರೈಕೆಯಲ್ಲಿರುವ ಮಕ್ಕಳ ಶಿಕ್ಷಣ, ಸುರಕ್ಷತೆಗೆ ಕಾರಾಗೃಹದಲ್ಲಿ ವಿಶೇಷ ಘಟಕ

**ಸುಪ್ರೀಂಕೋರ್ಟ್ ಮಾರ್ಗಸೂಚಿ ಹಾಗೂ ಜೈಲು ನಿಯಮಾವಳಿಗಳ ಪ್ರಕಾರ ಆರಂಭ: ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕಿ ಸಿ.ವಿ. ಸ್ನೇಹಾ ಮಾಹಿತಿ**



**ಬೆಂಗಳೂರು, ಮೇ. 7:** ಜೈಲುಶಿಕ್ಷೆ ಅನುಭವಿಸುತ್ತಿರುವ ಮಹಿಳೆಯರ ಜೊತೆ ಅವರ ಪುಟ್ಟ ಮಕ್ಕಳು ಕೂಡ ಜೈಲು ಜೀವನ ನಡೆಸಬೇಕಾಗುವ ವಾಸ್ತವವನ್ನು ಗಮನದಲ್ಲಿಟ್ಟುಕೊಂಡು, ಕರ್ನಾಟಕ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹ ಮಹಿಳಾ ವಿಭಾಗದೊಳಗೆ ದೇಶದ ಮೊದಲ ಸರ್ಕಾರಿ ವಿಶೇಷ ಮಕ್ಕಳ ಆರೈಕೆ ಕೇಂದ್ರವನ್ನು ಸ್ಥಾಪಿಸಲಾಗಿದೆ. ಮಹಿಳಾ ಕೈದಿಗಳ ಆರೈಕೆಯಲ್ಲಿರುವ ಆರು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಶಿಕ್ಷಣ, ಸುರಕ್ಷತೆ ಹಾಗೂ ಭಾವನಾತ್ಮಕ ಬೆಳವಣಿಗೆ ಒದಗಿಸುವ ಉದ್ದೇಶದಿಂದ ಈ ವಿಶೇಷ ಘಟಕ ವನ್ನು ಆರಂಭಿಸಲಾಗಿದೆ.

ಯಾವುದೇ ಅಪರಾಧ ಮಾಡದ ಈ ಮಕ್ಕಳು ತಾಯಿಯೊಂದಿಗೆ ಜೈಲು ಆವರಣದಲ್ಲಿ ಬದುಕಬೇಕಾಗುವ ಪರಿಸ್ಥಿತಿಯನ್ನು ಮಾನವೀಯ ದೃಷ್ಟಿಯಿಂದ ಪರಿಗಣಿಸಿ ಈ ಯೋಜನೆ ಜಾರಿಗೊಳಿಸಲಾಗಿದೆ.ಕರ್ನಾಟಕ ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕಿ ಸಿ.ವಿ. ಸ್ನೇಹಾ ಅವರು ಮಾತನಾಡಿ, ಈ ಕೇಂದ್ರದಲ್ಲಿ ಇಬ್ಬರು ಶಿಕ್ಷಕರನ್ನು ನೇಮಕ ಮಾಡಲಾಗಿದ್ದು, ಮಕ್ಕಳಿಗೆ ಅಕ್ಷರಾಭ್ಯಾಸ, ಸಂಖ್ಯೆ, ರೈಮ್ಸ್, ಚಿತ್ರಕಲೆ, ಸೃಜನಾತ್ಮಕ ಚಟುವಟಿಕೆಗಳು ಹಾಗೂ ಸೇಫ್ ಟಚ್–ಅನ್‌ಸೇಫ್ ಟಚ್ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತದೆ.ಇದರ ಜೊತೆಗೆ ಮಕ್ಕಳಲ್ಲಿ ವ್ಯಕ್ತಿತ್ವ ವಿಕಸನಕ್ಕೂ ಒತ್ತು ನೀಡಲಾಗುತ್ತಿದೆ. ಹಿರಿಯರಿಗೆ ಗೌರವ ತೋರಿಸುವುದು, ಶಿಕ್ಷಕರಿಗೆ ವಂದನೆ ಹೇಳುವುದು, ಊಟದ ಶಿಷ್ಟಾಚಾರ ಸೇರಿದಂತೆ ದಿನನಿತ್ಯದ ಉತ್ತಮ ಅಭ್ಯಾಸಗಳನ್ನು ಕಲಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಬೆಂಗಳೂರು ಪಶ್ಚಿಮ (ಆನೇಕಲ್) ಜಿಲ್ಲಾ ಮಕ್ಕಳ ರಕ್ಷಣಾ ಕಚೇರಿಯ ಡಿಸಿಪಿ ಅಧಿಕಾರಿ ಆಶಾ ಎಚ್.ಕೆ ಮಾತನಾಡಿ, ಸುಪ್ರೀಂ ಕೋರ್ಟ್ ಮಾರ್ಗಸೂಚಿ ಹಾಗೂ ಜೈಲು ನಿಯಮಾವಳಿಗಳ ಪ್ರಕಾರ ಆರು ವರ್ಷದೊಳಗಿನ ಮಕ್ಕಳು ತಾಯಿ ಯೊಂದಿಗೆ ಜೈಲಿನಲ್ಲಿ ಇರಬಹುದಾಗಿದೆ. ಈ ಅವಧಿಯಲ್ಲಿ ಅವರ ರಕ್ಷಣೆ, ಶಿಕ್ಷಣ ಹಾಗೂ ಶಾಲಾ ಸಿದ್ಧತೆಯನ್ನು ಖಚಿತ ಪಡಿಸುತ್ತೇವೆ ಎಂದು ತಿಳಿಸಿದ್ದಾರೆ.

ಮಗುವಿಗೆ ಆರು ವರ್ಷ ಪೂರ್ಣಗೊಂಡ ನಂತರ ಕುಟುಂಬದ ಸದಸ್ಯರ ಸಂಪರ್ಕ ಮಾಡಲಾಗುತ್ತದೆ. ಕುಟುಂಬದಿಂದ ಸ್ಪಂದನೆ ಸಿಗದಿದ್ದರೆ, ಅಪ್ರಾಪ್ತ ವಯಸ್ಕರ ನ್ಯಾಯ ಕಾಯ್ದೆಯಡಿ ನೋಂದಾಯಿತ ಎನ್‌ಜಿಒಗಳ ಸಹಾಯದಿಂದ ಮಕ್ಕಳ ಮುಂದಿನ ಶಿಕ್ಷಣ ಮತ್ತು ಆರೈಕೆಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದ್ದಾರೆ.

ಪ್ರಸ್ತುತ ಈ ಕೇಂದ್ರದಲ್ಲಿ ಒಂಬತ್ತು ಮಕ್ಕಳ ಆರೈಕೆ ನಡೆಯುತ್ತಿದೆ. ಇವರಿಗೆ ನಿಯಮಿತ ಆರೋಗ್ಯ ತಪಾಸಣೆ, ಪೌಷ್ಟಿಕ ಆಹಾರ ಹಾಗೂ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ಈ ಮಕ್ಕಳಲ್ಲಿ ಮೂವರು ವಿದೇಶಿ ಮಹಿಳಾ ಕೈದಿಗಳ ಮಕ್ಕಳೂ ಇದ್ದಾರೆ. ಆ ಮಹಿಳೆಯರು ಮಾದಕ ವಸ್ತುಗಳ ಪ್ರಕರಣಗಳಲ್ಲಿ ಬಂಧಿತರಾಗಿದ್ದು, ಮಕ್ಕಳು ಅತಿ ಚಿಕ್ಕವರಾಗಿರುವುದರಿಂದ ತಾಯಿಯೊಂದಿಗೇ ಇರಿಸಲಾಗಿದೆ. ಮಕ್ಕಳಿಗೆ ಜೈಲು ವಾತಾವರಣದ ಭೀತಿ ಕಡಿಮೆ ಮಾಡಲು ತರಗತಿ ಕೊಠಡಿಗಳ ಗೋಡೆಗಳ ಮೇಲೆ ಬಣ್ಣ ಬಣ್ಣದ ಚಿತ್ರಗಳನ್ನು ಬಿಡಿಸಲಾಗಿದೆ. ಮಕ್ಕಳಿಗೆ ಅನುಕೂಲವಾಗುವ ಶೌಚಾಲಯ, ಕೈತೊಳೆಯುವ ವ್ಯವಸ್ಥೆ ಹಾಗೂ ಆಟ–ಪಾಠ ಕಲಿಕೆ ಸ್ಥಳಗಳನ್ನು ನಿರ್ಮಿಸಲಾಗಿದೆ. ಮಕ್ಕಳ ರಕ್ಷಣಾ ನಿರ್ದೇಶನಾಲಯ ಬಿಡುಗಡೆ ಮಾಡಿದ ಅನುದಾನದಿಂದ ಈ ಮೂಲ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಈ ಯೋಜನೆ ಕೇಂದ್ರ ಸರ್ಕಾರದ ಮಿಷನ್ ವಾತ್ಸಲ್ಯ, ಜುವೆನೈಲ್ ಜಸ್ಟೀಸ್ (ಕೇರ್ ಅಂಡ್ ಪ್ರೊಟೆಕ್ಷನ್ ಆಫ್ ಚಿಲ್ಡ್ರನ್) ಕಾಯ್ದೆ–2025 ಹಾಗೂ ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಪ್ಪಂದ ಮಾರ್ಗಸೂಚಿಗಳ ಆಧಾರದ ಮೇಲೆ ರೂಪಿಸಲಾಗಿದ್ದು, ಮುಂದಿನ ಹಂತದಲ್ಲಿ ಮಕ್ಕಳಿಗೆ ಹೆಚ್ಚಿನ ಪೌಷ್ಠಿಕ ಆಹಾರ, ಆರೋಗ್ಯ ಪೂರಕಗಳು ಹಾಗೂ ಸಮಗ್ರ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೆ ತರಲು ಯೋಜನೆ ರೂಪಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

## ಸ್ವಾಮೀಜಿ ಮೃತಪಟ್ಟರೆ ವಿಮಾ ಪರಿಹಾರಕ್ಕೆ ಅರ್ಹ: ಹೈಕೋರ್ಟ್

**ಬೆಂಗಳೂರು, ಮೇ.7:** ಮಠ ಅಥವಾ ಮಠಾಧಿಪತಿಯ ಉತ್ತರಾಧಿ ಕಾರಿಯು ಕಾನೂನಾತ್ಮಕವಾಗಿ ಸ್ವಾಮೀಜಿಯ ಪ್ರತಿನಿಧಿ ಯಾಗಿರುವುದ ರಿಂದ ಅವರು ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದರೆ ವಿಮಾ ಪರಿಹಾರ ಕ್ಲೇಮು ಮಾಡಬಹುದು ಎಂದು ಈಚೆಗೆ ಹೈಕೋರ್ಟ್‌ನ ಕಲಬುರ್ಗಿ ಪೀಠ ಆದೇಶಿಸಿದೆ. ಮಠಾಧಿಪತಿಯು ಸನ್ಯಾಸಿಯಾಗಿದ್ದು, ಮಠದ ಅಧ್ಯಾತ್ಮ ಮತ್ತು ನಿರ್ವಹಣಾ ಚಟುವಟಿಕೆಗಳನ್ನು ಮುಂದು ವರಿಸುತ್ತಿದ್ದು, ಆ ಮೂಲಕ ಸಾಂಸ್ಥಿಕ ಅವಲಂಬನೆ ಸೃಷ್ಟಿಸಿದೆ ಎಂದು ನ್ಯಾಯಮೂರ್ತಿ ಗಳಾದ ಸೂರಜ್ ಗೋವಿಂದರಾಜ್ ಮತ್ತು ತ್ಯಾಗರಾಜ್ ಎನ್. ಇನವಲ್ಲಿ ಅವರ ವಿಭಾಗೀಯ ಪೀಠ ಹೇಳಿದೆ.

ಮಠಾಧಿಪತಿ ಸ್ಥಾನವು ವೈಯಕ್ತಿಕ ಜೀವನೋಪಾಯಕ್ಕಾಗಿ ಸಂಪಾದಿಸುವ ಸಾಮಾನ್ಯ ವ್ಯಕ್ತಿಯ ಸ್ಥಾನವಲ್ಲ, ಬದಲಾಗಿ ಮಠದ ಕಾರ್ಯನಿರ್ವಹಣೆ, ಆಡಳಿತ ಮತ್ತು ನಿರಂತರತೆಯೊಂದಿಗೆ ಅವಿಭಾಜ್ಯ ಸಂಬಂಧ ಹೊಂದಿರುವ ಆಧ್ಯಾತ್ಮಿಕ ಮುಖ್ಯಸ್ಥನ ಸ್ಥಾನವಾಗಿದೆ ಎಂದು ನ್ಯಾಯಾಲಯ ವ್ಯಾಖ್ಯಾನಿಸಿದೆ.

ಬಾಳೆಹೊನ್ನೂರು ಶ್ರೀಮದ್ ರಾಂಬಾಪುರ ವೀರಸಿಂಹಾಸನ ಮಠದ ಸುತ್ರೇಶ್ವರ ಶಿವಾಚಾರ್ಯ ಸ್ವಾಮೀಜಿ ಅವರು 2011ರ ಮೇ 20ರಂದು ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದರು. ಜೀಪು ಮತ್ತು ಟ್ರಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಸ್ವಾಮೀಜಿ ನಿಧನರಾಗಿದ್ದರು. ಹೀಗಾಗಿ, ವಿಮೆ ಕ್ಲೇಮಿಗಾಗಿ ಮಠ ಅರ್ಜಿ ಸಲ್ಲಿಸಿತ್ತು. ಇದರ ವಿಚಾರಣೆ ನಡೆಸಿದ್ದ ಮೋಟಾರು ಅಪಘಾತ ಕ್ಲೇಮು ನ್ಯಾಯಮಂಡಳಿಯು ಸ್ವಾಮೀಜಿಯನ್ನು ಯಾರೂ ಅವಲಂಬಿಸಿಲ್ಲ ಎಂದು ಕ್ಲೇಮು ನಿರಾಕರಿಸಿತ್ತು. ಸನ್ಯಾಸಿಯಾದ ಸ್ವಾಮೀಜಿಯು ಪ್ರಾಪಂಚಿಕ ಸಂಬಂಧ ಗಳನ್ನು ಕಳೆದುಕೊಂಡಿರುವುದ ರಿಂದ ಯಾವುದೇ ಸಂಬಂಧ ಇರುವುದಿಲ್ಲ ಎಂದು ಮಠದ ಮುಖ್ಯಸ್ಥರ ನಿರ್ಗಮನದಿಂದ ಹಾನಿ ಮತ್ತು ಅಂತ್ಯ ಸಂಸ್ಕಾರದ ವೆಚ್ಚವಾಗಿ 1.2 ಲಕ್ಷ ನಿಗದಿಪಡಿಸಿತ್ತು. ಈ ಆದೇಶವನ್ನು ಮಠವು ಹೈಕೋರ್ಟ್‌ನಲ್ಲಿ ಪ್ರಶ್ನಿಸಿತ್ತು. ಕಂಪನಿಯು ಮಠದ ಉತ್ತರಾಧಿಕಾರಿ ಯನ್ನು ಅವಲಂಬಿತರು ಎಂದು ಪರಿಗಣಿಸಲಾಗದು. ಏಕೆಂದರೆ ಸಾವನ್ನಪ್ಪಿದ ಸ್ವಾಮೀಜಿಯು ಸ್ವತಂತ್ರ ವಾದ ಅಧ್ಯಾತ್ಮ ಜೀವನ ನಡೆಸಿದ್ದರು ಎಂದು ವಾದಿಸಿತ್ತು.ಇದನ್ನು ತಿರಸ್ಕರಿಸಿದ ಪೀಠವು ಸನ್ಯಾಸಿ ಜೀವನವನ್ನು ಅರ್ಥೈಸುವಲ್ಲಿ ನ್ಯಾಯ ಮಂಡಳಿಯು ವಿಫಲವಾಗಿದೆ ಎಂದಿದೆ.

ತ್ಯಾಗವು ಭೌತಿಕ ತ್ಯಾಗಕ್ಕೆ ಮಾತ್ರ ಸಂಬಂಧಿಸಿದೆ, ಎಲ್ಲಾ ರೀತಿಯಲ್ಲೂ ಸಂಪೂರ್ಣ ಬೇರ್ಪಡುವಿಕೆಗೆ ಅಲ್ಲ. ಸನ್ಯಾಸಿ ಜೀವನವನ್ನು ಸ್ವೀಕರಿಸಿದ ವ್ಯಕ್ತಿ ಮಠದ ಅಗತ್ಯಗಳನ್ನು ಪೂರೈಸುತ್ತಾನೆ ಮತ್ತು ವ್ಯವಸ್ಥಾಪಕ ಕರ್ತವ್ಯಗಳನ್ನು ನಿರ್ವಹಿಸುತ್ತಾನೆ? ಎಂದು ಪೀಠ ಹೇಳಿದೆ. ಇಂಥ ಪ್ರಕರಣಗಳಲ್ಲಿ ಅವಲಂಬಿತರು ಎಂದರೆ ರಕ್ತ ಸಂಬಂಧಿಗಳಿಗೆ ಸೀಮಿತ ವಾಗುವುದಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಹೇಳಿದೆ. ವ್ಯಕ್ತಿಯು ಅವಲಂಬಿತರನ್ನು ಬೆಂಬಲಿಸುವ ಬದಲು, ವ್ಯಕ್ತಿಯ ಸ್ಥಾನ, ಸೇವೆಗಳು ಮತ್ತು ಆಧ್ಯಾತ್ಮಿಕ ಅಧಿಕಾರ ದಿಂದ ಲಾಭವನ್ನು ಪಡೆಯು ವುದು ಸಂಸ್ಥೆಯಾಗಿದೆ. ಆದ್ದರಿಂದ, ಅವಲಂಬನೆಯು ಸಂಸ್ಥೆ ಕೇಂದ್ರಿತ ವಾಗಿದೆ ಎಂದು ನ್ಯಾಯಾಲಯ ಹೇಳಿದೆ.ಮಠಾಧಿಪತಿಯ ಮರಣವು ಸ್ಪಷ್ಟವಾದ ಸಾಂಸ್ಥಿಕ ನಷ್ಟಕ್ಕೆ ಕಾರಣ ವಾಗುತ್ತದೆ. ಇದರಲ್ಲಿ ನಾಯಕತ್ವದ ಅಡ್ಡಿ, ಆಡಳಿತಾತ್ಮಕ ನಿರಂತರತೆ ಮತ್ತು ಕೊಡುಗೆಗಳು ಮತ್ತು ಆದಾಯದ ಮೇಲೆ ಸಂಭಾವ್ಯ ಪರಿಣಾಮ ಬೀರುತ್ತದೆ ಎಂದು ನ್ಯಾಯಾಲಯ ಹೇಳಿದೆ. ಕಾನೂನು ಮತ್ತು ಕ್ರಿಯಾತ್ಮಕ ಅರ್ಥದಲ್ಲಿ ಮಠವು ಮೃತರ ಆಸ್ತಿ ಮತ್ತು ಹಿತಾಸಕ್ತಿಗಳನ್ನು ಪ್ರತಿನಿಧಿಸುತ್ತದೆ ಎಂದು ಹೇಳಿರುವ ನ್ಯಾಯಾಲಯ, ಮಠವು ಕಾನೂನು ಪ್ರತಿನಿಧಿಯಾಗಿ ಅರ್ಹತೆ ಹೊಂದಿದೆ ಮತ್ತು ಅವಲಂಬನೆಯ ನಷ್ಟದ ಶೀರ್ಷಿಕೆಯಡಿ ಯಲ್ಲಿ ಪರಿಹಾರಕ್ಕಾಗಿ ಹಕ್ಕನ್ನು ಉಳಿಸಿಕೊಳ್ಳಬಹುದು ಎಂದು ತೀರ್ಪು ಹೇಳಿದೆ. ನ್ಯಾಯ ಮಂಡಳಿಯ ಆದೇಶವನ್ನು ಬದಿಗೆ ಸರಿಸಿರುವ ಹೈಕೋರ್ಟ್, 4,74,330 ರೂ. ಮತ್ತು ಅದಕ್ಕೆ ವಾರ್ಷಿಕ ಶೇ.6 ಬಡ್ಡಿಯಂತೆ ಅರ್ಜಿ ಸಲ್ಲಿಸಿದ ದಿನದಿಂದ ಇಲ್ಲಿಯವರೆಗೆ ಪಾವತಿಸಬೇಕು ಎಂದು ನಿರ್ದೇಶಿಸಿದೆ.

# ಆರ್ಟ್ ಆಫ್ ಗಿವಿಂಗ್ ವತಿಯಿಂದ ದಿನಸಿ, ಅಗತ್ಯ ವಸ್ತು ವಿತರಣೆ





**ಬೆಂಗಳೂರು, ಮೇ 7:** ಆರ್ಟ್ ಆಫ್ ಗಿವಿಂಗ್‌ನ 13 ನೇ ವರ್ಷಾಚರಣೆ ಅಂಗವಾಗಿ ನಗರದ ವಿವಿಧೆಡೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಇದರ ಭಾಗವಾಗಿ ಇಂದು ಜಕ್ಕೂರಿನ ನವ್ಯನಗರದಲ್ಲಿ ಮನೆಕೆಲಸ ಮಾಡುವ ಬಡ ಮಹಿಳೆಯರಿಗೆ ದಿನಸಿ ಸಾಮಗ್ರಿ ಸೇರಿದಂತೆ ಹಲವು ವಸ್ತುಗಳನ್ನು ವಿತರಿಸಲಾಯಿತು.

ಜಕ್ಕೂರಿನ ಸ್ಥಳೀಯ ಮಹಿಳೆಯರೇ ಸೇರಿಕೊಂಡು ಆರ್ಟ್ ಆಫ್ ಗಿವಿಂಗ್ ಅನ್ನು ವಿಶಿಷ್ಟವಾಗಿ ಆಚರಿಸಿದರು. ಈ ವರ್ಷದ ಆರ್ಟ್ ಆಫ್ ಗಿವಿಂಗ್‌ನ ಘೋಷವಾಕ್ಯ "ಶೇರ್ ಟು ಶೈನ್ ಆಗಿದ್ದು, ಅದಕ್ಕೆ ಪೂರಕವಾಗಿ ಸುಮಾರು 25 ಕ್ಕೂ ಹೆಚ್ಚು ಮಹಿಳೆಯರಿಗೆ ದಿನಸಿ ಪದಾರ್ಥ, ಬಟ್ಟೆಗಳನ್ನು ಹಂಚಿದರು. ಈ ದಾನ ಕಾರ್ಯಕ್ರಮದಲ್ಲಿ ಆರ್ಟ್ ಆಫ್ ಗಿವಿಂಗ್‌ನ ಮಹಿಳಾ ಸ್ವಯಂಸೇವಕರೇ ಭಾಗವಹಿಸಿದ್ದು ವಿಶೇಷವಾಗಿತ್ತು.

ಪ್ರತಿ ವರ್ಷ ಮೇ 17 ರಂದು ವಿಶ್ವದೆಲ್ಲೆಡೆ ಆರ್ಟ್ ಆಫ್ ಗಿವಿಂಗ್‌ನ ವರ್ಷಾಚರಣೆ ನಡೆಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ವಿವಿಧ ದಾನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಇದೇ ರೀತಿ ಈ ಬಾರಿ ಜಕ್ಕೂರಿನಲ್ಲಿ ಬಡ ಮಹಿಳೆಯರಿಗೆ ನೆರವು ನೀಡುವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಬಟ್ಟೆ, ಆಹಾರ ಪದಾರ್ಥ ಹಂಚಿದ್ದಲ್ಲದೆ ತಿಂಡಿ ಹಾಗು ಪಾನೀಯ ಹಂಚಿ ಸಂಭ್ರಮಪಟ್ಟರು. ವಿವಿಧ ಮನೆಗಳಲ್ಲಿ ಕೆಲಸ ಮಾಡುವವರು, ಕೂಲಿ ಕೆಲಸ ಮಾಡುವವರು ದಾನ ಸ್ವೀಕರಿಸಿ ಖುಷಿಪಟ್ಟರು.

ಆರೋಗ್ಯ ಕಾಳಜಿಗೆ ಅರಿವು: ದಾನ ಕಾರ್ಯಕ್ರಮ ಅಲ್ಲದೆ ಆರೋಗ್ಯವಂತ ಜೀವನಕ್ಕಾಗಿ ಸ್ವಯಂಸೇವರು ನಿವಾಸಿಗಳಿಗೆ ಅರಿವು ಮೂಡಿಸಿದರು. ಪ್ಲಾಸ್ಟಿಕ್ ಬಳಕೆಯಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿಸಿದರು. ಸಕ್ಕರೆ ಬಳಕೆ ಕಡಿಮೆ ಮಾಡುವುದು ಮತ್ತು ಮಣ್ಣಿನ ಪಾತ್ರೆಗಳ ಮಹತ್ವದ ಬಗ್ಗೆ ಮಾಹಿತಿ ನೀಡಿದರು. ಮಕ್ಕಳಿಗೆ ಚಾಕೋಲೇಟ್ ನಂತಹ ಸಿಹಿ ಪದಾರ್ಥಗಳನ್ನು ಕೊಟ್ಟರೆ ಆಗುವ ಪರಿಣಾಮದ ಬಗ್ಗೆಯೂ ತಿಳಿಸಿದರು. ತುಂಬಾ ಸಹಕಾರವಾಯಿತು: ಆರ್ಟ್ ಆಫ್ ಗಿವಿಂಗ್‌ನ ದಾನ ಸ್ವೀಕರಿಸಿದ ಭಾಗ್ಯಮ್ಮ ಅವರು ಮಾತನಾಡಿ, ಇಂತಹ ಕಾರ್ಯಕ್ರಮ ವಿಶಿಷ್ಟವಾಗಿದೆ. ನಮ್ಮ ಮನೆಗಳ ಸಮೀಪದೇ ಇಂತಹ ಕಾರ್ಯಕ್ರಮ ಆಯೋಜಿಸಿ ಸಹಾಯ ಮಾಡಿದರು. ಇದು ನಮಗೆಲ್ಲ ಖುಷಿ ನೀಡಿತು ಎಂದರು.

ಡಾ. ಅಚ್ಯುತ ಸಮಂತ ಅವರ ಪರಿಕಲ್ಪನೆಯ ಆರ್ಟ್ ಆಫ್ ಗಿವಿಂಗ್ ನ ಭಾಗವಾಗಿ ಈ ದಾನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಅಗತ್ಯ ಇರುವವರಿಗೆ ಬಟ್ಟೆ ಹಾಗೂ ಆಹಾರ ಪದಾರ್ಥ ಹಂಚಲಾಯಿತು,? ಎಂದು ಜಕ್ಕೂರಿನ ನಿವಾಸಿ ಲಕ್ಷ್ಮಿ ಅವರು ಹೇಳಿದರು.

# ಕಾರ್ಖಾನೆಗಳಿಗೆ ಪೂರೈಸಿದ ರೈತರ ಕಬ್ಬಿನ ಬಾಕಿ ಹಣ ಪಾವತಿಗೆ ಆಗ್ರಹ



**ಬೀದರ್, ಮೇ. 7:** ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಪೂರೈಸಿದ ರೈತರ ಬಾಕಿ ಹಣ ಪಾವತಿಗೆ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಸಂಯುಕ್ತ ಕಿಸಾನ್ ಮೋರ್ಚಾ ಜಿಲ್ಲಾ ಘಟಕ ಆಗ್ರಹಿಸಿ, ಈ ಸಂಬಂಧ ಮೋರ್ಚಾದ ಪದಾಧಿಕಾರಿಗಳು ನಗರದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ಕಬ್ಬಿನ ಹಣ ಬಾಕಿ ಉಳಿಸಿಕೊಂಡಿದ್ದರಿಂದ ರೈತರಿಗೆ ತೊಂದರೆ ಯಾಗುತ್ತಿದೆ. ಕೂಡಲೇ ಪಾವತಿಸಬೇಕು. ರೈತರ ಸಾಲಮನ್ನಾ ಮಾಡಬೇಕು. ಸಹಕಾರ ಸಂಘಗಳಲ್ಲಿ ನಡೆಯುತ್ತಿರುವ ಅಕ್ರಮಗಳ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಟನ್ ಕಬ್ಬಿಗೆ 2,950 ದರ ನಿಗದಿಯಾದರೂ, ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗಳು ರೈತರಿಗೆ ಹಣ ಪಾವತಿಸಿಲ್ಲ. ಬಾಕಿ ಹಣವನ್ನು ಶೇ 18 ಬಡ್ಡಿಯೊಂದಿಗೆ ಪಾವತಿಸಬೇಕು. ತಪ್ಪಿತಸ್ಥರ ವಿರುದ್ಧ ಅಪರಾಧಿಕ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಬಿ ಎಸ್ ಎಸ್ ಕೆ ಯನ್ನು ನಿಯಮಬಾಹಿರವಾಗಿ ಮುಚ್ಚಲಾಗಿದೆ. ಕಾರ್ಖಾನೆ ಪುನಃ ಪ್ರಾರಂಭಿಸಿ ಸರ್ಕಾರದ ವಶಕ್ಕೆ ತೆಗೆದುಕೊಳ್ಳಬೇಕು. ಅಲ್ಲಿನ ಯಂತ್ರೋಪಕರಣಗಳು ಕಾಣೆಯಾಗಿರುವುದಾಗಿ ತಿಳಿದುಬಂದಿದ್ದು, ಈ ಕುರಿತು ತನಿಖೆ ನಡೆಸಬೇಕು ಎಂದರು.

ಕಾರ್ಖಾನೆಯ ಕಾರ್ಮಿಕರಿಗೆ ಸುಮಾರು 32 ಕೋಟಿ ವೇತನ ಪಾವತಿಸಬೇಕಿದೆ. 1.19 ಕೋಟಿ ಉಪಧ ಪರಿಹಾರ ಬಾಕಿ ಉಳಿಸಿಕೊಳ್ಳಲಾಗಿದೆ. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಅಕ್ರಮಗಳು ನಡೆಯುತ್ತಿದ್ದು, ಅಷ್ಟೂರ, ಕಿಟ್ಟಾ ಹಾಗೂ ನಂದಗಾಂವ್‌ನಲ್ಲಿ ನಡೆದಿರುವ ಪ್ರಕರಣಗಳ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ರೈತರ ಆರ್ಥಿಕ ಸ್ಥಿತಿ ಹದಗೆಟ್ಟಿದೆ. ಎಲ್ಲಾ ರೀತಿಯ ಸಾಲ ಮನ್ನಾ ಮಾಡಬೇಕು. ಡಿ.ಸಿ.ಸಿ ಬ್ಯಾಂಕ್ ಹಾಗೂ ಸಕ್ಕರೆ ಕಾರ್ಖಾನೆಗಳಲ್ಲಿ ಖಾಸಗಿ ವ್ಯಕ್ತಿಗಳನ್ನು ವ್ಯವಸ್ಥಾಪಕ ನಿರ್ದೇಶಕರಾಗಿ ನೇಮಕ ಮಾಡುವುದನ್ನು ನಿಲ್ಲಿಸಿ, ಸರ್ಕಾರಿ ಅಧಿಕಾರಿಗಳನ್ನು ನೇಮಕ ಮಾಡಲು ಶಿಫಾರಸು ಮಾಡಬೇಕೆಂದು. ಕಾರಂಜಾ ಅಣೆಕಟ್ಟೆಯಿಂದ ಕಾಲುವೆಗಳಿಗೆ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

## ಭಾಲ್ಕಿಯ ಚನ್ನಬಸವೇಶ್ವರ ಗುರುಕುಲದಲ್ಲಿ ಜೆಇಇ ಸಾಧಕರಿಗೆ ಸನ್ಮಾನ

# ಗಡಿಭಾಗದ ಶೈಕ್ಷಣಿಕ ಕ್ಷೇತ್ರದಲ್ಲಿ ಅದ್ಭುತ ಕ್ರಾಂತಿ: ಸಚಿವ ಖಂಡ್ರೆ



**ಬೀದರ್, ಮೇ. 7:** ಮಹಾರಾಷ್ಟ್ರದ ಗಡಿಯಲ್ಲಿರುವ ಹಿಂದುಳಿದ ಹಣೆಪಟ್ಟಿ ಹೊತ್ತಿದ್ದ ಭಾಲ್ಕಿ ಗಡಿಗ್ರಾಮ, ಇದೀಗ ಶೈಕ್ಷಣಿಕ ಕ್ಷೇತ್ರದಲ್ಲಿ ಬಹುದೊಡ್ಡ ಕ್ರಾಂತಿ ನಡೆಸುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಜಿಲ್ಲೆಯ ಕರಡ್ಯಾಳ ಚನ್ನ ಬಸವೇಶ್ವರ ಗುರುಕುಲ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನ ವತಿಯಿಂದ ಆಯೋಜಿಸಿದ್ದ 2027ನೇ ಸಾಲಿನ ಜೆಇಇ ಮೇನ್ಸ್ ಸಾಧಕರ ಸನ್ಮಾನ ಸಮಾರಂಭ ಉದ್ಘಾಟಿಸಿದ ಅವರು, ಈ ಭಾಗದ ಸರ್ವತೋಮುಖ ಅಭಿವೃದ್ಧಿ ದೃಷ್ಟಿಯಿಂದ ಡಾ.ಬಸವಲಿಂಗ ಪಟ್ಟದ್ದೇವರು ಸ್ಥಾಪಿಸಿದ ಶೈಕ್ಷಣಿಕ ಸಂಸ್ಥೆಯಲ್ಲಿ ಗುಣಾತ್ಮಕ ಶಿಕ್ಷಣ ಮತ್ತು ಸಂಸ್ಕಾರಕ್ಕೆ ಒತ್ತು ನೀಡಲಾಗುತ್ತಿದೆ. ಹಾಗಾಗಿ ಈ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಅದ್ಭುತ ಸಾಧನೆಗೈಯುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.

ಚನ್ನಬಸವೇಶ್ವರ ಗುರುಕುಲ ಜೆಇಇ ಮತ್ತು ನೀಟ್ ಸಾಧಕರ ಕೇಂದ್ರವಾಗಿ ಹೊರ ಹೊಮ್ಮುತ್ತಿದೆ. ಈ ವರ್ಷ 200 ವಿದ್ಯಾರ್ಥಿಗಳು ತೇರ್ಗಡೆ ಆಗಿರುವುದು ಹೆಮ್ಮೆ ತರಿಸಿದೆ. ಒಂದು ಕಾಲದಲ್ಲಿ ಜಿಲ್ಲೆಯಿಂದ ವರ್ಷಕ್ಕೆ ಕೇವಲ 15-20 ವಿದ್ಯಾರ್ಥಿಗಳು ಮಾತ್ರ ವೈದ್ಯಕೀಯ ಕ್ಷೇತ್ರ ಪ್ರವೇಶ ಪಡೆಯುತ್ತಿದ್ದರು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಈ ಭಾಗದ ಮಕ್ಕಳು ಬೆಂಗಳೂರು, ಮೈಸೂರು ಸೇರಿ ಮುಂತಾದ ಕಡೆಗಳಿಗೆ ತೆರಳುತ್ತಿದ್ದರು. ಇದೀಗ ಪರಿಸ್ಥಿತಿ ಸಂಪೂರ್ಣ ಬದಲಾಗಿದೆ. ಎಲ್ಲರೂ ಪರಮ ಪೂಜ್ಯರು ಸ್ಥಾಪಿಸಿದ ವಿದ್ಯಾಸಂಸ್ಥೆಯ ಕಡೆಗೆ ಮುಖ ಮಾಡಿದ್ದಾರೆ. ಪೂಜ್ಯರ ಸಂಸ್ಥೆಯಲ್ಲಿ ಕಲಿಕೆಗೆ ಪೂರಕ ವಾತಾವರಣ ಕಲ್ಪಿಸಲಾಗಿದೆ. ಹಾಗಾಗಿ ಪ್ರತಿವರ್ಷ ಈ ಸಂಸ್ಥೆಯ ಒಂದರಿಂದಲೇ ಸುಮಾರು 200ಕ್ಕೂ ಅಧಿಕ ಮಕ್ಕಳು ವೈದ್ಯಕೀಯ ಕ್ಷೇತ್ರ ಪ್ರವೇಶ ಪಡೆಯುತ್ತಿದ್ದಾರೆ. ನೂರಾರು ಮಕ್ಕಳು ಜೆಇಇ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿ ಐಐಟಿ, ಎನ್‌ಐಟಿ, ಐಐಐಟಿಯಲ್ಲಿ ಪ್ರವೇಶ ಪಡೆದು ಈ ಭಾಗದ ಕೀರ್ತಿ ಹೆಚ್ಚಿಸುತ್ತಿದ್ದಾರೆ. ಗ್ರಾಮೀಣ ಭಾಗದ ಬಡ ಮಕ್ಕಳು ಎಸ್ಸೆಸ್ಸೆಲ್ಸಿ-ಪಿಯುಸಿಯಲ್ಲಿ ಉತ್ತಮ ಫಲಿತಾಂಶ ಪಡೆದು ಗಡಿಜಿಲ್ಲೆ ಬೀದರ್ ಕೀರ್ತಿ ರಾಜ್ಯ ಮತ್ತು ರಾಷ್ಟ್ರದಾದ್ಯಂತ ಪಸರಿಸುತ್ತಿದ್ದಾರೆ ಎಂದು ಹೆಮ್ಮೆ ವ್ಯಕ್ತ ಪಡಿಸಿದರು.

ಜೆಇಇಯಲ್ಲಿ ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳು ಯಾವುದೇ ವ್ಯಸನಗಳಿಗೆ ಬಲಿಯಾಗದೇ ಶೈಕ್ಷಣಿಕವಾಗಿ ಪ್ರಗತಿ ಸಾಧಿಸಿ ಕಲಿತ ವಿದ್ಯಾಸಂಸ್ಥೆ ಮತ್ತು ಹೆತ್ತವರಿಗೆ ಗೌರವ ತಂದು ಕೊಡಬೇಕು ಎಂದು ತಿಳಿಸಿದರು.

ಪ್ರಾಚಾರ್ಯ ಬಸವರಾಜ ಮೊಳಕೀರೆ ಮಾತನಾಡಿ, ಜೆಇಇ ಮೇನ್ಸ್ ಪರೀಕ್ಷೆಗೆ ದೇಶದಾದ್ಯಂತ 11 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅದರಲ್ಲಿ ನಮ್ಮ ಸಂಸ್ಥೆಯಿಂದ ಸುಮಾರು 200ಕ್ಕೂ ಅಧಿಕ ವಿದ್ಯಾರ್ಥಿಗಳು ತೇರ್ಗಡೆ ಆಗಿದ್ದಾರೆ. ವಿದ್ಯಾರ್ಥಿ ವಿಶ್ವರಾಜ ದೇಶಕ್ಕೆ ಪ್ರಥಮ ರ್‍ಯಾಂಕ್ ಪಡೆದು ಸಂಸ್ಥೆಯ ಕೀರ್ತಿ ಹೆಚ್ಚಿಸಿದ್ದಾರೆ ಎಂದು ತಿಳಿಸಿದರು.

ಆಡಳಿತಾಧಿಕಾರಿ ಮೋಹನರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ವಿದ್ಯಾರ್ಥಿಗಳು ಓದಿನ ಜತೆಗೆ ಉತ್ತಮ ಆಚಾರ, ವಿಚಾರ, ನಯ, ವಿನಯತೆ ಮೈಗೂಡಿಸಿಕೊಂಡು ನಾಡಿನ ಉತ್ತಮ ನಾಗರಿಕರಾಗಿ ದೇಶಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದರು.

**ಜೆಇಇ ಸಾಧಕರಿಗೆ ಸನ್ಮಾನ**

**ಜೆಇಇ ಮೇನ್ಸ್‌ನಲ್ಲಿ ದೇಶಕ್ಕೆ ಪ್ರಥಮ ರ್‍ಯಾಂಕ್ ಪಡೆದ ವಿಶ್ವರಾಜ, ಪ್ರೀತಂ, ಓಜಾಸ್ ಜೈನ್, ಶಿವಾಂಗ, ವಿವೇಕ, ಉಲ್ಲಾಸ್, ಆಜಿಂಕ್ಯ, ನಾರಾಯಣ ರೆಡ್ಡಿ, ಜಯಂತ, ಆದರ್ಶರೆಡ್ಡಿ, ಅರುಣ, ನಿಧಿ, ರವಿಕುಮಾರ, ಶ್ರೀಶೈಲ್, ಸೋಹನಕುಕಾರ, ರಿಷಬ್, ಋಗ್ವೇದ, ಆದಿತ್ಯ, ಸಾಕ್ಷಿ, ಶಿವಕುಮಾರ್, ಕಾರ್ತಿಕಿ, ಕಿಶನ ಸಿಂಗ್, ಶ್ರೇಯಸ್, ವೈಭವ ಮತ್ತು ಅನಂತ ಅವರನ್ನು ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಸನ್ಮಾನಿಸಿ, ಅಭಿನಂದಿಸಿದರು.**

> **ಗಡಿಭಾಗದ ಸರ್ವತೋಮುಖ ಅಭಿವೃದ್ಧಿಗಾಗಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ವಿದ್ಯಾ ದೇಗುಲ ತೆರೆದು ವೇದಿಕೆ ಕಲ್ಪಿಸಿ ಕೊಟ್ಟಿದ್ದಾರೆ. ಇದರ ಸದ್ಬಳಕೆ ಮಾಡಿಕೊಂಡು ಗ್ರಾಮೀಣ ಭಾಗದ ಬಡವರು, ರೈತರ ಮಕ್ಕಳು ನೀಟ್-ಜೆಇಇ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಪಡೆದು ಹೆಮ್ಮೆಯ ಸಾಧನೆ ಮಾಡುತ್ತಿದ್ದಾರೆ.**
> **- ಗುರುಬಸವ ಪಟ್ಟದ್ದೇವರು, ಹಿರೇಮಠ ಸಂಸ್ಥಾನ, ಭಾಲ್ಕಿ.**

# ರಾಯಚೂರು ಜಿಲ್ಲೆಗೆ ನೂತನ ಡಿಸಿಯಾಗಿ ಐಎಎಸ್ ಅಧಿಕಾರಿ ಪೂವಿತಾ ಎಸ್. ಅಧಿಕಾರ ಸ್ವೀಕಾರ



**ರಾಯಚೂರು, ಮೇ. 7:** ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ 2016ನೇ ಬ್ಯಾಚ್‌ನ ಐಎಎಸ್ ಅಧಿಕಾರಿ ಪೂವಿತಾ ಎಸ್ ಅವರನ್ನು ರಾಜ್ಯ ಸರ್ಕಾರ ನೇಮಕ ಮಾಡಿ ಅಧಿಕೃತ ಆದೇಶ ಹೊರಡಿಸಿದೆ. ಈ ಮೂಲಕ ಕಲ್ಯಾಣ ಕರ್ನಾಟಕ ಭಾಗದ ಪ್ರಮುಖ ಜಿಲ್ಲೆಗಳಲ್ಲಿ ಒಂದಾದ ರಾಯಚೂರಿಗೆ ಹೊಸ ಆಡಳಿತಾತ್ಮಕ ನಾಯಕತ್ವ ದೊರೆತಂತಾಗಿದೆ.

ಐಎಎಸ್ ಅಧಿಕಾರಿ ಪೂವಿತಾ ಅವರು, ಈ ಹಿಂದೆ ಕರ್ನಾಟಕ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಹಣಕಾಸು ನಿಗಮದ ವ್ಯವಸ್ಥಾಪಕ ನಿರ್ದೇಶಕಿಯಾಗಿ (ಎಂಡಿ) ಸೇವೆ ಸಲ್ಲಿಸುತ್ತಿದ್ದರು. ತಮ್ಮ ದಕ್ಷ ಆಡಳಿತ ಹಾಗೂ ಕರ್ತವ್ಯ ನಿಷ್ಠೆಯಿಂದ ಗುರುತಿಸಿಕೊಂಡಿರುವ ಇವರು, ಇದೀಗ ರಾಯಚೂರು ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

ರಾಯಚೂರು ಜಿಲ್ಲೆಯು ಕೃಷಿ, ಶಿಕ್ಷಣ, ಮೂಲಸೌಕರ್ಯ ಹಾಗೂ ಆರೋಗ್ಯ ಸೇರಿದಂತೆ ವಿವಿಧ ವಲಯಗಳಲ್ಲಿ ತನ್ನದೇ ಆದ ವಿಶಿಷ್ಟ ಸವಾಲುಗಳನ್ನು ಹೊಂದಿದೆ. ನೂತನ ಜಿಲ್ಲಾಧಿಕಾರಿಗಳು ಈ ಸವಾಲುಗಳನ್ನು ಹೇಗೆ ನಿರ್ವಹಿಸಲಿದ್ದಾರೆ ಹಾಗೂ ಜಿಲ್ಲೆಯ ಪ್ರಗತಿಗೆ ಯಾವ ರೀತಿಯ ಹೊಸ ಯೋಜನೆಗಳನ್ನು ತರಲಿದ್ದಾರೆ ಎಂಬುದು ಸಾರ್ವಜನಿಕರ ಕುತೂಹಲಕ್ಕೆ ಕಾರಣವಾಗಿದೆ.

ರಾಯಚೂರಿನ ಹಾಲಿ ಜಿಲ್ಲಾಧಿಕಾರಿಯಾಗಿ ದಕ್ಷತೆಯಿಂದ ಕಾರ್ಯ ನಿರ್ವಹಿಸುತ್ತಿದ್ದ ನಿತಿಶ್ ಕೆ ಅವರನ್ನು ರಾಜ್ಯ ಸರ್ಕಾರ ದಿಢೀರ್ ವರ್ಗಾವಣೆ ಮಾಡಿದೆ. ಆದರೆ, ಅವರಿಗೆ ಮುಂದಿನ ಹುದ್ದೆ ಮತ್ತು ಸ್ಥಳದ ಕುರಿತು ಸರ್ಕಾರದಿಂದ ಇನ್ನೂ ಯಾವುದೇ ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ. ಮುಂದಿನ ಆದೇಶದವರೆಗೆ ಅವರು ಸ್ಥಳ ನಿರೀಕ್ಷೆಯಲ್ಲಿದ್ದಾರೆ ಎಂದು ತಿಳಿದು ಬಂದಿದೆ. ನಿರ್ಗಮಿತ ಜಿಲ್ಲಾಧಿಕಾರಿ ನಿತಿಶ್ ಕೆ ಅವರು ರಾಯಚೂರಿನಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು. ಅವರು ಜಿಲ್ಲಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದ ಅವಧಿಯಲ್ಲಿ ಅನೇಕ ಆಡಳಿತಾತ್ಮಕ ಮತ್ತು ಮೂಲಸೌಕರ್ಯ ಸವಾಲುಗಳ ನಡುವೆಯೂ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಚುರುಕು ನೀಡಿದ್ದರು. ಜನಪರ ಯೋಜನೆಗಳನ್ನು ತಳಮಟ್ಟದ ಜನರಿಗೆ ತಲುಪಿಸುವಲ್ಲಿ ಶ್ರಮಿಸಿದ್ದರು. ಅವರ ಅಧಿಕಾರಾವಧಿಯಲ್ಲಿ ಅತ್ಯಂತ ಅಚ್ಚುಕಟ್ಟಾಗಿ ಜಿಲ್ಲಾ ಉತ್ಸವಗಳನ್ನು ಆಯೋಜಿಸಲಾಗಿತ್ತು. ಇದು ಸ್ಥಳೀಯ ಕಲೆ, ಸಂಸ್ಕೃತಿ

# ಗೃಹ ಸಚಿವರು ಸ್ಥಳಕ್ಕೆ ಆಗಮಿಸುವವರೆಗೂ ಅನಿರ್ದಿಷ್ಟಾವಧಿ ಧರಣಿ : ನಾಗರಾಜ ನಾಯಕ



**ಅಂಕೋಲಾ, ಮೇ7-** ಗೃಹ ಸಚಿವರ ಹೆಸರು ಹೇಳಿಕೊಂಡು ಶಾಸಕ ಸ್ಥಾನದ ಅಪೇಕ್ಷೆಯಿಂದ ಗೋಪಾಲಕೃಷ್ಣ ನಾಯಕಮನಸ್ಸಿಗೆ ಬಂದಂತೆ ಮೆರೆಯುತ್ತಿದ್ದು, ಅದಕ್ಕೆ ಕಡಿವಾಣ ಹಾಕಬೇಕು. ಗೃಹ ಸಚಿವರ ಪ್ರಭಾವ ನಿಲ್ಲಿಸಬೇಕು ಮತ್ತು ಗೃಹ ಸಚಿವ ಪರಮೇಶ್ವರ ತಾಲೂಕಿಗೆ ಆಗಮಿಸುವವರೆಗೆ ಅನಿರ್ಧಿಷ್ಟಾವಧಿ ಧರಣಿ ಮುಂದುವರೆಯುತ್ತದೆ ಎಂದು ನ್ಯಾಯವಾದಿ ನಾಗರಾಜ ನಾಯಕ ಹೇಳಿದರು.

ಪಟ್ಟಣದ ತಹಸೀಲ್ದಾರ ಕಚೇರಿಯ ಹೊರಾಂಗಣದ ಧರಣಿಯಲ್ಲಿ ಪಾಲ್ಗೊಂಡು ಗೃಹ ಸಚಿವರ ಆಪ್ತ ಎಂದು ಹೇಳಿಕೊಳ್ಳುತ್ತಾ ಗೃಹ ಸಚಿವರ ಕಚೇರಿಯಿಂದ ಫೋನ್ ಮಾಡಿಸುತ್ತಾ ಕೆಲವು ದುಷ್ಕೃತ್ಯ ಗಳನ್ನು ಮಾಡುತ್ತಿದ್ದಾನೆ. ಶಾಸಕನಾಗಬೇಕು ಎನ್ನುವ ಹುಚ್ಚಿನಿಂದ ಅಂಕೋಲಾದ ಶಾಂತ ಊರುಗಳಲ್ಲಿ ಅಶಾಂತಿ ಉಂಟು ಮಾಡುತ್ತಿದ್ದಾನೆ ಎಂದರು. ವಂದಿಗೆ ಗ್ರಾಮದಲ್ಲಿ ಬುಧವಾರ ರಾತ್ರಿ ಕಾರ್ಯಕ್ರಮ ನಡೆಯುವಾಗ ಗೋಪಾಲಕೃಷ್ಣ ನಾಯಕ ಚಿತಾವಣೆಯಿಂದ ಕೆಲವು ಯುವಕರು ನಾನು ಮಾತನಾಡುತ್ತಿರುವಾಗ ಅವಾಚ್ಯಶಬ್ದಗಳಿಂದ ನಿಂದಿಸಿ ಅಪಹಾಸ್ಯ ಮಾಡಿದ್ದಾರೆ. ಅದರ ವಿರುದ್ಧದೂರು ನೀಡಲು ಬಂದಾಗ ನಮ್ಮೊಂದಿಗೆ ಬಂದ ಕೆಲವು ಅಮಾಯಕರ ಮೇಲು ಗೋಪಾಲಕೃಷ್ಣ ನಾಯಕ ದೂರು ನೀಡಿದ್ದಾನೆ ಎಂದು ವಿವರಿಸಿದರು.

# ಹಳ್ಳಿ ಜನರ ಕಷ್ಟಕ್ಕೆ ಸಿಗದ ಸ್ಪಂದನೆ




**ರಾಯಚೂರು, ಮೇ. 7:** ಗ್ರಾಮ ಪಂಚಾಯಿತಿ ಸದಸ್ಯರ ಅಧಿಕಾರ ಅವಧಿ ಮುಗಿದ ಬೆನ್ನಲ್ಲೇ ಜಿಲ್ಲಾಡಳಿತ ಗ್ರಾಮ ಪಂಚಾಯಿತಿ ಆಡಳಿತ ನಿರ್ವಹಣೆಗೆ ಆಡಳಿತಾಧಿಕಾರಿಗಳ ನೇಮಕ ಮಾಡಿದೆ. ಮಾತ್ರ ಇಲಾಖೆಯ ಕಾರ್ಯಭಾರದ ಒತ್ತಡದಿಂದ ಆಡಾಳಿತಾಧಿಕಾರಿಗಳು ಗ್ರಾ.ಪಂ ಕಚೇರಿಗಳಿಗೆ ಭೇಟಿ ನೀಡುತ್ತಿಲ್ಲ. ಹೀಗಾಗಿ ಅವರು ಗ್ರಾಮ ಪಂಚಾಯತಿ ಕಚೇರಿಗಳಿಗೆ ಭೇಟಿ ನೀಡುವುದು ಕಡಿಮೆಯಗಿದ್ದು, ಸರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವವರು ಇಲ್ಲ ಎಂಬ ಆರೋಪ ಕೇಳಿ ಬಂದಿದೆ.

ಪಂಚಾಯಿತಿ ಆಡಳಿತ ಸಂಪೂರ್ಣ ಕುಸಿದಿದ್ದು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದನೆ ಸಿಗುತ್ತಿಲ್ಲ ಎನ್ನುವುದು ಜನರ ಬೇಸರ. ಬೇಸಿಗೆ ಅವಧಿಯಲ್ಲಿ ಬಹುತೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆಗೆ ತೊಂದರೆ ಆಗುತ್ತಿದೆ, ನೈರ್ಮಲ್ಯ ಕಾಪಾಡಲು ಅಧಿಕಾರಿಗಳು ಮುಂದಾಗುತ್ತಿಲ್ಲ ಎನ್ನುವ ದೂರುಗಳು ಹೆಚ್ಚಾಗುತ್ತಿವೆ. 2026 ಜ.28ರಂದು ಸದಸ್ಯರ ಅಧಿಕಾರ ಅವಧಿ ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಆಡಳಿತಾಧಿಕಾರಿಗಳನ್ನಾಗಿ ನೇಮಕ ಮಾಡಿದ್ದು ತಲಾ 2-3 ಗ್ರಾಮ ಪಂಚಾಯಿತಿಗಳ ಜವಾಬ್ದಾರಿ ವಹಿಸಲಾಗಿದೆ. ಬಹುತೇಕ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡದೇ ತಾಲ್ಲೂಕು ಕೇಂದ್ರಗಳಲ್ಲೇ ಉಳಿದುಕೊಂಡಿರುವುದರಿಂದ ಆಡಳಿತ ವ್ಯವಸ್ಥೆ ಕುಸಿದಿದೆ. ಈ ಸಲ ಬಿಸಿಲು ತೀವ್ರವಾಗಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ಮಳೆಗಾಲದ ಪೂರ್ವ ಸಿದ್ಧತೆಗಾಗಿ ಚರಂಡಿ ಸ್ವಚ್ಛತೆ, ವಿದ್ಯುತ್ ಲೈನ್ ದುರಸ್ತಿ ಸೇರಿದಂತೆ ತುರ್ತು ಕಾಮಗಾರಿಗಳ ಅಗತ್ಯವಿದ್ದರೂ ಅಧಿಕಾರಿಗಳ ನಿರ್ಲಕ್ಷ್ಯದಿಂದ ವಿಳಂಬವಾಗುತ್ತಿವೆ ಎಂಬ ಅಸಮಾಧಾನ ವ್ಯಕ್ತವಾಗಿದೆ. ಗ್ರಾಮಸ್ಥರಿಗೆ ಆಡಳಿತಾಧಿಕಾರಿಗಳ ಪರಿಚಯ ವಾಗಿಲ್ಲದೆ, ಸಂಪರ್ಕಕ್ಕೆ ಸಿಗದಿರುವುದು ಸಮಸ್ಯೆಯನ್ನು ಮತ್ತಷ್ಟು ಗಂಭೀರಗೊಳಿಸಿದೆ. ಚುನಾಯಿತ ಪ್ರತಿನಿಧಿಗಳಿಲ್ಲದ ಈ ಅವಧಿಯಲ್ಲಿ ಆಡಳಿತಾಧಿಕಾರಿಗಳ ಪಾತ್ರ ಮಹತ್ವದ್ದಾಗಿದ್ದರೂ ಅವರ ನಿರ್ಲಕ್ಷ ಮೂಲ ಸೌಕರ್ಯಗಳ ಮೇಲೆ ಪರಿಣಾಮ ಬೀರುತ್ತಿದೆ. ಈ ಬಗ್ಗೆ ಜಿಲ್ಲಾಡಳಿತ ಗಮನಹರಿಸಬೇಕು ಮತ್ತು ಆಡಳಿತಾಧಿಕಾರಿಗಳನ್ನು ಪಂಚಾಯಿತಿಗೆ ಭೇಟಿ ನೀಡಲು ಸೂಚಿಸಬೇಕು ಎಂದು ಅಯ್ಯಪ್ಪ, ಶಿವರಾಜ ಒತ್ತಾಯಿಸುತ್ತಾರೆ.

ರಾಯಚೂರು ಜಿಲ್ಲೆಯ ಅಧಿಕೃತ ವೆಬ್‌ಸೈಟ್‌ನ ಜನಸಂಖ್ಯಾ ವಿವರಗಳ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 884 ಹಳ್ಳಿ, 7 ತಾಲ್ಲೂಕು, 179 ಗ್ರಾ.ಪಂಗಳನ್ನು ಒಳಗೊಂಡಿದೆ. ಗ್ರಾಮ ಸಭೆಗಳು ಆಯಾ ಗ್ರಾಮದ ಮಹತ್ವದ ಸಭೆಯಾಗಿವೆ. ಆದರೆ ಬಹುತೇಕ ಕಡೆ ನಿಯೋಜಿತ ಆಡಳಿತಾಧಿಕಾರಿಗಳು ಗ್ರಾಮ ಸಭೆಗಳಲ್ಲಿ ಪಾಲ್ಗೊಳ್ಳುತ್ತಿಲ್ಲ. ಪಿಡಿಒ ಹಾಗೂ ಇತರ ಸಿಬ್ಬಂದಿಗೆ ಸೂಕ್ತ ನಿರ್ದೇಶನ ನೀಡುತ್ತಿಲ್ಲ. ಇದರಿಂದ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ನಿಧಾನಗೊಂಡಿದ್ದು, ಸ್ಥಳೀಯ ಸಮಸ್ಯೆಗಳು ಪರಿಹಾರವಾಗದೆ ಉಳಿಯುತ್ತಿವೆ.

**ಚುನಾವಣೆ ನಡೆಸಲು ಆಗ್ರಹ** :'ರಾಜ್ಯದಲ್ಲಿ ಬಹುತೇಕ ಗ್ರಾ.ಪಂಗಳ ಅಧಿಕಾರ ಅವಧಿ ಮುಗಿದು ಐದು ತಿಂಗಳು ಕಳೆದರೂ ಸರ್ಕಾರ ಚುನಾವಣೆ ನಡೆಸಲು ಆಸಕ್ತಿ ತೋರುತ್ತಿಲ್ಲ. ಗ್ರಾ.ಪಂ ಮೇಲುಸ್ತುವಾರಿಗೆ ನೇಮಕವಾದ ಅಧಿಕಾರಿಗಳು ಪರಿಣಾಮಕಾರಿ ಆಡಳಿತ ನೀಡುತ್ತಿಲ್ಲ ಎಂದು ಮುಖಂಡ ಸಿದ್ಧಪ್ಪ ನಾಯಕ ಅಸಮಾಧಾನ ವ್ಯಕ್ತಪಡಿಸುತ್ತಾರೆ.

ಚುನಾಯಿತ ಸದಸ್ಯರು ಇಲ್ಲದೆ ಇರುವುದರಿಂದ ಸ್ಥಳೀಯ ಸಮಸ್ಯೆಗಳಿಗೆ ತ್ವರಿತ ಪರಿಹಾರ ಸಿಗುತ್ತಿಲ್ಲ. ಕುಡಿಯುವ ನೀರು, ಬೀದಿ ದೀಪ, ಆರೋಗ್ಯ ಮತ್ತು ಸ್ವಚ್ಛತೆ, ಕಸ ವಿಲೇವಾರಿಗೆ ಸಮಸ್ಯೆ ಆಗಿದೆ. ಸರ್ಕಾರ ಗ್ರಾ.ಪಂ ಚುನಾವಣೆ ನಡೆಸಬೇಕು ಎಂದು ಸಿದ್ಧಪ್ಪ ನಾಯಕ ಒತ್ತಾಯಿಸುತ್ತಾರೆ. ಜಿಲ್ಲೆಯ ವಿವಿಧ ಗ್ರಾ.ಪಂಗಳಿಗೆ ನೇಮಕಗೊಂಡಿರುವ ಬಹುತೇಕ ಆಡಳಿತಾಧಿಕಾರಿಗಳು ಪಂಚಾಯಿತಿಗಳಿಗೆ ಭೇಟಿ ಕೊಡುತ್ತಿಲ್ಲ. ಜನರ ಸಮಸ್ಯೆಗಳಿಗೂ ಸ್ಪಂದಿಸುತ್ತಿಲ್ಲಈಶ್ವರ್ ಹೆಗ್ಗಡದಿನ್ನಿ, ಸಾಮಾಜಿಕ ಕಾರ್ಯಕರ್ತ ಜಿಲ್ಲಾಧಿಕಾರಿಗಳೂ ಕುಡಿಯುವ ನೀರಿನ ಕೊರತೆಯಾಗದಂತೆ ನೋಡಿಕೊಳ್ಳಲು ತಾಲ್ಲೂಕಿಗೆ ಒಬ್ಬ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಿದ್ದಾರೆ. ನೋಡಲ್ ಅಧಿಕಾರಿಗಳು ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ಖುದ್ದು ಭೇಟಿ ಕೊಟ್ಟು ಸಮಸ್ಯೆ ಆಲಿಸಬೇಕು.

# ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಅಂ. ರಾ. ಸಮ್ಮೇಳನ ಕರಪತ್ರ ಬಿಡುಗಡೆ



**ಕಲಬುರಗಿ, ಮೇ.7:** ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ "ದೇವಾಲಯಗಳ ಆರ್ಥಿಕತೆ, ಪ್ರವಾಸೋದ್ಯಮ ಮತ್ತು ಸಾರ್ವಜನಿಕ ನೀತಿ" ವಿಷಯದ ಕುರಿತು 2026ರ ಆಗಸ್ಟ್ 5 ರಿಂದ 7ರವರೆಗೆ ನಡೆಯಲಿರುವ ಅಂತರರಾಷ್ಟ್ರೀಯ ಸಮ್ಮೇಳನದ ಕರಪತ್ರವನ್ನು ಗುರುವಾರ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ, ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ ಸೇರಿದಂತೆ ವಿವಿಧ ವಿಭಾಗಗಳ ಅಧ್ಯಾಪಕರಾದ ಪ್ರೊ. ಪಾಂಡುರಂಗಾ ವಿ. ಡಾ. ಜಿ. ಮಹೇಂದ್ರ ರೆಡ್ಡಿ, ಪ್ರೊ. ಪುಷ್ಪಾ ಸವದತ್ತಿ, ಡಾ. ಎಸ್. ಲಿಂಗಮೂರ್ತಿ, ಪ್ರೊ. ದೇವರಾಜ ಸೇರಿದಂತೆ ಇತರ ಅಧ್ಯಾಪಕರು ಬಿಡುಗಡೆ ಮಾಡಿದರು.

ಕೇಂದ್ರೀಯ ವಿಶ್ವವಿದ್ಯಾಲಯ ಮತ್ತು ಭಾರತೀಯ ಸಾಮಾಜಿಕ ವಿಜ್ಞಾನ ಸಂಶೋಧನಾ ಮಂಡಳಿ, ನವದೆಹಲಿ ಇವರ ಸಂಯುಕ್ತ ಆಶ್ರಯದಲ್ಲಿ "ದೇವಾಲಯ ಆರ್ಥಿಕತೆ, ಪ್ರವಾಸೋದ್ಯಮ ಮತ್ತು ಸಾರ್ವಜನಿಕ ನೀತಿ: ಆಡಳಿತ, ಜೀವನೋಪಾಯಗಳು ಮತ್ತು ಸ್ಥಿರ ಪ್ರಾದೇಶಿಕ ಅಭಿವೃದ್ಧಿ" ಎಂಬ ವಿಷಯದ ಅಂತರರಾಷ್ಟ್ರೀಯ ಸಮ್ಮೇಳನವು ಸಿಯುಕೆ ಆವರಣದಲ್ಲಿ ನಡೆಯಲಿದೆ.

ಸಮ್ಮೇಳನದಲ್ಲಿ ದೇವಾಲಯಗಳ ಆರ್ಥಿಕ, ಸಾಮಾಜಿಕ ಹಾಗೂ ಸಾರ್ವಜನಿಕ ನೀತಿ ಸಂಬಂಧಿತ ಆಯಾಮಗಳ ಕುರಿತು ಪ್ರಬಂಧ ಮಂಡನೆ, ಚರ್ಚೆ ಮತ್ತು ಸಂವಾದಗಳು ನಡೆಯಲಿವೆ. ದೇಶೀಯ ಮತ್ತು ಅಂತರರಾಷ್ಟ್ರೀಯ ಮಟ್ಟದ ಶಿಕ್ಷಣ ತಜ್ಞರು, ಸಂಶೋಧಕರು, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಹಾಗೂ ವಿವಿಧ ದೇವಾಲಯಗಳ ಆಡಳಿತಾಧಿಕಾರಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

ದೇವಾಲಯಗಳು ಮತ್ತು ಪ್ರಾದೇಶಿಕ ಅಭಿವೃದ್ಧಿ, ಜೀವನೋಪಾಯ ಸೃಷ್ಟಿ, ಸಾಂಸ್ಕೃತಿಕ ಸಂರಕ್ಷಣೆ ಮತ್ತು ಸ್ಥಿರ ಪ್ರವಾಸೋದ್ಯಮಕ್ಕೆ ನೀಡುವ ಕೊಡುಗೆಯನ್ನು ಅನ್ವೇಷಿಸುವುದು ಈ ಸಮ್ಮೇಳನದ ಮುಖ್ಯ ಉದ್ದೇಶವಾಗಿದೆ. ಆಸಕ್ತರು ದೇವಾಲಯ ಆರ್ಥಿಕತೆ ಮತ್ತು ಅದರ ಆರ್ಥಿಕ ಪರಿಣಾಮ, ಆಡಳಿತ ಮತ್ತು ಕಾನೂನು ಚೌಕಟ್ಟುಗಳು, ಸ್ಥಿರ ಪ್ರವಾಸೋದ್ಯಮ, ಪರಂಪರೆ ಮತ್ತು ಸಾಂಸ್ಕೃತಿಕ ಸಂಪತ್ತು, ದೇವಾಲಯ ನಿರ್ವಹಣೆಯಲ್ಲಿ ಡಿಜಿಟಲ್ ನವೀಕರಣ ಮತ್ತು ಕೃತಕ ಬುದ್ಧಿಮತ್ತೆ ಕುರಿತು ಪ್ರಬಂಧ ಮಂಡನೆ ಮಾಡಬಹುದಾಗಿದೆ.

ಸಂಕ್ಷಿಪ್ತ ಪ್ರಬಂಧ ಸಲ್ಲಿಕೆಗೆ ಜೂನ್ 15, 2026 ಕೊನೆಯ ದಿನವಾಗಿದ್ದು, ಸಂಪೂರ್ಣ ಪ್ರಬಂಧ ಸಲ್ಲಿಕೆಗೆ ಜುಲೈ 15, 2026 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಡಾ. ಜಿ. ಮಹೇಂದ್ರ ರೆಡ್ಡಿ - 9666851851 ಮತ್ತು ಡಾ. ಎಸ್. ಲಿಂಗಮೂರ್ತಿ - 9014030809 ಅವರನ್ನು ಸಂಪರ್ಕಿಸಬಹುದು.

## ಬೆಳಗಾವಿಯಿಂದ 18 ರೌಡಿಶೀಟರ್‌ಗಳ ಗಡಿಪಾರು

# ಟಗರು ಬಾಯ್ಸ್, ಹುಲಿ ಬಾಯ್ಸ್‌ಗೆಲ್ಲ ಅವಕಾಶವಿಲ್ಲ, ಓನ್ಲಿ ಗುಡ್‌ಬಾಯ್ಸ್‌ಗಷ್ಟೇ ಅವಕಾಶ: ಎಸ್‌ಪಿ ರಾಮರಾಜನ್



**ಬೆಳಗಾವಿ, ಮೇ 7:** ಕೊಲೆ, ಕೊಲೆ ಯತ್ನ, ಮಟಕಾ ಸೇರಿ ಮತ್ತಿತರ ಪ್ರಕರಣಗಳಲ್ಲಿ ಗುರುತಿಸಿಕೊಂಡಿರುವ 18 ರೌಡಿ ಶೀಟರ್‌ಗಳನ್ನು ಬೆಳಗಾವಿ ಜಿಲ್ಲೆಯಿಂದ ಗಡಿಪಾರು ಮಾಡಲಾಗಿದೆ. ಈ ಆರೋಪಿಗಳು ಟಗರು ಬಾಯ್ಸ್, ಹುಲಿ ಬಾಯ್ಸ್, ಬ್ಯಾಡ್ ಬಾಯ್ಸ್ ಅಂತೆಲ್ಲಾ ಹವಾ ಕ್ರಿಯೇಟ್ ಮಾಡುತ್ತಿದ್ದರು. ಇಂತವರಿಗೆಲ್ಲಾ ಜಿಲ್ಲೆಯಲ್ಲಿ ಅವಕಾಶ ಇಲ್ಲ. ಇಲ್ಲೇನಿದ್ದರೂ ವೆರಿ ಗುಡ್ ಬಾಯ್ಸ್‌ಗೆ ಮಾತ್ರ ಅವಕಾಶ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್ ಖಡಕ್ ಎಚ್ಚರಿಕೆ ನೀಡಿದರು.


ಮಾಧ್ಯಮಗೋಷ್ಠಿ ನಡೆಸಿ, ಇವರೆಲ್ಲಾ ಅಪರಾಧಿಕ ಹಿನ್ನೆಲೆ ಹೊಂದಿದ್ದು, ರೌಡಿಸಂ ಬ್ಯಾಕ್ ಗ್ರೌಂಡ್ ಮ್ಯೂಸಿಕ್ ಹಾಕಿ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್‌ಲೋಡ್ ಮಾಡುತ್ತಿದ್ದರು. ಇದು ಸಮಾಜದ ಮೇಲೆ ದುಷ್ಪರಿಣಾಮ ಬೀರುತ್ತಿತ್ತು. ಇದನ್ನು ತಡೆಗಟ್ಟುವ ಉದ್ದೇಶದಿಂದ ಕಳೆದ ಒಂದೂವರೇ ತಿಂಗಳಲ್ಲಿ 18 ಆರೋಪಿಗಳನ್ನು ಜಿಲ್ಲೆಯಿಂದ ಗಡಿಪಾರು ಮಾಡಿ ಆದೇಶಿಸಲಾಗಿದೆ ಎಂದರು.:

ಬೆಳಗಾವಿ ಜಿಲ್ಲೆಯಲ್ಲಿ ಬದುಕಬೇಕಾದರೆ ಎಲ್ಲರೂ ಗುಡ್ ಬಾಯ್ಸ್ ಆಗಿರಬೇಕು. ಸಮಾಜದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಆದರೆ ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ಹವಾ ಸೃಷ್ಟಿಸಲು ಮಕ್ಕಳನ್ನು ಬಳಸಿಕೊಂಡು ರೌಡಿಸಂ ಪ್ರದರ್ಶಿಸುತ್ತಿರುವುದನ್ನು ಸಹಿಸಲ್ಲ. ಆದೇಶ ಪಾಲಿಸದಿದ್ದರೆ ಸಂಬಂಧಪಟ್ಟ ರೌಡಿ ಶೀಟರ್‌ಗಳ ವಿರುದ್ಧ ಗಡಿಪಾರು ಕ್ರಮ ಸೇರಿದಂತೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಜಿಲ್ಲೆಯಾದ್ಯಂತ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ವಹಿಸಲಾಗಿದೆ.

ಸಮಾಜದಲ್ಲಿ ಶಾಂತಿ, ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಪೋಷಕರು ತಮ್ಮ ಮಕ್ಕಳನ್ನು ಇಂಥ ಚಟುವಟಿಕೆಗಳಿಂದ ದೂರವಿಡಬೇಕು. ಚಾಕು ಹಿಡಿದು, ತಲವಾರನಿಂದ ಕೇಕ್ ಕಟ್ ಮಾಡಿದ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್‌ಲೋಡ್ ಮಾಡಿದ್ದರೆ ಈಗಲೇ ತೆಗೆದುಬಿಡಿ, ಇಲ್ಲದಿದ್ದರೆ ಕಠಿಣ ಕಾನೂನು ಕ್ರಮ ನಿಶ್ಚಿತ ಎಂದು ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್ ಖಡಕ್ ಎಚ್ಚರಿಕೆ ರವಾನಿಸಿದ್ದಾರೆ.

# ಅಂಬೇಡ್ಕರ್ ಮೂರ್ತಿ ಅನಾವರಣ: ಸಾಮಾಜಿಕ ಸಮಾನತೆಗೆ ಮೀಸಲಾತಿ ಅನಿವಾರ್ಯ: ಡಾ.ಶರಣಪ್ರಕಾಶ ಪಾಟೀಲ್

**ಕಲಬುರಗಿ, ಮೇ. 7:** ಭಾರತ ದೇಶಕ್ಕಲ್ಲದೇ ಇಡೀ ಜಗತ್ತಿಗೆ ಆದರ್ಶ ವ್ಯಕ್ತಿಯಾಗಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರು ನೀಡಿದ ಸಂವಿಧಾನದಡಿ ನಾವೆಲ್ಲರು ಸಮಾನವಾಗಿ ಬದುಕು ನಡೆಸುತಿದ್ದೇವೆ. ಅವರ ತತ್ವಗಳು ನಿತ್ಯದ ಬದುಕಿನಲ್ಲಿ ಅಳವಡಿಸಿ ಕೊಳ್ಳುವದು ಅವಶ್ಯವಾಗಿದೆ. ಸಮಾಜದಲ್ಲಿ ಸಾಮಾಜಿಕ ಸಮಾನತೆಗೆ ಮೀಸಲಾತಿ ತುಂಬಾ ಅಗತ್ಯವಾಗಿದೆ. ಅದರಿಂದಲೇ ಸ್ವಾತಂತ್ರ್ಯಾ ನಂತರ ಲಕ್ಷ ಲಕ್ಷ ಕುಟುಂಬಗಳು ಶೋಷಣೆಯಿಂದ ಮೇಲೇಳಲು ಸಾಧ್ಯವಾಗಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲಾಭಿವೃದ್ಧ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.



ಸಾಧಕರಿಗೆ ಸನ್ಮಾನ: ವಿವಿಧ ಕ್ಷೇತ್ರದ ಸಾಧಕರಾದ ಸಿಪಿಐ ಮಹಾದೇವಪ್ಪ ದಿಡ್ಡಿಮನಿ, ಪಿಎಸ್ಐ ನಾಗಮ್ಮ ದಂಡು, ಪಿಡಿಓ ಮಹೇಶ, ಶ್ರೀಕಾಂತ ಗಡ್ಡಿಮನಿ, ವಿಜಯಕುಮಾರ, ನಾಗೇಂದ್ರ ಮೈಲಾರಿ, ಅಬ್ದುಲ್ ರಹೆಮಾನ, ವೆಂಕಟೇಶ, ಅನೀಲಕುಮಾರ ಅವರನ್ನು ವಿಶೇಷವಾಗಿ ಸತ್ಕರಿಸಲಾಯಿತು.

ಜಿಲ್ಲೆಯ ರಂಜೋಳ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರವರ ಮೂರ್ತಿ ಅನಾವರಣ ಗೊಳಿಸಿದ ಮಾತನಾಡಿದ ಅವರು, ಆರ್ಥಿಕ ಅಸಮಾನತೆ ಹೋಗಲಾಡಿಸಿದ ಶ್ರೇಷ್ಠ ಅರ್ಥಶಾಸ್ತ್ರಜ್ಞರಾಗಿದ್ದ ಬಾಬಾ ಸಾಹೇಬರು ಜ್ಞಾನದ ಕಣಜವಾಗಿದ್ದಾರು. ಅವರು ರಚಿಸಿರುವ ಸಂವಿಧಾನದಲ್ಲಿ ಇಡೀ ಸಮಾಜ ಸಮಾನತೆಯಿಂದ ಬದುಕಬೇಕೆಂಬ ಆಶಯಗಳನ್ನು ಹೊಂದಿದೆ. ಸಮಾನತೆಯಿಲ್ಲದ ಸಮಾಜ ಎಂದರೆ ಅದಕ್ಕೆ ಗೌರವ ಇರುವುದಿಲ್ಲ. ಘನತೆ ಗೌರವ ಮತ್ತು ಸ್ವಾಭಿಮಾನಗಳು ಒಂದು ಗೌರವಯುತ ಸಮಾಜದ ಲಕ್ಷಣಗಳಾಗಿದ್ದು, ಡಾ.ಅಂಬೇಡ್ಕರ್ ಅವರು ಶೋಷಿತ ವರ್ಗದವರಲ್ಲಿ ಸ್ವಾಭಿಮಾನ ತುಂಬುವ ಕೆಲಸ ಮಾಡಿದರು. ಅಷ್ಟು ಮಾತ್ರವಲ್ಲದೇ ಅವರಿಗೆ ಸಂವಿಧಾನ ಬದ್ಧವಾಗಿ ಸೌಲಭ್ಯಗಳು ದೊರೆಯುವಂತೆ ಮಾಡಿದರು ಎಂದರು.

ಬಿಜೆಪಿ ಜಿಲ್ಲಾ ಉಪಾಧ್ಯಕ್ಷೆ ಸಂತೋಷಿರಾಣಿ ಪಾಟೀಲ್ ತೆಲ್ಲೂರ ಮಾತನಾಡಿ, ಬಾಬಾ ಸಾಹೇಬರು ಸಂವಿಧಾನದ ಮೂಲಕ ಮಹಿಳಾ ಸಮಾನತೆಯ ಹಕ್ಕನ್ನು ನಮಗೆ ನೀಡಿದ್ದಾರೆ. ಉತ್ತಮ ಬದುಕಿಗೆ ಮಾರ್ಗದರ್ಶನ ಮಾಡಿದ್ದಾರೆ. ಅವರ ತತ್ವಗಳು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು, ಸಮಸಮಾಜ ನಿರ್ಮಾಣಕ್ಕಾಗಿ ಬುದ್ಧ, ಬಸವ, ಅಂಬೇಡ್ಕರ ಕೊಡುಗೆ ಅನನ್ಯವಾದದ್ದು. ಈ ಮೂವರು ದಾರ್ಶನಿಕರು ನಮ್ಮ ದೇಶದ ಸಮಸ್ತ ಕುಲಕೋಟಿಗಳನ್ನು ಉದ್ಧರಿಸಲು ಜನರಿಸಿದವರು ಎಂದರು.

ಬೀದರನ ಭಂತೆ ವರಜ್ಯೋತಿ, ಕೋಡ್ಲಾ ಉರಿಲಿಂಗ ಪೆದ್ದಿಮಠದ ಜ್ಞಾನಪ್ರಕಾಶ ಸ್ವಾಮೀಜಿ, ಗುರುಮಠಕಲ್‌ನ ಶಾಂತವೀರ ಮುರುಘರಾಜೇಂದ್ರ ಸ್ವಾಮೀಜಿ, ಮೂರ್ತಿ ಸ್ಥಾಪನಾ ಸಮಿತಿ ಅಧ್ಯಕ್ಷ ಸತೀಶರೆಡ್ಡಿ ಪಾಟೀಲ್ ಮಾತನಾಡಿದರು.

ಕಲಬುರಗಿ ಕಾಡಾ ಮಾಜಿ ಅಧ್ಯಕ್ಷ ಮಹಾಂತಪ್ಪ ಸಂಗಾವಿ, ತಾಪಂ ಮಾಜಿ ಸದಸ್ಯ ಜೈಭೀಮ ಊಡಗಿ, ಛಲವಾದಿ ಸಮಾಜದ ತಾಲೂಕು ಅಧ್ಯಕ್ಷ ಶಿವಕುಮಾರ ತೊಟ್ನಳ್ಳಿ, ಪುರಸಭೆ ಮಾಜಿ ಅಧ್ಯಕ್ಷ ವೀರೇಂದ್ರ ರುದ್ನೂರ, ಪ್ರಮುಖರಾದ ನಾರಾಯಣರೆಡ್ಡಿ ಶೇರಿಕಾರ, ಅಬ್ದುಲ್ ರಶೀದ್, ನರಸಿಂಹರೆಡ್ಡಿ ರಂಜೋಳ, ಗೌತಮ ಬೊಮ್ನಳ್ಳಿ, ಮಹಾಂತೇಶ ಸುತಾರ, ರಾಮಚಂದ್ರ ಗುತ್ತೇದಾರ, ಸೂಗಪ್ಪ ಬಳಗಾರ, ರಾಜು ಬಳಗಾರ, ಶ್ರೀಶೈಲ್ ಬಟಗೇರಾ, ರಾಮ ಗೋಪಾಲಜೀ ಮರಾಠ, ಬಸವರಾಜ ಜಾಕನಳ್ಳಿ, ಶ್ರೀನಿವಾಸ ಸಂಗಾವಿ ಸೇರಿದಂತೆ ಇನ್ನಿತರರಿದ್ದರು. ನಾಗೇಂದ್ರ ಮೈಲಾರಿ ಸ್ವಾಗತಿಸಿದರು.



ಬೆಂಗಳೂರಿನ ಗಾಂಧಿನಗರದಲ್ಲಿ ಗುರುವಾರ ಕೆಆರ್‌ಆರ್‌ಎಸ್‌ನ ಹೊಸ ಕಚೇರಿಯ ಉದ್ಘಾಟನಾ ಸಮಾರಂಭದಲ್ಲಿ ಕೆಆರ್‌ಆರ್‌ಎಸ್ ಮತ್ತು ಹಸಿರು ಸೇನೆ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್, ಡಿಎಸ್‌ಎಸ್ ನಾಯಕ ಎನ್ ಮೂರ್ತಿ ಮತ್ತು ಇತರರು ಪಾಲ್ಗೊಂಡಿದ್ದರು.

# ಆಧ್ಯಾತ್ಮ ಸಂಪತ್ತಿನಿಂದ ಸುಖ-ಶಾಂತಿ ಪ್ರಾಪ್ತಿ: ರಂಭಾಪುರಿ ಜಗದ್ಗುರುಗಳು

**ಲಕ್ಷ್ಮೇಶ್ವರ,ಮೇ.7–**ಸಿರಿತನ ಬಂದಾಗ ಹಿಗ್ಗದೇ ಬಡತನ ಬಂದಾಗ ಕುಗ್ಗದೇ ಕ್ರಿಯಾಶೀಲನಾಗಿ ಬಾಳುವುದೇ ಜೀವನದ ಗುರಿಯಾಗಬೇಕಾಗಿದೆ. ಹೊರಗಿನ ಶ್ರೀಮಂತಿಕೆ ಹೆಚ್ಚಿಸಿಕೊಳ್ಳುವುದರ ಜೊತೆಗೆ ಒಳಗಿರುವ ಆಧ್ಯಾತ್ಮ ಸಂಪತ್ತನ್ನು ಹೆಚ್ಚಿಸಿಕೊಳ್ಳಬೇಕಾಗಿದೆ. ಆಧ್ಯಾತ್ಮ ಸಂಪತ್ತಿನಿಂದ ಜೀವನದಲ್ಲಿ ಸುಖ ಶಾಂತಿ ಪ್ರಾಪ್ತವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಗುರುವಾರ ಹಾಲೇವಾಡಿಮಠದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದ ರಜತ ಮಹೋತ್ಸವ-ಜಯಂತ್ಯುತ್ಸವ ಹಾಗೂ ಮಾತಾಪಿತೃಗಳ ಪುಣ್ಯಸ್ಮರಣೆ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸತ್ಯ ಶುದ್ಧವಾದ ಜೀವನಕ್ಕೆ ಆದರ್ಶ ಮೌಲ್ಯಗಳ ಪರಿಪಾಲನೆಯ ಅಗತ್ಯವಿದೆ. ಧರ್ಮದ ವೃಕ್ಷ ಬರಿ ವೃಕ್ಷವಲ್ಲ. ಅದೊಂದು ಅದ್ಭುತ ಅಶ್ವತ್ಥ ವೃಕ್ಷ. ಸಮೃದ್ಧಿ ಶಾಂತಿಯ ತಂಗಾಳಿ ನೀಡುವ ಹೆಮ್ಮರ. ಆಚಾರ್ಯರು ಋಷಿ ಮುನಿಗಳು ಸಾಧು ಸಂತ ಮಹಾಂತರು ಜ್ಞಾನ ಸುಧೆಯನ್ನು ಹಂಚುವುದರ ಮೂಲಕ ಇತರರ ಬಾಳು ಬೆಳಗಿಸುತ್ತಾರೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಯುಗಪುರುಷರಾಗಿ ಜಾತಿ, ಮತ, ಪಂಥಗಳೆನ್ನದೇ ಸಕಲರ ಏಳಿಗೆಗೆ ಶ್ರಮಿಸಿದ್ದಾರೆ. ಅವರು ಕೊಟ್ಟ ಸಂದೇಶ ತೋರಿದ ದಾರಿ ನಮ್ಮೆಲ್ಲರ ಬಾಳಿಗೆ ಬೆಳಕು ತೋರಿವೆ. ಹಾಲೇವಾಡಿಮಠ ಸಹೋದರರು ಸುಂದರ ಮಂದಿರ ನಿರ್ಮಿಸಿ 25 ವರುಷ ತುಂಬಿದ ಸಂದರ್ಭದಲ್ಲಿ ರಜತ ಮಹೋತ್ಸವ ಆಚರಿಸುತ್ತಿರುವುದು ತಮಗೆ ಸಂತಸ ತಂದಿದೆ ಎಂದರು.

ಸಮಾರಂಭ ಉದ್ಘಾಟಿಸಿದ ಆನಂದ ಮೆಕ್ಕಿ ಮಾತನಾಡಿ ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮ ಶ್ರದ್ಧೆ ಮತ್ತು ಸದಾಚಾರ ಬೆಳೆದು ಬರಬೇಕಾಗಿದೆ. ಈ ದಿಶೆಯಲ್ಲಿ ಹಾಲೇವಾಡಿಮಠ ಸಹೋದರರ ಕಾರ್ಯ ಸ್ತುತ್ಯವಾದುದೆಂದರು. ಚಂಬಣ್ಣ ಬಾಳಿಕಾಯಿ ಅವರು ಭಾವಚಿತ್ರ ಬಿಡುಗಡೆ ಮಾಡಿ ಮಾತನಾಡಿ ಹಾಲೇವಾಡಿಮಠ ಬಂಧುಗಳು ಕೈಗೊಂಡಿರುವ ಧಾರ್ಮಿಕ ಕಾರ್ಯಗಳು ಇತರರಿಗೆ ಸ್ಫೂರ್ತಿದಾಯಕವಾಗಿವೆ ಎಂದರು. ಗದಗ ಸರ್ಕಾರಿ ಮಹಿಳಾ ಕಾಲೇಜಿನ ಡಾ॥ ಸಿದ್ಧಲಿಂಗೇಶ ಸಜ್ಜನಶೆಟ್ರ ಉಪನ್ಯಾಸ ನೀಡಿದರು. ವೀರೇಶ ಕೂಗು, ವಿಜಯ ಮಹಾಂತಶೆಟ್ಟರ, ಕುಬೇರಪ್ಪ ಮಹಾಂತಶೆಟ್ಟರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ನೇತೃತ್ವ ವಹಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ದುಡಿಮೆಯ ಬದುಕಿನಿಂದ ಉತ್ಕರ್ಷ ಸಾಧ್ಯ. ನಡೆಯುವ ಕಾಲು ದುಡಿಯುವ ಕೈಗಳು ಇರದಿದ್ದರೆ ಏನೂ ಮಾಡಲಾಗದು. ಅರಮನೆ ಇರಲಿ ಗುಡಿಸಲೇ ಇರಲಿ. ದುಡಿಯುವುದರಲ್ಲಿ ಉತ್ಸಾಹ ಇದ್ದರೆ ಬದುಕು ಬಲಗೊಳ್ಳುತ್ತದೆ ಎಂದರು. ಡಾ.ಪ್ರಭುಸ್ವಾಮಿ ಜಿ. ಹಾಲೇವಾಡಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ ನಡೆಯಿತು. ಪಾರ್ವತಿ ಕಳ್ಳಿಮಠ ಪ್ರಾರ್ಥನೆ ಸಲ್ಲಿಸಿದರು. ಹೊನ್ನತ್ತಿಯ ಬಸವರಾಜ ಹಿರೇಮಠ ಭಕ್ತಿಗೀತೆ ಹಾಡಿದರು. ಸವಣೂರಿನ ಡಾ॥ ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಸಮಾರಂಭದ ನಂತರ ಅನ್ನದಾಸೋಹ ಜರುಗಿತು.

ಸಮಾರಂಭಕ್ಕೂ ಮುನ್ನ ಹಾಲೇವಾಡಿಮಠದ ಆವರಣದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಶುಭ ಹಾರೈಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದ ಅಂಗವಾಗಿ ನಗರದ ಪ್ರಮುಖ ರಸ್ತೆಯಲ್ಲಿ ರಸ್ತೆ ಮೂಲಕ ಶ್ರೀ ಜಗದ್ಗುರು ರೇಣುಕಾಚಾರ್ಯರ ಭವ್ಯ ಭಾವಚಿತ್ರದ ಸಾರೋಟ ಮೆರವಣಿಗೆ ಸಂಭ್ರಮದಿಂದ ಜರುಗಿತು. ಗುರುವಾರ ಸಂಜೆ ಸಂಸದ ಬಸವರಾಜ ಬೊಮ್ಮಾಯಿ ಮುಕ್ತಿಮಂದಿರ ಕ್ಷೇತ್ರಕ್ಕೆ ಭೇಟಿ ನೀಡಿ ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಗದ್ದುಗೆ ದರ್ಶನ ಮಾಡಿ ಪ್ರಸ್ತುತ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಆಶೀರ್ವಾದ ಪಡೆದರು.

# ಎಸ್.ಎಸ್.ಎಲ್.ಸಿ: ಕಲಬುರಗಿಯ ಸರ್ಕಾರಿ ಶಾಲೆಗಳ ಫಲಿತಾಂಶ ರಾಜ್ಯ ಸರಾಸರಿಗಿಂತ ಶೇ.9.9 ಹೆಚ್ಚು



**ಕಲಬುರಗಿ, ಮೇ. 7:** ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯದ ಒಟ್ಟಾರೆ ಫಲಿತಾಂಶದಲ್ಲಿ ಕಲಬುರಗಿ ಜಿಲ್ಲೆ ಕೊನೆಯ ಸ್ಥಾನದಲ್ಲಿರಬಹುದು. ಆದರೆ ಜಿಲ್ಲೆಯ ಸರ್ಕಾರಿ ಶಾಲೆಗಳು ಈ ಬಾರಿ ಅತ್ಯುತ್ತಮ ಫಲಿತಾಂಶ ದಾಖಲಿಸುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿವೆ. ಜಿಲ್ಲೆಯು ಒಟ್ಟಾರೆಯಾಗಿ ಶೇ. 85.94 ರಷ್ಟು ಫಲಿತಾಂಶ ಹೊಂದುವ ಮೂಲಕ ರಾಜ್ಯ ಸರಾಸರಿಗಿಂತ ಶೇ. 9.9 ರಷ್ಟು ಅಧಿಕ ಸಾಧನೆ ಮಾಡಿ, ರಾಜ್ಯದಲ್ಲೇ ಅತಿಹೆಚ್ಚು ಸುಧಾರಣೆ ಕಂಡ ಎರಡನೇ ಜಿಲ್ಲೆಯಾಗಿ ಕಲಬುರಗಿ ಹೊರಹೊಮ್ಮಿದೆ ಎಂದು ಜಿಲ್ಲಾ ಪಂಚಾಯತ್ ಸಿಇಓ ಭಂವರ್ ಸಿಂಗ್ ಮೀನಾ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ 2025-26ನೇ ಸಾಲಿನ ಜಿಲ್ಲಾವಾರು ಮತ್ತು ತಾಲೂಕುವಾರು ಪರೀಕ್ಷಾ ಫಲಿತಾಂಶದಲ್ಲಿ ಜಿಲ್ಲೆಯ ಸರಕಾರಿ ಶಾಲೆಗಳು ಫಲಿತಾಂಶದಲ್ಲಿ ಭಾರೀ ಏರಿಕೆ ಕುರಿತು ಎಲ್ಲಾ ಸರಕಾರಿ ಶಾಲೆಯ ಮುಖ್ಯೋಪಾಧ್ಯರಿಗೆ ಸನ್ಮಾನಿಸಿ ಮಾತನಾಡಿದ ಅವರು, 298 ಸರ್ಕಾರಿ ಪ್ರೌಢಶಾಲೆಗಳ ಪೈಕಿ ಜಿಲ್ಲೆಯ ಒಟ್ಟು 109 ಶಾಲೆಗಳು ಶೇ.100 ರಷ್ಟು ಫಲಿತಾಂಶ ದಾಖಲಿಸಿದ್ದು, ಅದರಲ್ಲಿ 61 ಸರ್ಕಾರಿ ಶಾಲೆಗಳಾಗಿರುವುದು ವಿಶೇಷ ಸಾಧನೆಯಾಗಿದೆ ಎಂದರು. ಜಿಲ್ಲೆಯ ಶೈಕ್ಷಣಿಕ ಇತಿಹಾಸದಲ್ಲೇ ಹಿಂದೆಂದೂ ಕಾಣದಂತಹ ಅಭೂತಪೂರ್ವ ಬದಲಾವಣೆಯೊಂದು ನಡೆದಿದ್ದು, 2024-25ನೇ ಸಾಲಿನ ಪರೀಕ್ಷೆ-1 ರಲ್ಲಿದ್ದ ಶೇ.42.43 ರಷ್ಟು ಫಲಿತಾಂಶವು 2025-26ನೇ ಸಾಲಿನಲ್ಲಿ ಬರೋಬ್ಬರಿ ಶೇ.85.06 ಕ್ಕೆ ಏರಿಕೆಯಾಗಿದೆ. ಒಟ್ಟು 37,352 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 31,770 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಆಡಳಿತಾತ್ಮಕ ಶೈಕ್ಷಣಿಕ ಸುಧಾರಣೆಗಳು ಯಶಸ್ವಿಯಾಗಿವೆ. ಕಳೆದ ವರ್ಷದ ಫಲಿತಾಂಶಕ್ಕೆ ಹೋಲಿಸಿದರೆ ಈ ವರ್ಷ ಶೈಕ್ಷಣಿಕ ಪ್ರಗತಿಯಲ್ಲಿ ಸುಮಾರು ಶೇ. 15 ರಷ್ಟು ಅಂತರವನ್ನು ಸರಿದೂಗಿಸಲಾಗಿದೆ. ರಾಜ್ಯ ಸರಾಸರಿಯ ಜೊತೆ ಹೋಲಿಸಿದರೆ ಜಿಲ್ಲೆಯ ಶಾಲಾ ಶಿಕ್ಷಣದ ಫಲಿತಾಂಶದಲ್ಲಿನ ವ್ಯತ್ಯಾಸವನ್ನು ಗಮನಾರ್ಹವಾಗಿ ತಗ್ಗಿಸಲಾಗಿದೆ. ಈ ಅಭಿವೃದ್ಧಿಯ ಹಿಂದೆ ಶಿಕ್ಷಕರ, ಅಧಿಕಾರಿಗಳ ಹಾಗೂ ವಿದ್ಯಾರ್ಥಿಗಳ ಶ್ರಮವಿದ್ದು, ಮುಂಬರುವ ದಿನಗಳಲ್ಲಿ ಇನ್ನಷ್ಟು ಉತ್ತಮ ಸಾಧನೆ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಸಾದನೆ ಮಾಡಿದ ಸರಕಾರಿ ಶಾಲೆಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನಿರ್ದೇಶಕ ಬಸವರಾಜ ಶೆಟ್ಟಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಶಂಕರಮ್ಮ ಡವಳಗಿ ಹಾಗೂ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

## ರಾಜ್ಯ, ಕೇಂದ್ರ ಸರ್ಕಾರಕ್ಕೆ ಶಾಸಕ ಬೇಳೂರು ಗೋಪಾಲಕೃಷ್ಣ ಎಚ್ಚರಿಕೆ

# ಶಾಸಕ ಸ್ಥಾನ ಹೋದರೂ ಚಿಂತೆಯಿಲ್ಲ, ಬೇಸೂರು ಅಣುವಿದ್ಯುತ್ ಸ್ಥಾವರಕ್ಕೆ ಅವಕಾಶ ನೀಡಲ್ಲ

**ಶಿವಮೊಗ್ಗ, ಮೇ 7:** ಶಾಸಕ ಸ್ಥಾನ ಹೋದರೂ ಚಿಂತೆಯಿಲ್ಲ, ಯಾವುದೇ ಕಾರಣಕ್ಕೂ ಬೇಸೂರು ಅಣುವಿದ್ಯುತ್ ಸ್ಥಾವರ ಸ್ಥಾಪನೆಗೆ ಅವಕಾಶ ನೀಡುವುದಿಲ್ಲ ಎಂದು ಸಾಗರ ವಿಧಾನಸಭಾ ಕ್ಷೇತ್ರದ ಶಾಸಕ ಗೋಪಾಲಕೃಷ್ಣ ಬೇಳೂರು ಅವರು ರಾಜ್ಯ ಮತ್ತು ಕೇಂದ್ರ ಸರ್ಕಾರಕ್ಕೆ ಖಡಕ್ ಎಚ್ಚರಿಕೆ ನೀಡಿದ್ದಾರೆ.



ಜಿಲ್ಲೆಯ ಸಾಗರದ ಗಾಂಧಿ ಮೈದಾನದಲ್ಲಿ ನಡೆದ 'ಬೇಸೂರು ಅಣುವಿದ್ಯುತ್ ಸ್ಥಾವರ ವಿರೋಧಿ ಬೃಹತ್ ಪ್ರತಿಭಟನಾ ಸಭೆ'ಯನ್ನುದ್ದೇಶಿಸಿ ಗುರುವಾರ ಮಾತನಾಡಿದ ಅವರು, ಬೇಸೂರು ಅಣು ವಿದ್ಯುತ್ ಸ್ಥಾವರ ಕೇವಲ ಬೇಸೂರು ಭಾಗಕ್ಕೆ ಮಾತ್ರವಲ್ಲ, ರಾಜ್ಯಕ್ಕೇ ಬೇಡ. ನಾಡಿಗೆ ಬೆಳಕು ನೀಡಲು ಈಗಾಗಲೇ ಮಲೆನಾಡಿನ ಜನ ಮೂರು ಬಾರಿ ಭೂಮಿ ಕಳೆದುಕೊಂಡು ನಿರಾಶ್ರಿತರಾಗಿದ್ದಾರೆ. ಪದೇಪದೇ ಅಲೆಮಾರಿಗಳಂತಾಗಿರುವ ಜನರ ಮೇಲೆ ಇಂತಹ ಅಪಾಯಕಾರಿ ಯೋಜನೆಗಳನ್ನು ಹೇರುವುದನ್ನು ಸಹಿಸುವುದಿಲ್ಲ ಎಂದು ಗುಡುಗಿದ್ದಾರೆ.

ಅಣು ಸ್ಥಾವರದಂತಹ ಯೋಜನೆಗಳು ಪರಿಸರ ಮತ್ತು ಜನರ ಮೇಲೆ ಬೀರುವ ಮಾರಕ ಪರಿಣಾಮಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಈ ಭಾಗದ ಜನರನ್ನು ಸಂರಕ್ಷಿಸಲು ಎಂತಹ ತ್ಯಾಗಕ್ಕೂ ಸಿದ್ಧನಿದ್ದೇನೆ. ಅಧಿಕಾರಕ್ಕಿಂತ ಜನರ ಹಿತವೇ ಮುಖ್ಯ. ರಾಜ್ಯ ಸರ್ಕಾರದ ಹಂತದಲ್ಲಿ ಈ ಯೋಜನೆಗೆ ಯಾವುದೇ ಕಾರಣಕ್ಕೂ ಭೂಮಿ ಮಂಜೂರು ಆಗದಂತೆ ವೈಯಕ್ತಿಕವಾಗಿ ಜವಾಬ್ದಾರಿ ತೆಗೆದುಕೊಳ್ಳುತ್ತೇನೆ. ಮುಖ್ಯಮಂತ್ರಿಗಳು ಮತ್ತು ಸಂಬಂಧಪಟ್ಟ ಸಚಿವರ ಮೇಲೆ ಒತ್ತಡ ಹೇರಿ ಈ ಪ್ರಕ್ರಿಯೆಯನ್ನು ಇಲ್ಲಿಯೇ ತಡೆಯುತ್ತೇನೆ ಎಂದು ಭರವಸೆ ನೀಡಿದ್ದಾರೆ.

ಇದೇ ವೇಳೆ ಸಂಸದ ಬಿ.ವೈ. ರಾಘವೇಂದ್ರ ಅವರ ಹೆಸರನ್ನು ಉಲ್ಲೇಖಿಸಿದ ಶಾಸಕರು, ನಾನು ರಾಜ್ಯ ಮಟ್ಟದಲ್ಲಿ ಈ ಯೋಜನೆಯನ್ನು ತಡೆಯುತ್ತೇನೆ. ಕೇಂದ್ರ ಸರ್ಕಾರದ ಹಂತದಲ್ಲಿ ಈ ಯೋಜನೆಗೆ ಅನುಮತಿ ಸಿಗದಂತೆ ನೋಡಿಕೊಳ್ಳುವ ಜವಾಬ್ದಾರಿ ಸಂಸದರ ಮೇಲಿದೆ. ಅವರು ಕೇಂದ್ರದ ಮೇಲೆ ಒತ್ತಡ ಹಾಕಿ ಯೋಜನೆಯನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

ಜನರಿಗೆ ಮಾರಕವಾಗುವ ಯಾವುದೇ ಯೋಜನೆಯನ್ನು ಮಲೆನಾಡಿನ ಮಣ್ಣಿನಲ್ಲಿ ಅನುಷ್ಠಾನಕ್ಕೆ ತರಲು ಬಿಡುವುದಿಲ್ಲ. ಈ ಹೋರಾಟ ಕೇವಲ ಇವತ್ತಿಗೆ ಮುಗಿಯುವುದಿಲ್ಲ, ಯೋಜನೆ ಕೈಬಿಡುವ ತನಕ ಜನರೊಂದಿಗೆ ನಾನಿರುತ್ತೇನೆ ಎಂದು ಬೇಳೂರು ಈ ಸಂದರ್ಭದಲ್ಲಿ ಸ್ಪಷ್ಟಪಡಿಸಿದರು.

## ನಾಯಕತ್ವ ಗೊಂದಲ ಬಗೆಹರಿಯದಿದ್ದರೆ ಸರ್ಕಾರ, ಪಕ್ಷದ ಮೇಲೆ ಪರಿಣಾಮ: ರಾಜಣ್ಣ ಎಚ್ಚರಿಕೆ

**ಮೈಸೂರು, ಮೇ 7:** ರಾಜ್ಯದಲ್ಲಿನ ನಾಯಕತ್ವ ಬದಲಾವಣೆಯ ಬಗ್ಗೆ ಇರುವ ಗೊಂದಲವನ್ನು ಹೈಕಮಾಂಡ್ ಬೇಗ ಬಗೆಹರಿಸಿದರೆ ಸರ್ಕಾರ ಹಾಗೂ ಪಕ್ಷಕ್ಕೂ ಒಳ್ಳೆಯದು ಎಂದು ಕಾಂಗ್ರೆಸ್ ಶಾಸಕ ಹಾಗೂ ಮಾಜಿ ಸಚಿವ ರಾಜಣ್ಣ ಹೇಳಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೈಸೂರಿನ ಮನೆಯ ಬಳಿ ಮಾಧ್ಯಮಗಳ ಜೊತೆ, ಸಿಎಂ ಸಿದ್ದರಾಮಯ್ಯ ಅವರು ಹೈಕಮಾಂಡ್ ಏನು ಹೇಳುತ್ತದೋ ಅದೇ ರೀತಿ ನಡೆದುಕೊಳ್ಳುತ್ತೇನೆ. ಹೈಕಮಾಂಡ್ ರಾಜ್ಯದಲ್ಲಿರುವ ಗೊಂದಲವನ್ನು ಬೇಗ ಬಗೆಹರಿಸಬೇಕು. ಇಲ್ಲದಿದ್ದರೆ ಸರ್ಕಾರ ಮತ್ತು ಪಕ್ಷದ ಮೇಲೆ ಪರಿಣಾಮ ಬೀರುತ್ತದೆ. ಈ ಕುರಿತಾಗಿ ನಾನು ಹೈಕಮಾಂಡ್ ಭೇಟಿ ಮಾಡಿದಾಗ ಖುದ್ದಾಗಿಯೂ ಹೇಳಿದ್ದೇನೆ, ಪತ್ರವನ್ನೂ ಬರೆದಿದ್ದೇನೆ ಎಂದರು. ಸಚಿವ ಸಂಪುಟ ವಿಸ್ತರಣೆಗೆ ಮುಕ್ತ ಅವಕಾಶ ಕೊಡಬೇಕು. ಇಲ್ಲದಿದ್ದರೆ ನಾಯಕತ್ವ ಬದಲಾವಣೆ ಬಗ್ಗೆ ತೀರ್ಮಾನ ಮಾಡಬೇಕು. ಏನೇ ಆದರೂ ಬೇಗ ಮಾಡಲಿ ಎಂದು ರಾಜಣ್ಣ ಒತ್ತಾಯಿಸಿದರು. ಕಾಂಗ್ರೆಸ್ ಪಕ್ಷದಲ್ಲಿ ಮುಖ್ಯಮಂತ್ರಿಯಾಗಲು ಒಂದು ಡಜನ್ ಜನರಿಗೆ ಅರ್ಹತೆ ಇದೆ. ಹೀಗಾಗಿ ಡಿ.ಕೆ.ಶಿವಕುಮಾರ್ ಆಸೆ ಪಡುವುದರಲ್ಲಿ ತಪ್ಪಿಲ್ಲ ಎಂದು ತಿಳಿಸಿದರು. ಸಿದ್ದರಾಮಯ್ಯ ಬದಲಾದರೆ ಕಾಂಗ್ರೆಸ್ ಪಕ್ಷಕ್ಕೆ ಕಷ್ಟ ಆಗಲಿದೆಯೇ ಎಂಬ ಪ್ರಶ್ನೆಗೆ, ನಮ್ಮದು ರಾಷ್ಟ್ರೀಯ ಪಕ್ಷ. ಈ ವಿಚಾರವನ್ನು ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದರು.

# ಲಂಚ ದೂರು: ದಾವಣಗೆರೆ ಪಾಲಿಕೆ ಕಚೇರಿ ಮೇಲೆ ಲೋಕಾ ಕಾರ್ಯಾಚರಣೆ




**ದಾವಣಗೆರೆ, ಮೇ.7:** ನಗರದ ರಾಜೀವ್ ಗಾಂಧಿ ಬಡಾವಣೆಯಲ್ಲಿರುವ ಮಹಾನಗರ ಪಾಲಿಕೆಯ ವಲಯ-1ರ ಕಚೇರಿಯಲ್ಲಿ ಗುರುವಾರ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ. ಸಾರ್ವಜನಿಕ ಕೆಲಸಗಳಿಗಾಗಿ ಸಿಬ್ಬಂದಿ ಲಂಚ ಪಡೆಯುತ್ತಿದ್ದಾರೆ ಎಂಬ ದೂರಿನ ಮೇರೆಗೆ ಈ ದಾಳಿ ನಡೆದಿದೆ.

"ನಿಮ್ಮ ಸಂಬಳ ಎಷ್ಟು, ಪ್ರತಿ ತಿಂಗಳು ಕಟ್ಟುವ ಇಎಂಐ ಎಷ್ಟು, ಸಂಬಳಕ್ಕಿಂತ ಹೆಚ್ಚಿನ ಹಣದ ವಹಿವಾಟು ನಡೆಯುತ್ತಿರುವುದು ಹೇಗೆ" ಎಂದು ಅಧಿಕಾರಿಗಳು ಪ್ರಶ್ನಿಸಿ ಕ್ಲಾಸ್ ತೆಗೆದುಕೊಂಡಿದ್ದಾರೆ.


ವಿಶೇಷವಾಗಿ 'ಇ-ಸ್ವತ್ತು' ಸೇರಿದಂತೆ ಪಾಲಿಕೆಯ ವಿವಿಧ ಸೇವೆಗಳನ್ನು ಒದಗಿಸಲು ಸಿಬ್ಬಂದಿ ಸಾರ್ವಜನಿಕರಿಂದ ಹೆಚ್ಚಿನ ಹಣ ವಸೂಲಿ ಮಾಡುತ್ತಿದ್ದಾರೆ ಎಂಬ ಗಂಭೀರ ಆರೋಪಗಳು ಕೇಳಿ ಬಂದಿದ್ದವು. ಈ ಹಿನ್ನೆಲೆಯಲ್ಲಿ ದಾಳಿ ನಡೆಸಿರುವ ತಂಡವು, ಕಳೆದ ಎರಡು ಗಂಟೆಗಳಿಂದ ಪಾಲಿಕೆಯ ಪ್ರತಿಯೊಬ್ಬ ನೌಕರನ ಬ್ಯಾಂಕ್ ಸ್ಟೇಟ್‌ಮೆಂಟ್‌ಗಳು ಮತ್ತು ಕಚೇರಿಯ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸುತ್ತಿದೆ. ಎರಡು ವಾಹನಗಳಲ್ಲಿ ಆಗಮಿಸಿದ ಎಂಟಕ್ಕೂ ಹೆಚ್ಚು ಅಧಿಕಾರಿಗಳ ತಂಡ ಈ ಕಾರ್ಯಾ ಚರಣೆಯಲ್ಲಿ ಪಾಲ್ಗೊಂಡಿದೆ.

ಲೋಕಾಯುಕ್ತ ಡಿವೈಎಸ್ಪಿ ಕಲಾವತಿ ಹಾಗೂ ಸಿಪಿಐ ಗುರು ಬಸವರಾಜ್ ಅವರ ನೇತೃತ್ವದಲ್ಲಿ ಈ ದಾಳಿ ನಡೆದಿದ್ದು, ಪ್ರಮುಖ ದಾಖಲೆಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿದು ಬಂದಿದೆ. ಅಧಿಕಾರಿಗಳ ಈ ದಿಢೀರ್ ಭೇಟಿಯಿಂದ ಪಾಲಿಕೆ ಕಚೇರಿಯಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ನುರನಕ್ಕಿ ಗ್ರಾಮದಲ್ಲಿ ಲಂಚ ಪಡೆಯುತ್ತಿದ್ದ ಸೆಸ್ಕಾಂ ಕಿರಿಯ ಇಂಜಿನಿಯರ್ ಅವರನ್ನು ಲೋಕಾಯುಕ್ತ ಪೊಲೀಸರು ರೆಡ್‌ಹ್ಯಾಂಡ್ ಆಗಿ ಹಿಡಿದಿದ್ದಾರೆ.

ನುರನಕ್ಕಿ ಸೆಸ್ಕಾಂ ಶಾಖೆಯ ಕಿರಿಯ ಇಂಜಿನಿಯರ್ ದೇವರಾಜು ಲೋಕಾಯುಕ್ತ ಬಲೆಗೆ ಬಿದ್ದಿರುವ ಅಧಿಕಾರಿ. ಶಶಾಂಕ್ ಎಂಬ ರೈತರು ತಮ್ಮ ಕೊಳವೆಬಾವಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ದೇವರಾಜು ಅವರ ಬಳಿ ಮನವಿ ಮಾಡಿದ್ದರು. ಈ ಕೆಲಸ ಮಾಡಿಕೊಡಲು ಅಧಿಕಾರಿ 5000 ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.

# ಮಾನವನ ದುರಾಸೆಗಾಗಿ ಬತ್ತಿಹೋದ ರಾಮತೀರ್ಥ: ಭಕ್ತರಿಗೆ ಬೇಸರ

**ಗೋಕರ್ಣ, ಮೇ7–** :ತಾಪಮಾನಏರಿಕೆ ಹಾಗೂ ಅನಧಿಕೃತ ಬೋರ್‌ವೆಲ್‌ನಿಂದಾಗಿ ಕಳೆದ ಕೆಲವು ವರ್ಷಗಳಿಂದ ಎಪ್ರಿಲ್, ಮೇ ತಿಂಗಳಿನಲ್ಲಿಯೇ ಇಲ್ಲಿಯ ರಾಮತೀರ್ಥ ಬತ್ತಿಹೋಗುತ್ತದೆ. ಇದರಿಂದಾಗಿ ರಾಮಮಂದಿರಕ್ಕೆ ಬರುವ ಭಕ್ತರು ಇಲ್ಲಿ ಸ್ನಾನ ಮಾಡಲಾಗದೇ ಹಿಂದಿರುಗು ವಂತಾಗಿದೆ.



ಮುಖ್ಯಕಡಲ ತೀರಕ್ಕೆ ಹೊಂದಿಕೊಂಡಿರುವ ರಾಮಮಂದಿರದ ಎದುರಿನಲ್ಲಿಯೇ ರಾಮತೀರ್ಥವಿದೆ. ಇಲ್ಲಿ ನಂದಿಯ ಬಾಯಲ್ಲಿಯೂ ಕುಡ ನೀರು ಹರಿಯುತ್ತಿತ್ತು. ಆದರೆ 2 ವರ್ಷಗಳ ಹಿಂದೆ ನಡೆದ ಗುಡ್ಡ ಕುಸಿತದಲ್ಲಿ ಅದು ಕೂಡ ಹಾನಿಗೆ ಒಳಗಾಗಿದೆ. ಇಷ್ಟಾದರೂ ನಂದಿಯ ಬಾಯಲ್ಲಿ ಸಣ್ಣ ಪ್ರಮಾಣದಝುರಿ ಬರುತ್ತಿದೆ.ಆದರೆರಾಮತೀರ್ಥದ ಮೂರು ನೀರು ಹರಿಯುವ ದ್ವಾರವು ಬತ್ತಿ ಹೋಗಿದೆ.

ಸಮುದ್ರ ಸ್ನಾನ ಮಾಡಿಕೊಂಡು ಬಂದ ನಂತರ ಭಕ್ತರು ಇಲ್ಲಿಯ ಸಿಹಿ ನೀರಿನಲ್ಲಿ ಸ್ನಾನ ಮಾಡುತ್ತಿದ್ದರು. ಇನ್ನು ಕೆಲವರು ರಾಮತೀರ್ಥದಲ್ಲಿಯೇ ಸ್ನಾನ ಮಾಡಲೆಂದು ಬರುತ್ತಿದ್ದರು. ಹಾಗೇ ಸುತ್ತಮುತ್ತಲಿನ ಅಂಗಡಿಯವರು, ಮನೆಯವರು ಕೂಡ ರಾಮತೀರ್ಥದ ನೀರನ್ನು ತೆಗೆದುಕೊಂಡು ಹೋಗುತ್ತಿದ್ದರು. ಆದರೆ ಈಗ ರಾಮತೀರ್ಥ ಸಂಪೂರ್ಣವಾಗಿ ಬತ್ತಿದ್ದರಿಂದಾಗಿ ಸಹಜವಾಗಿಯೇ ಇಲ್ಲಿಂದ ನೀರನ್ನು ಸಾಗಿಸಲು ಸಾಧ್ಯವಾಗುತ್ತಿಲ್ಲ.

# ರಾಜ್ಯದಲ್ಲಿ ಬಾಂಗ್ಲಾ ನುಸುಳುಕೋರರ ತಡೆಗೆ ಆಂದೋಲಾ ಶ್ರೀಗಳ ಆಗ್ರಹ

**ಕಲಬುರಗಿ, ಮೇ. 7:** ದೇಶದಲ್ಲಿ ವಿಧ್ವಂಸಕ ಕೃತ್ಯ ಎಸಗುತ್ತಿರುವ ಮತ್ತು ದೇಶದ ಜನಸಂಖ್ಯೆ ನಿಯಂತ್ರಣಕ್ಕೆ ಕಂಟಕವಾಗಿರುವ ಬಂಗ್ಲಾದೇಶದ ನುಸುಳುಕೋರರನ್ನು ಹೊರಹಾಕುವ ಪ್ರಕ್ರಿಯೆ ಕೇಂದ್ರ ಸರ್ಕಾರ ಜಾರಿಗೊಳಿಸಲಿದ್ದು, ಇದೀಗ ಈ ನುಸುಳುಕೋರರು ದಕ್ಷಿಣ ಭಾರತದಲ್ಲಿ ಕಾಂಗ್ರೆಸ್ ಆಡಳಿತವಿರುವ ಮತ್ತು ಬಿಜೆಪಿಯೇತರ ಆಡಳಿತ ಇರುವ ರಾಜ್ಯಗಳಲ್ಲಿ ಬಾಂಗ್ಲಾ ನುಸುಳುಕೋರರು ಭಾರಿ ದೊಡ್ಡ ಸಂಖ್ಯೆಯಲ್ಲಿ ವಲಸೆ ಬರುತ್ತಿದ್ದು, ಕೂಡಲೇ ಕರ್ನಾಟಕ ರಾಜ್ಯ ಸರ್ಕಾರವು ನುಸುಳುಕೋರರನ್ನು ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು. ಇಲ್ಲವಾದರೆ ನಿಮ್ಮ ಗಯಾರಂಟಿ ಯೋಜನೆಯ ಹಣವನ್ನೆಲ್ಲ ಅವರು ತಿಂದು ಹಾಕಿ ಕನ್ನಡಿಗರನ್ನು ಅನಾಥರನ್ನಾಗಿ ಮಾಡುತ್ತಾರೆ. ಈಗಾಗಲೇ ಆಸ್ಸಾಮ್ ಮತ್ತು ಪಶ್ಚಿಮ ಬಂಗಾಳದಲ್ಲಿ ಸೃಷ್ಟಿಸಿರುವ ಸಮಸ್ಯೆ ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲೂ ತಲೆ ಎತ್ತಲಿದೆ ಎಂದು ಶಿವಸೇನೆ ಕರ್ನಾಟಕ ರಾಜ್ಯಾಧ್ಯಕ್ಷ ಸಿದ್ದಲಿಂಗ ಸ್ವಾಮೀಜಿ ಎಚ್ಚರಿಕೆ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ಮೊದಲು ಕಮುನಿಸ್ಟರು ಅಕ್ರಮ ಬಂಗ್ಲಾದೇಶಿಯರಿಗೆ ಬಾಗಿಲು ತೆರೆದು ಸ್ವಾಗತಿಸುಇ ಅವರನ್ನು ತಮ್ಮ ಮತಬ್ಯಾಂಕ್ ಮಾಡಿಕೊಂಡು ದೇಶದ ಖಜಾನೆ ಲೂಟಿ ಮಾಡಿದರು. ಅನಂತರ ಮಮತಾ ಬ್ಯಾನರ್ಜಿ ಅವರ ನೇತೃತ್ವದಲ್ಲಿನ ತೃಣಮೂಲ ಕಾಂಗ್ರೆಸ್ ಪಕ್ಷವೂ ಕೂಡ ಇದೇ ಕೆಲಸ ಮಾಡಿತು. ಇದೀಗ ಮಮತಾ ದೀದೀ ಹೀನಾಯವಾಗಿ ಸೋಲನ್ನು ಅನುಭವಿಸಿದ್ದು, ಇದರಿಂದಾಗಿ ಆ ರಾಜ್ಯದಲ್ಲಿ ಬಿಜೆಪಿ ಅಧಿಕಾರವನ್ನು ಹಿಡಿಯಲಿದೆ. ಈ ಹಿಂದೆ ಕೇಂದ್ರದಲ್ಲಿನ ಬಿಜೆಪಿ ಸರ್ಕಾರವು ಪಶ್ಚಿಮ ಬಂಗಾಳ ಸೇರಿದಂತೆ ದೇಶದಲ್ಲಿನ ಬಾಂಗ್ಲಾ ನುಸುಳುಕೋರರನ್ನು ಗಡಿಪಾರು ಮಾಡಲು ನಿರ್ದೇಶನ ನೀಡಿತ್ತು. ಆದಾಗ್ಯೂ, ಬಿಜೆಪಿಯೇತರ, ಎನ್‌ಡಿಎಯೇತರ ರಾಜ್ಯ ಸರ್ಕಾರಗಳು ಕ್ರಮವನ್ನು ಕೈಗೊಂಡಿರಲಿಲ್ಲ. ಈಗ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರವು ಅಧಿಕಾರಕ್ಕೆ ಬರಲಿರುವುದರಿಂದ ಅಲ್ಲಿನ ಬಾಂಗ್ಲಾ ನುಸುಳುಕೋರರು ದಕ್ಷಿಣ ಭಾರತದ ಕಾಂಗ್ರೆಸ್ ಆಡಳಿತ ಇರುವ ರಾಜ್ಯಗಳಿಗೆ ವಲಸೆ ಬರುತ್ತಿದ್ದಾರೆ. ಅವರನ್ನು ಯಾವುದೇ ಕಾರಣಕ್ಕೂ ಕರ್ನಾಟಕದಲ್ಲಿ ನೆಲೆ ನೀಡಬಾರದು. ಹಾಗೇನಾದರೂ ನೆಲೆ ನೀಡಿದ್ದಾದರೆ, ಕರ್ನಾಟಕದ ಶಾಂತಿ ನೆಮ್ಮದಿ ಎಲ್ಲ ಹಾಳಾಗುತ್ತದೆ. ಅನಂತರ ಕಾಂಗ್ರೆಸ್ ಸರ್ಕಾರ ಪರಿತಪಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.



ಬಾಂಗ್ಲಾ ನುಸುಳುಕೋರರ ಕುರಿತು ಕಾಂಗ್ರೆಸ್ ಪಕ್ಷವು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬಾರದು. ಬಾಂಗ್ಲಾ ನುಸುಳುಕೋರರು ಈಗಾಗಲೇ ಪಶ್ಚಿಮ ಬಂಗಾಳ್ ತೊರೆದು ಕಾಂಗ್ರೆಸ್ ಸರ್ಕಾರ ಇರುವ ಕರ್ನಾಟಕ, ತೆಲಂಗಾಣ, ಕೇರಳಕ್ಕೆ ವಲಸೆ ಹೋಗುತ್ತಿದ್ದಾರೆಂಬ ಸುದ್ದಿ ಹರಡುತ್ತಿದ್ದು, ಅವರು ಎಲ್ಲಿಂದ ಬರುತ್ತಾರೋ, ಅಲ್ಲಿಂದಲೇ ಆಯಾ ರಾಜ್ಯ ಸರ್ಕಾರಗಳು ತಡೆದು ಅವರನ್ನು ದೇಶದಿಂದ ಗಡಿಪಾರು ಮಾಡಬೇಕು ಎಂದು ಅವರು ಒತ್ತಾಯಿಸಿದರು. ಈ ಹಿಂದೆ ಕೇಂದ್ರ ಸರ್ಕಾರವು ಬಾಂಗ್ಲಾ ನುಸುಳುಕೋರರನ್ನು ಗಡಿಪಾರು ಮಾಡಲು ದೇಶದ ಎಲ್ಲ ರಾಜ್ಯಗಳಿಗೆ ನಿರ್ದೇಶನ ನೀಡಿತ್ತು. ಬೆಂಗಳೂರಿನ ಲ್ಲಿಯೇ ಅಪಾರ ಸಂಖ್ಯೆಯ ಬಾಂಗ್ಲಾ ನುಸುಳುಕೋರರು ನಕಲಿ ಆಧಾರ್ ಕಾರ್ಡ್ ಹೊಂದುವ ಮೂಲಕ ವಾಸವಾಗಿದ್ದರು. ಅಂಥವರನ್ನು ಗುರುತಿಸಿ ಗಡಿಪಾರು ಮಾಡಬೇಕು ಎಂದು ಶಿವಸೇನೆ ಪಕ್ಷವು ರಾಜ್ಯಪಾಲರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದೆ ಎಂದು ಅವರು ಹೇಳಿದರು.

ಸದ್ಯಕ್ಕೆ ಪಶ್ಚಿಮ ಬಂಗಾಳದಲ್ಲಿನ ನುಸುಳುಕೋರರು ಕಾಂಗ್ರೆಸ್ ಆಡಳಿತ ಇರುವ ರಾಜ್ಯಗಳಿಗೆ ವಲಸೆ ಬಂದರೆ ಅವಯಿರಿಗೆ ಅವಕಾಶ ಕೊಡಬಾರದು. ಹಾಗಾಗಿ ಕರ್ನಾಟಕದ ಕಾಂಗ್ರೆಸ್ ಸರ್ಕಾರವು ಎಲ್ಲ ರೈಲು ನಿಲ್ದಾಣಗಳಲ್ಲಿ ತಪಾಸಣಾ ಕೇಂದ್ರವನ್ನು ಸ್ಥಾಪಿಸುವ ಮೂಲಕ ಬಾಂಗ್ಲಾವಲಸಿಗರು ಕಂಡು ಬಂದರೆ ಅವರನ್ನು ಅಲ್ಲಿಂದಲೇ ಗಡಿಪಾರು ಕ್ರಮಕ್ಕೆ ಮುಂದಾಗಬೇಕು ಎಂದು ಅವರು ಒತ್ತಾಯಿಸಿದರು.

# ಅಮೆರಿಕ ಪ್ರಸ್ತಾಪ ಇರಾನ್ ಪರಿಶೀಲನೆಯಲ್ಲಿ ಶೀಘ್ರ ಯುದ್ಧ ಕೊನೆಗೊಳ್ಳಲಿದೆ: ಟ್ರಂಪ್ ಭವಿಷ್ಯ

**ವಾಷಿಂಗ್ಟನ್/ಟೆಹರಾನ್, ಮೇ 7:** ಅಮೆರಿಕ ಮತ್ತು ಇರಾನ್ ನಡುವಿನ ಯುದ್ಧವನ್ನು ಕೊನೆಗೊಳಿಸುವ ನಿಟ್ಟಿನಲ್ಲಿ ಸಿದ್ಧಪಡಿಸಲಾದ ಅಮೆರಿಕದ ಪ್ರಸ್ತಾವನ್ನು ಇರಾನ್ ಪರಿಶೀಲಿಸುತ್ತಿದೆ ಎಂದು ಆ ದೇಶದ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘಾಯಿ ಖಚಿತಪಡಿಸಿದ್ದು, ತನ್ನ ಅಂತಿಮ ನಿರ್ಧಾರವನ್ನು ಪಾಕ್ ಮಧ್ಯಸ್ಥಿಕೆದಾರರೊಂದಿಗೆ ಹಂಚಿಕೊಳ್ಳಲಿದೆ. ಹಾಗೂ ಕಳೆದ 24 ಗಂಟೆಗಳಲ್ಲಿ ಇರಾನ್ ಜತೆ ಉತ್ತಮ ಮಾತುಕತೆ ನಡೆದಿದ್ದು, ಶೀಘ್ರದಲ್ಲೇ ಒಪ್ಪಂದ ಸಾಧ್ಯತೆಯಿದೆ. ಹಾಗಾಗಿ ಶೀಘ್ರದಲ್ಲೇ ಯುದ್ಧ ಕೊನೆಗೊಳ್ಳಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.



14 ಅಂಶಗಳ ತಿಳುವಳಿಕೆಗಳ ಒಪ್ಪಂದ ಸಿದ್ಧವಾಗುತ್ತಿದ್ದು, ಇದು ಶಾಶ್ವತ ಶಾಂತಿಗೆ ಅಡಿಪಾಯವಾಗಲಿದೆ. ಇದರಲ್ಲಿ ಪರಮಾಣು ಸಮಸ್ಯೆಗಳ ಇತ್ಯರ್ಥ, ಇರಾನ್‌ನ ಸ್ಥಗಿತಗೊಂಡ ಆಸ್ತಿಗಳ ಬಿಡುಗಡೆ ಮತ್ತು ಹಾರ್ಮುಜ್ ಜಲಸಂಧಿಯಲ್ಲಿ ನೌಕಾಯಾನದ ಸ್ವಾತಂತ್ರ್ಯದಂತಹ ವಿಷಯಗಳು ಸೇರಿವೆ ಎಂದಿದ್ದಾರೆ.

ಇರಾನ್ ತನ್ನ ಸಮೃದ್ಧ ಯುರೇನಿಯಂ ಅನ್ನು ಅಮೆರಿಕಕ್ಕೆ ಹಸ್ತಾಂತರಿಸಬೇಕು ಮತ್ತು ಭೂಗತ ಪರಮಾಣು ಕೇಂದ್ರಗಳನ್ನು ಮುಚ್ಚಬೇಕು ಎಂದು ಟ್ರಂಪ್ ಷರತ್ತು ವಿಧಿಸಿದ್ದಾರೆ. ಮತ್ತೊಂದೆಡೆ ಅಮೆರಿಕದ ಷರತ್ತುಗಳನ್ನು ಇರಾನ್ ಸಂಸತ್ತಿನ ಕೆಲವು ಸದಸ್ಯರು ಅಮೆರಿಕದ ಈ ಪ್ರಸ್ತಾವವನ್ನು "ಆಶಯಗಳ ಪಟ್ಟಿ" ಎಂದು ಕರೆದು ಟೀಕಿಸಿದ್ದಾರೆ. ಅಮೆರಿಕ ಸೂಕ್ತ ರಿಯಾಯಿತಿಗಳನ್ನು ನೀಡದಿದ್ದರೆ "ಕಠಿಣ ಮತ್ತು ವಿಷಾದಿಸುವಂತಹ ಪ್ರತಿಕ್ರಿಯೆ" ನೀಡುವುದಾಗಿ ಎಚ್ಚರಿಸಿದ್ದಾರೆ.

ಇದಕ್ಕೆ ತಿರುಗೇಟು ನೀಡಿರುವ ಟ್ರಂಪ್, ಒಂದು ವೇಳೆ ಇರಾನ್ ಈ ಒಪ್ಪಂದವನ್ನು ತಿರಸ್ಕರಿಸಿದರೆ, ಹಿಂದೆಂದಿಗಿಂತಲೂ ತೀವ್ರವಾದ ಬಾಂಬ್ ದಾಳಿ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಎರಡೂ ದೇಶಗಳ ನಡುವೆ ಮಧ್ಯಸ್ಥಿಕೆ ವಹಿಸಿರುವ ಪಾಕಿಸ್ತಾನವು ಈ ಸಂಭಾವ್ಯ ಒಪ್ಪಂದವನ್ನು ಸ್ವಾಗತಿಸಿದ್ದು, ಎರಡನೇ ಸುತ್ತಿನ ಶಾಂತಿ ಮಾತುಕತೆಗೆ ಇಸ್ಲಾಮಾಬಾದ್‌ನಲ್ಲಿ ಆತಿಥ್ಯ ವಹಿಸಲು ಸಿದ್ಧವಿರುವುದಾಗಿ ತಿಳಿಸಿದೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಕೂಡ ಈ ಮಾತುಕತೆಗಳ ಪ್ರಗತಿಯ ಬಗ್ಗೆ ನಿರಂತರ ಸಂಪರ್ಕದಲ್ಲಿದ್ದಾರೆ.

# ಯುದ್ಧದಿಂದ ದೇಶದ ಆರ್ಥಿಕತೆ ಸಂಕಷ್ಟ ತೀವ್ರ

## ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಅಳಲು

**ಟೆಹರಾನ್, ಮೇ 7:** ಯುದ್ಧದಿಂದಾಗಿ ದೇಶದ ಆರ್ಥಿಕತೆ ಮೇಲೆ ಪರಿಣಾಮ ಬೀರಿದ್ದು, ಇರಾನ್‌ನನ್ನು ಅಸ್ಥಿರಗೊಳಿಸಲು ಬಾಹ್ಯಶಕ್ತಿಗಳು ವ್ಯವಸ್ಥಿತವಾಗಿ ನಡೆಸುತ್ತಿರುವ ಪ್ರಯತ್ನದಿಂದಾಗಿ ದೇಶದ ವಿವಿಧ ಕ್ಷೇತ್ರಗಳು ಸಂಕಷ್ಟಕ್ಕೀಡಾಗಿವೆ ಎಂದು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ತಿಳಿಸಿದ್ದಾರೆ.

ತಮ್ಮ ಕಚೇರಿಯಿಂದ ಗುರುವಾರ ವಿಡಿಯೋವೊಂದನ್ನು ಬಿಡುಗಡೆ ಮಾಡಿದ್ದು, ಹಣದುಬ್ಬರ, ಬೆಲೆ ಏರಿಕೆ ಮತ್ತು ಆರ್ಥಿಕ ಒತ್ತಡಗಳಿಂದಾಗಿ ಪ್ರಪಂಚದ ಎಲ್ಲಾ ದೇಶಗಳು ಪರಿಣಾಮ ಎದುರಿಸುತ್ತಿವೆ ಎಂಬುದು ವಾಸ್ತವ. ನಾವು ಯುದ್ಧದ ಪರಿಸ್ಥಿತಿಯಲ್ಲಿದ್ದೇವೆ ಮತ್ತು ನಮ್ಮ ಮೇಲೆ ಭೀಕರ ದಾಳಿ ನಡೆದಿದೆ, ಅದ್ದರಿಂದ ಕೆಲವು ಸವಾಲುಗಳನ್ನು ಎದುರಿಸಬೇಕಾಗುವುದು ಸಹಜ ಎಂದಿದ್ದಾರೆ.

ಕೈಗಾರಿಕಾ ಉತ್ಪಾದನೆಗೆ ಅಡ್ಡಿಯಾಗದಂತೆ ನೋಡಿಕೊಳ್ಳಲು ಸಾರ್ವಜನಿಕರು ಮತ್ತು ಉದ್ಯಮಿಗಳು ಮಿತವಾಗಿ ಇಂಧನ ಬಳಸಬೇಕು.



ಅತಿಯಾದ ಬಳಕೆಯನ್ನು ನಿಯಂತ್ರಿಸಬೇಕು. ಉತ್ಪಾದನೆಗೆ ಬೇಕಾದ ವಿದ್ಯುತ್ ಮತ್ತು ಅನಿಲ ಪೂರೈಕೆಯನ್ನು ಕಡಿತಗೊಳಿಸದಂತೆ ಖಚಿತಪಡಿಸಿಕೊಳ್ಳಬೇಕು. ಬದಲಾಗಿ, ಅನಗತ್ಯ ಬಳಕೆಯನ್ನು ಕಡಿಮೆ ಮಾಡಬೇಕು ಎಂದು ಕರೆ ನೀಡಿದ್ದಾರೆ.

ಉದ್ಯಮಿಗಳು ತಮ್ಮ ವ್ಯವಹಾರಗಳನ್ನು ಸ್ವತಃ ನಿರ್ವಹಿಸಿಕೊಳ್ಳಲು ಪ್ರಯತ್ನಿಸಬೇಕು ಮತ್ತು ಅಗತ್ಯವಿರುವಲ್ಲಿ ಮಾತ್ರ ಸರ್ಕಾರದ ಸಹಾಯವನ್ನು ಕೋರಬೇಕು ಎಂದು ಮನವಿ ಮಾಡಿದರು.

ಯುದ್ಧದಿಂದ ಉಂಟಾದ ಅಗಾಧ ಆರ್ಥಿಕ ಒತ್ತಡದ ಹಿನ್ನೆಲೆಯಲ್ಲಿ, ಇಸ್ಲಾಮಿಕ್ ಗಣರಾಜ್ಯದ ಆಡಳಿತದಲ್ಲಿ ಕೆಲವು "ಲೋಪದೋಷಗಳು" ಇರುವುದನ್ನು ಅವರು ಮುಕ್ತವಾಗಿ ಒಪ್ಪಿಕೊಂಡಿದ್ದು, ನಾವು ನಿಮಗೆ ಸಹಾಯ ಮಾಡಲು ಬಯಸುತ್ತೇವೆ ಮತ್ತು ಈ ಹಾದಿಯಲ್ಲಿ ಮುಂದುವರಿಯಲು ನೀವು ನಮಗೆ ಸಹಾಯ ಮಾಡಬೇಕು ಎಂದು ಅವರು ವಿನಂತಿಸಿದ್ದಾರೆ.

ಇದೇ ವೇಳೆ, ಅಮೆರಿಕದೊಂದಿಗೆ ಶಾಂತಿ ಮಾತುಕತೆಗಳನ್ನು ಮುಂದುವರಿಸಲು ಪ್ರಯತ್ನಿಸುತ್ತಿರುವ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಅವರು ಪಾಕಿಸ್ತಾನದ ವಿದೇಶಾಂಗ ಸಚಿವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ್ದು, ಪ್ರಾದೇಶಿಕ ಉದ್ವಿಗ್ನತೆಯನ್ನು ತಡೆಯಲು ರಾಜತಾಂತ್ರಿಕ ಮತ್ತು ಸಹಕಾರದ ಅಗತ್ಯತೆಯನ್ನು ಒತ್ತಿಹೇಳಿದ್ದಾರೆ.

# ಇರಾನ್‌ನ ನಟಾಂಜ್ ಪರಮಾಣು ಕೇಂದ್ರದ ಬಳಿ ಹೊಸ ಹೆಚ್ಚುವರಿ ಭದ್ರತಾ ನಿರ್ಮಾಣ: ಉಪಗ್ರಹ ಚಿತ್ರಗಳಿಂದ ಮಾಹಿತಿ

**ನಟಾಂಜ್, ಮೇ 7:** ಇರಾನ್ ತನ್ನ ಪ್ರಮುಖ ಪರಮಾಣು ಮೂಲಸೌಕರ್ಯವಿರುವ ನಟಾಂಜ್ ಪರಮಾಣು ಕೇಂದ್ರದ ಸಮೀಪವಿರುವ ಭೂಮಿಯ ಆಳದಲ್ಲಿ ಹೂತುಹೋದ ಭೂಗತ ಸಂಕೀರ್ಣದ ಸುತ್ತ ಹೆಚ್ಚುವರಿ ರಕ್ಷಣಾ ಕ್ರಮಗಳನ್ನು ಕೈಗೊಳ್ಳುತ್ತಿರುವುದು ಹೊಸ ಉಪಗ್ರಹ ಚಿತ್ರಗಳಿಂದ ತಿಳಿದುಬಂದಿದೆ ಎಂದು ವಾಷಿಂಗ್ಟನ್ ಮೂಲದ 'ಇನ್‌ಸ್ಟಿಟ್ಯೂಟ್ ಫಾರ್ ಸೈನ್ಸ್ ಅಂಡ್ ಇಂಟರ್ ನ್ಯಾಷನಲ್ ಸೆಕ್ಯುರಿಟಿ' ವರದಿ ಮಾಡಿದೆ.



ಪಿಕ್ಯಾಕ್ಸ್ ಮೌಂಟೇನ್ (ಮೌಂಟ್ ಕೊಲಾಂಗ್ ಗಾಜ್ ಲಾ ಎಂದು ಕೂಡ ಕರೆಯಲ್ಪಡುವ) ಭೂಗತ ಸಂಕೀರ್ಣದ ಉಪಗ್ರಹ ಚಿತ್ರಗಳನ್ನು ವಿಶ್ಲೇಷಿಸಿದಾಗ, ಏಪ್ರಿಲ್ ಅಂತ್ಯದ ವೇಳೆಗೆ ಇರಾನ್ ಎರಡು ಪೂರ್ವ ಸುರಂಗ ಪ್ರವೇಶದ್ವಾರಗಳನ್ನು ಬೂದು ಬಣ್ಣದ ಮಣ್ಣಿನಿಂದ ಭಾಗಶಃ ಮುಚ್ಚಿರುವುದು ಕಂಡುಬಂದಿದೆ. ವಾಹನಗಳು ವೇಗವಾಗಿ ಸುರಂಗದೊಳಗೆ ಪ್ರವೇಶಿಸುವುದನ್ನು ತಡೆಯಲು ಅಥವಾ ನಿಧಾನಗೊಳಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ. ಏಪ್ರಿಲ್ 1ರ ಚಿತ್ರಗಳಲ್ಲಿ ಈ ದ್ವಾರಗಳು ಮುಕ್ತವಾಗಿದ್ದವು, ಆದರೆ ಏಪ್ರಿಲ್ 22ರ ವೇಳೆಗೆ ಗಮನಾರ್ಹ ಬದಲಾವಣೆಗಳು ಕಂಡುಬಂದಿದೆ ಎಂದು ಉಪಗ್ರಹ ಚಿತ್ರಗಳಿಂದ ಕಂಡುಬರುತ್ತಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಈ ದ್ವಾರಗಳನ್ನು ಸಂಪೂರ್ಣವಾಗಿ ಹೂತುಹಾಕದಿದ್ದರೂ, ಮಣ್ಣಿನ ರಾಶಿಯು ವಾಹನಗಳ ಸಂಚಾರಕ್ಕೆ ದೊಡ್ಡ ಅಡಚಣೆಯಾಗಲಿದೆ. ಇದನ್ನು ತೆರವುಗೊಳಿಸಲು ಭಾರೀ ಯಂತ್ರೋಪಕರಣಗಳ ಅಗತ್ಯವಿರುತ್ತದೆ ಎಂದು ಸಂಸ್ಥೆ ಹೇಳಿದೆ. ಈ ಭೂಗತ ತಾಣವನ್ನು ಸೂಕ್ಷ್ಮ ಪರಮಾಣು ಉಪಕರಣಗಳು, ಸಾಮಗ್ರಿ ಅಥವಾ ಇತರ ಆಸ್ತಿಗಳನ್ನು ವೈಮಾನಿಕ ದಾಳಿ ಮತ್ತು ಕಣ್ಗಾವಲಿನಿಂದ ರಕ್ಷಿಸಲು ಬಳಸುವ ಸಾಧ್ಯತೆಯಿದೆ ಎಂಬ ಪ್ರಶ್ನೆಗಳನ್ನು ಈ ಬೆಳವಣಿಗೆ ಹುಟ್ಟುಹಾಕಿದೆ.

ಅಲ್ಲದೇ, ಇದೇ ಬೆಟ್ಟದಲ್ಲಿರುವ 2007ರ ಹಳೆಯ ಸುರಂಗ ದ್ವಾರಗಳನ್ನು ಈ ವರ್ಷದ ಆರಂಭದಲ್ಲಿ ಕಾಂಕ್ರೀಟ್‌ನಿಂದ ಭದ್ರಪಡಿಸಲಾಗಿತ್ತು. ಇದು ಈಗಾಗಲೇ ಕೆಲವು ಪ್ರಮುಖ ಸಾಮಗ್ರಿಗಳನ್ನು ಬೆಟ್ಟದ ಆಳಕ್ಕೆ ಸ್ಥಳಾಂತರಿಸಿರಬಹುದು ಎಂಬ ಸಂಶಯಕ್ಕೆ ಕಾರಣವಾಗಿದೆ. ಪರ್ವತಗಳ ಆಳದಲ್ಲಿ ನಿರ್ಮಿಸಲಾದ ಇಂತಹ ಸಂಕೀರ್ಣಗಳು ಸಾಂಪ್ರದಾಯಿಕ ಮಿಲಿಟರಿ ದಾಳಿಗಳನ್ನು ತಡೆಯಬಲ್ಲವು ಎಂದು ಪರಿಗಣಿಸಲಾಗಿದ್ದು, ಅಂತರಾಷ್ಟ್ರೀಯ ಮಟ್ಟದಲ್ಲಿ ಇದು ತೀವ್ರ ಕುತೂಹಲ ಮೂಡಿಸಿದೆ.

# ಬಾಂಗ್ಲಾದೇಶದಲ್ಲಿ ಉಲ್ಬಣಿಸಿದ ದಡಾರ ಮಾರಿ: 12 ಮಕ್ಕಳ ಸಾವು

**ಢಾಕಾ, ಮೇ 7:** ಬಾಂಗ್ಲಾದೇಶದಲ್ಲಿ ದಡಾರ ಸಾಂಕ್ರಾಮಿಕ ರೋಗವು ತೀವ್ರ ಸ್ವರೂಪ ಪಡೆದಿದ್ದು, ಕಳೆದ 24 ಗಂಟೆಗಳಲ್ಲಿ 12 ಮಕ್ಕಳು ಬಲಿಯಾಗಿದ್ದಾರೆ. ಈ ಪೈಕಿ ಒಂದು ಮಗುವಿಗೆ ದಡಾರ ಇರುವುದು ದೃಢಪಟ್ಟಿದ್ದರೆ, ಉಳಿದ 11 ಮಕ್ಕಳು ದಡಾರದಂತಹ ಲಕ್ಷಣಗಳಿಂದ ಸಾವನ್ನಪ್ಪಿದ್ದಾರೆ.



ಕಳೆದ 24 ಗಂಟೆಗಳಲ್ಲಿ ದೇಶಾದ್ಯಂತ 1,238 ಮಕ್ಕಳಲ್ಲಿ ದಡಾರದ ಲಕ್ಷಣಗಳು ಕಂಡುಬಂದಿವೆ ಎಂದು ಆರೋಗ್ಯ ಸೇವೆಗಳ ಮಹಾನಿರ್ದೇಶನಾಲಯ ವರದಿ ಮಾಡಿದೆ. ಇದರಲ್ಲಿ 286 ಪ್ರಕರಣಗಳು ದೃಢಪಟ್ಟಿವೆ. ಮಾರ್ಚ್ 15ರಿಂದ ಈವರೆಗೆ ದಡಾರ ಮತ್ತು ಸಂಬಂಧಿತ ಲಕ್ಷಣಗಳಿಂದ ಒಟ್ಟು 279 ಮಕ್ಕಳು ಮೃತಪಟ್ಟಿದ್ದಾರೆ. ಈ ವರ್ಷ ಕೇವಲ ದೃಢಪಟ್ಟ ದಡಾರ ಸೋಂಕಿನಿಂದಲೇ 57 ಮಕ್ಕಳು ಸಾವನ್ನಪ್ಪಿದ್ದಾರೆ ಎಂದು ವರದಿ ತಿಳಿಸಿದೆ.

ಕಳೆದ 24 ಗಂಟೆಗಳಲ್ಲಿ ಢಾಕಾ ನಗರ ಒಂದರಲ್ಲೇ 6 ಸಾವುಗಳು ಸಂಭವಿಸಿವೆ. ಉಳಿದಂತೆ ಬರಿಸಾಲ್, ಖುಲ್ನಾ, ಮೈಮೆನ್ಸಿಂಗ್ ಮತ್ತು ಸಿಲ್ಹೆಟ್‌ನಲ್ಲಿ ತಲಾ ಒಂದು ಹಾಗೂ ರಾಜಶಾಹಿಯಲ್ಲಿ ಎರಡು ಸಾವುಗಳು ವರದಿಯಾಗಿವೆ. ಮಾರ್ಚ್ 15 ರಿಂದ ಈವರೆಗೆ ಒಟ್ಟು 45,498 ಮಕ್ಕಳಲ್ಲಿ ದಡಾರದ ಲಕ್ಷಣಗಳು ಕಾಣಿಸಿಕೊಂಡಿದ್ದು, 31,912 ಮಕ್ಕಳು ಆಸ್ಪತ್ರೆಗೆ ದಾಖಲಾಗಿದ್ದಾರೆ.

### ವಿಶ್ವ ಆರೋಗ್ಯ ಸಂಸ್ಥೆ ಎಚ್ಚರಿಕೆ

ಕಳೆದ ಏಪ್ರಿಲ್‌ನಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು ಬಾಂಗ್ಲಾದೇಶದ ದಡಾರ ಹಾವಳಿಯನ್ನು "ಅತ್ಯಂತ ಅಪಾಯಕಾರಿ" ಎಂದು ಗುರುತಿಸಿತ್ತು. ಲಸಿಕಾ ಅಭಿಯಾನದ ಕೊರತೆ ಮತ್ತು ದುರ್ಬಲ ಆರೋಗ್ಯ ವ್ಯವಸ್ಥೆಯಿಂದಾಗಿ ಸೋಂಕು ಮತ್ತಷ್ಟು ಹರಡುವ ಸಾಧ್ಯತೆಯಿದೆ ಎಂದು ಎಚ್ಚರಿಸಿದೆ. ದಡಾರ ಹರಡುವುದನ್ನು ತಡೆಗಟ್ಟಲು ತುರ್ತು ಕ್ರಮಗಳನ್ನು ಕೈಗೊಳ್ಳುವ ಅಗತ್ಯವಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

# ಬಾಂಗ್ಲಾದೇಶ, ಇತರ ದಕ್ಷಿಣ ಏಷ್ಯಾದ ದೇಶಗಳ ಜೊತೆಗಿನ ಸಂಬಂಧ 3ನೇ ವ್ಯಕ್ತಿಯ ವಿರುದ್ಧವಲ್ಲ: ಚೀನಾ ಸ್ಪಷ್ಟನೆ

**ಬೀಜಿಂಗ್, ಮೇ 7:** ಬಾಂಗ್ಲಾದೇಶ ಮತ್ತು ಇತರ ದಕ್ಷಿಣ ಏಷ್ಯಾದ ದೇಶಗಳೊಂದಿಗಿನ ಚೀನಾದ ಸಂಬಂಧಗಳು ಯಾವುದೇ ಮೂರನೇ ರಾಷ್ಟ್ರದ ವಿರುದ್ಧವಾಗಿಲ್ಲ ಅಥವಾ ಅವು ಯಾವುದೇ ಮೂರನೇ ವ್ಯಕ್ತಿಯಿಂದ ಪ್ರಭಾವಿತವಾಗಬಾರದು ಎಂದು ಚೀನಾ ಸ್ಪಷ್ಟಪಡಿಸಿದೆ.



ಚೀನಾ ಪ್ರವಾಸದಲ್ಲಿರುವ ಬಾಂಗ್ಲಾದೇಶದ ವಿದೇಶಾಂಗ ಸಚಿವ ಖಲೀಲೂರ್ ರೆಹಮಾನ್ ಅವರನ್ನು ಬೀಜಿಂಗ್‌ನಲ್ಲಿ ಗುರುವಾರ ಭೇಟಿ ಮಾಡಿ ಮಾತುಕತೆ ನಂತರ ಮಾತನಾಡಿದ ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ.

ಹಸಿರು ಅಭಿವೃದ್ಧಿ ಮತ್ತು ಡಿಜಿಟಲ್ ಆರ್ಥಿಕತೆಯಂತಹ ಉದಯೋನ್ಮುಖ ಕೈಗಾರಿಕೆಗಳಲ್ಲಿ ಬಾಂಗ್ಲಾದೇಶಕ್ಕೆ ಸಹಕಾರವನ್ನು ವಿಸ್ತರಿಸಲು ಒಪ್ಪಿಕೊಂಡಿದ್ದಾರೆ. ಚೀನಾದ ಪ್ರಮುಖ ಯೋಜನೆ 'ಬೆಲ್ಟ್ ಆಂಡ್ ರೋಡ್ ಇನಿಶಿಯೇಟಿವ್' ಅನ್ನು ಬಾಂಗ್ಲಾದೇಶದ ರಾಷ್ಟ್ರೀಯ ಅಭಿವೃದ್ಧಿ ಕಾರ್ಯತಂತ್ರದೊಂದಿಗೆ ಜೋಡಿಸಲು ಮತ್ತು ವ್ಯಾಪಾರದಂತಹ ಸಾಂಪ್ರದಾಯಿಕ ಕ್ಷೇತ್ರಗಳಲ್ಲಿ ಸಹಕಾರವನ್ನು ಗಾಢವಾಗಿಸಲು ಚೀನಾ ಉತ್ಸುಕವಾಗಿದೆ ಎಂದಿದ್ದಾರೆ. ಸಮರ್ಥ ಚೀನೀ ಉದ್ಯಮಗಳು ಬಾಂಗ್ಲಾದೇಶದಲ್ಲಿ ಹೂಡಿಕೆ ಮಾಡಲು ಮತ್ತು ಕಾರ್ಯನಿರ್ವಹಿಸಲು ಎರಡೂ ನಾಯಕರು ಬೆಂಬಲ ವ್ಯಕ್ತಪಡಿಸಿದ್ದು, ಹೂಡಿಕೆದಾರರಿಗೆ ಪೂರಕವಾದ ಮತ್ತು ಸ್ಥಿರವಾದ ವಾತಾವರಣವನ್ನು ಒದಗಿಸುವುದಾಗಿ ಖಲೀಲೂರ್ ರೆಹಮಾನ್ ಭರವಸೆ ನೀಡಿದ್ದಾರೆ.

ಕಳೆದ 15 ವರ್ಷಗಳಿಂದ ಚೀನಾ ಬಾಂಗ್ಲಾದೇಶದ ಅತಿದೊಡ್ಡ ವ್ಯಾಪಾರ ಪಾಲುದಾರನಾಗಿದೆ. 2024 ರಲ್ಲಿ ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ಸುಮಾರು 17.35 ಬಿಲಿಯನ್ ಡಾಲರ್‌ಗಳನ್ನು ತಲುಪಿದೆ.

ಪ್ರಾದೇಶಿಕ ಮತ್ತು ಜಾಗತಿಕ ಶಾಂತಿಗಾಗಿ ಬಹುಪಕ್ಷೀಯ ಸಂಸ್ಥೆಗಳಲ್ಲಿ ಸಂವಹನ ಮತ್ತು ಸಹಕಾರವನ್ನು ಬಲಪಡಿಸಲು ಎರಡೂ ದೇಶಗಳು ಸಮ್ಮತಿಸಿವೆ.

# ಇಬ್ಬರು ಬ್ರಿಟಿಷ್ ಪ್ರಜೆಗಳಿಗೆ ಹಾಂಟಾ ವೈರಸ್ ಸೋಂಕು

**ಲಂಡನ್, ಮೇ 7:** ಇಡೀ ಜಗತ್ತಿಗೆ ಭೀತಿ ಹುಟ್ಟಿಸಿರುವ ಮಾರಕ ಹಾಂಟಾ ವೈರಸ್ ವೈರಸ್ ಕುರಿತು ಬ್ರಿಟನ್ ಸರ್ಕಾರ ಹೊಸ ಸುದ್ದಿ ನೀಡಿದ್ದು, ಕ್ರೂಸ್ ಹಡಗಿನಲ್ಲಿ ಸೋಂಕಿಗೆ ಗುರಿಯಾಗಿದ್ದ ಇಬ್ಬರು ಬ್ರಿಟನ್ ಪ್ರಜೆಗಳು ಮನೆಗೆ ಮರಳಿದ್ದಾರೆ ಎಂದು ಹೇಳಿದೆ.



ಪಶ್ಚಿಮ ಆಫ್ರಿಕಾ ಕರಾವಳಿಯ ಬಳಿ ನಿಲುಗಡೆಗೊಂಡಿದ್ದ ಕ್ರೂಸ್ ಹಡಗಿನಲ್ಲಿ ಅಪಾಯಕಾರಿ ಹಾಂಟಾವೈರಸ್ಗೆ ಒಳಗಾದ ಬಳಿಕ ಬ್ರಿಟನ್ಗೆ ಮರಳಿದ ಇಬ್ಬರು ಬ್ರಿಟಿಷ್ ಪ್ರಜೆಗಳು ಮುನ್ನೆಚ್ಚರಿಕಾ ಕ್ರಮವಾಗಿ ಸ್ವಯಂ ಪ್ರತ್ಯೇಕತೆ (ಕ್ವಾರಂಟೈನ್)ಯಲ್ಲಿ ಇದ್ದಾರೆ ಎಂದು ಯುಕೆ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಸದ್ಯ ಸೋಂಕಿತ ಇಬ್ಬರನ್ನು ಕ್ವಾರಂಟೈನ್‌ನಲ್ಲಿ ಇರಿಸಲಾಗಿದೆ ಎಂದು ತಿಳಿಸಿದ್ದಾರೆ.

ಯುಕೆ ಹೆಲ್ತ್ ಸೆಕ್ಯುರಿಟಿ ಏಜೆನ್ಸಿ ಬುಧವಾರ ಈ ಕುರಿತು ಹೇಳಿಕೆ ಬಿಡುಗಡೆ ಮಾಡಿದ್ದು, ವೈರಸ್ ಹರಡುವಿಕೆ ವರದಿಯಾದ ವೇಳೆ ಪಶ್ಚಿಮ ಆಫ್ರಿಕಾ ಕರಾವಳಿಯ ಬಳಿ ನಿಲುಗಡೆಗೊಂಡಿದ್ದ MV Hondius ಕ್ರೂಸ್ ಶಿಪ್ ಬ್ರಿಟನ್‌ಗೆ ಮರಳುತ್ತಿರುವ ಬ್ರಿಟಿಷ್ ನಾಗರಿಕರ ವ್ಯವಸ್ಥೆಗಳನ್ನು ವಿಶ್ವ ಆರೋಗ್ಯ ಸಂಸ್ಥೆ ಜೊತೆಗೆ ಸಂಯೋಜಿಸಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದೆ.

### ಇಲಿಗಳ ಮೂಲಕ ವೈರಸ್

ಯುಕೆ ಹೆಲ್ತ್ ಸೆಕ್ಯುರಿಟಿ ಏಜೆನ್ಸಿಯ ಎಪಿಡೆಮಿಕ್ ಮತ್ತು ಎಮರ್ಜಿಂಗ್ ಇನ್ಫೆಕ್ಷನ್ಸ್ ವಿಭಾಗದ ಉಪನಿರ್ದೇಶಕಿ ಡಾ. ಮೀರಾ ಚಂದ್ ಸಾರ್ವಜನಿಕರು ಆತಂಕ ಪಡಬೇಕಾಗಿಲ್ಲ. ಇಲಿಯ ಮಲದ ಮೂಲಕ ಹರಡುವ ಈ ವೈರಸ್‌ನಿಂದ ಸಾಮಾನ್ಯ ಜನರಿಗೆ ಇರುವ ಅಪಾಯ 'ತುಂಬಾ ಕಡಿಮೆ' ಎಂದಿದ್ದಾರೆ. ಹಡಗಿನಲ್ಲಿ ಸಂಭವಿಸಿದ ಹಾಂಟಾ ವೈರಸ್ ಸ್ಫೋಟದಿಂದ ಬಾಧಿತರಾದ ಎಲ್ಲರೊಂದಿಗೆ ನಮ್ಮ ಮನಸ್ಸಿದೆ. ಸಕಲ ನೆರವು ನೀಡಲು ನಾವು ಸಿದ್ಧ ಎಂದು ಭಾರತೀಯ ಮೂಲದ ವೈದ್ಯೆ ಡಾ. ಮೀರಾಚಂದ್ ಹೇಳಿದ್ದಾರೆ. ಜೊತೆಗೆ ಹಡಗು ಅಥವಾ ಹಾಂಟಾವೈರಸ್ ಸೋಂಕಿತರ ಸಂಪರ್ಕಕ್ಕೆ ಬಂದಿರುವವರನ್ನು ಪತ್ತೆಹಚ್ಚುವ ಕಾರ್ಯವೂ ನಡೆಯುತ್ತಿದೆ, ಇದರಿಂದ ಸೋಂಕು ಮತ್ತಷ್ಟು ಹರಡುವ ಅಪಾಯವನ್ನು ಕಡಿಮೆ ಮಾಡಬಹುದು ಎಂದಿದ್ದಾರೆ.

### ಕ್ರೂಸ್ ಶಿಪ್‌ನಲ್ಲಿ ವೈರಸ್ ಸ್ಫೋಟ

ಅರ್ಜೆಂಟೀನಾದ ಉಶುವಾಯಾದಿಂದ ಏಪ್ರಿಲ್ 1 ರಂದು ಹೊರಟಿದ್ದ MV ಹೊಂಡಿಯಸ್ ಎಂಬ ಕ್ರೂಸ್ ಹಡಗಿನಲ್ಲಿ ಮಾರಣಾಂತಿಕ ಹಂಟಾವೈರಸ್ ಹರಡಿತು. ಹಡಗಿನಲ್ಲಿ ಸಿಬ್ಬಂದಿ ಸಹಿತ 147 ಮಂದಿ 23 ವಿವಿಧ ದೇಶಗಳಿಗೆ ಪ್ರಯಾಣಿಸುತ್ತಿದ್ದರು. ಈ ಪೈಕಿ 70 ವರ್ಷ ವಯಸ್ಸಿನ ಡಚ್ ಪ್ರಜೆ ಮತ್ತು ಅವರ 69 ವರ್ಷದ ಪತ್ನಿ ಸೋಂಕಿಗೆ ತುತ್ತಾಗಿ ಶಿಪ್‌ನಲ್ಲೇ ಮೃತಪಟ್ಟಿದ್ದರು. ಇದಲ್ಲದೆ ಮತ್ತೋರ್ವ ಜರ್ಮನ್ ಪ್ರಯಾಣಿಕ ಸೋಂಕಿನಿಂದ ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು

> ■ ದಕ್ಷಿಣ ಆಫ್ರಿಕಾ ಕರಾವಳಿಯಲ್ಲಿ ಕ್ರೂಸ್‌ನಲ್ಲಿದ್ದಾಗ ಮಾರಕ ಸೋಂಕು ಹರಡಿರುವ ಶಂಕೆ

ಸ್ಪಷ್ಟಪಡಿಸಿದ್ದಾರೆ. ಹಡಗಿನಲ್ಲಿ ಈವರೆಗೆ 8 ಸೋಂಕು ಪ್ರಕರಣಗಳು ವರದಿಯಾಗಿದ್ದು, ಈ ಪೈಕಿ ಮೂವರಲ್ಲಿ ದೃಢಪಟ್ಟಿದ್ದರೆ, ಐದು ಶಂಕಿತ ಪ್ರಕರಣಗಳಾಗಿವೆ. ಅಂತೆಯೇ ಮೂವರು ಸೋಂಕಿತರು ಮೃತಪಟ್ಟಿದ್ದಾರೆ.

### ಸೋಂಕಿನ ಲಕ್ಷಣಗಳೇನು?


ಡಚ್ ಕ್ರೂಸ್ ಹಡಗಿನಲ್ಲಿ ಹಲವರಿಗೆ ಆಂಡಿಸ್ ತಳಿಯ ಹಾಂಟಾವೈರಸ್ ಸೋಂಕು ದೃಢಪಟ್ಟಿದೆ. ಈ ವೈರಸ್ ಜ್ವರ, ತೀವ್ರ ದೌರ್ಬಲ್ಯ, ಸ್ನಾಯು ನೋವು, ಹೊಟ್ಟೆನೋವು, ವಾಂತಿ, ಅತಿಸಾರ ಮತ್ತು ಉಸಿರಾಟದ ತೊಂದರೆಗಳನ್ನು ಉಂಟುಮಾಡುತ್ತದೆ.

ತೀವ್ರ ಪ್ರಕರಣಗಳಲ್ಲಿ ರೋಗಿಗಳಿಗೆ ಗಂಭೀರ ಉಸಿರಾಟದ ತೊಂದರೆ, ಕಡಿಮೆ ರಕ್ತದ ಒತ್ತಡ ಮತ್ತು ಮೂತ್ರಪಿಂಡ ವೈಫಲ್ಯ ಉಂಟಾಗಬಹುದು. ಇಂತಹ ಸಂದರ್ಭಗಳಲ್ಲಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಬೇಕಾಗುತ್ತದೆ. ತಜ್ಞರ ಪ್ರಕಾರ, ಮನುಷ್ಯರಿಂದ ಮನುಷ್ಯರಿಗೆ ಸೋಂಕು ಹರಡುವುದು ಅಪರೂಪವಾಗಿದ್ದು, ಅದು ತುಂಬಾ ನಿಕಟ ಸಂಪರ್ಕದ ಮೂಲಕ ಮಾತ್ರ ಸಂಭವಿಸುತ್ತದೆ.

## ಐಪಿಎಲ್ ಅಂತಿಮ ಪಂದ್ಯ ಸ್ಥಳಾಂತರಕ್ಕೆ ಬಿಸಿಸಿಐ ಸ್ಪಷ್ಟನೆ

# ಶೇ.15ರ ಮಿತಿ ಹೊರತಾಗಿ ಹೆಚ್ಚುವರಿ ಟಿಕೆಟ್ ಕೇಳಿದ್ದೇ ಕಾರಣ

**ಮುಂಬೈ, ಮೇ 7:** ತೀವ್ರ ವಿವಾದಕ್ಕೆ ಕಾರಣವಾಗಿರುವ ಐಪಿಎಲ್ 2026 ಫೈನಲ್ ಪಂದ್ಯದ ಮೈದಾನದ ಬದಲಾವಣೆ ವಿಚಾರವಾಗಿ ಇದೇ ಮೊದಲ ಬಾರಿಗೆ ಬಿಸಿಸಿಐ ಹೇಳಿಕೆ ನೀಡಿದೆ.




ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಅವರು ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ್ದು, ನಿನ್ನೆ ಬಿಸಿಸಿಐ ಐಪಿಎಲ್ ಪ್ಲೇಆಫ್ ಪಂದ್ಯಗಳ ಮೈದಾನಗಳ ಘೋಷಿಸಿವೆ. ಅರ್ಹತಾ, ಪ್ಲೇಆಫ್ ಮತ್ತು ಅಂತಿಮ ಪಂದ್ಯಗಳನ್ನು ಒಳಗೊಂಡಂತೆ ಮೂರು ಸ್ಥಳಗಳನ್ನು ಆಯ್ಕೆ ಮಾಡಲಾಗಿದೆ.

ಈ ಪೈಕಿ ಧರ್ಮಶಾಲಾದಲ್ಲಿ ಮೊದಲ ಪ್ಲೇಆಫ್ ಪಂದ್ಯ ನಡೆಯಲಿದೆ. ನಂತರ ಎಲಿಮಿನೇಟರ್ ಹಾಗೂ ಮತ್ತೊಂದು ಪ್ಲೇಆಫ್ ಪಂದ್ಯ ನಡೆಯಲಿದೆ. ಹೀಗಾಗಿ ಎರಡನೇ ಮತ್ತು ಮೂರನೇ ಪಂದ್ಯಗಳು ನ್ಯೂ ಚಂಡೀಗಢದಲ್ಲಿ ನಡೆಯಲಿದ್ದು, ಫೈನಲ್ ಪಂದ್ಯ ಮೇ 31ರಂದು ಅಹ್ಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿದೆ ಎಂದರು. ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ಫೈನಲ್ ಪಂದ್ಯ ಬೇರೆಡೆಗೆ ಬದಲಾವಣೆ ಮಾಡಿದ ಕುರಿತು ಮಾತನಾಡಿದ ಸೈಕಿಯಾ, ಸಾಮಾನ್ಯ ಪ್ರೋಟೋಕಾಲ್ ಪ್ರಕಾರ, ಹಿಂದಿನ ವರ್ಷದ ಚಾಂಪಿಯನ್ ತಂಡಕ್ಕೆ ಫೈನಲ್ ಹಾಗೂ ಒಂದು ಪ್ಲೇಆಫ್ ಪಂದ್ಯವನ್ನು ತನ್ನ ತವರಿನ ಮೈದಾನದಲ್ಲಿ ಆಯೋಜಿಸುವ ಹಕ್ಕು ಇರುತ್ತದೆ.

ಕಳೆದ ವರ್ಷದ ಚಾಂಪಿಯನ್ ಆರ್‌ಸಿಬಿಯಾಗಿದ್ದರಿಂದ, ಪಂದ್ಯಗಳು ಬೆಂಗಳೂರಿನಲ್ಲಿ ನಡೆಯಬೇಕಾಗಿತ್ತು. ಆದರೆ ಇತ್ತೀಚಿನ ಬೆಳವಣಿಗೆಗಳಿಂದ ಉಂಟಾದ ಕೆಲವು ಪರಿಸ್ಥಿತಿಗಳ ಕಾರಣದಿಂದ, ಬಿಸಿಸಿಐ ಮತ್ತು ಐಪಿಎಲ್ ಆಡಳಿತ ಮಂಡಳಿ ಪಂದ್ಯಗಳನ್ನು ಬೆಂಗಳೂರಿನಿಂದ ಸ್ಥಳಾಂತರಿಸುವ ನಿರ್ಧಾರ ಕೈಗೊಳ್ಳಬೇಕಾಯಿತು. ಅದರಂತೆ ಒಂದು ಪಂದ್ಯವನ್ನು ನ್ಯೂ ಚಂಡೀಗಢಕ್ಕೆ ಮತ್ತು ಫೈನಲ್ ಪಂದ್ಯವನ್ನು ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂಗೆ ನೀಡಲಾಗಿದೆ' ಎಂದರು.

### ಫೈನಲ್‌ಗೆ ತೊಡಕಾಗಿದ್ದೇನು?

ಐಪಿಎಲ್ ನಿಯಮಾವಳಿಗಳ ಪ್ರಕಾರ, ಆತಿಥೇಯ ಸಂಸ್ಥೆಗೆ ಒಟ್ಟು ಆಸನ ಸಾಮರ್ಥ್ಯದ ಕೇವಲ 15 ಶೇಕಡಾ ಉಚಿತ ಟಿಕೆಟ್‌ಗಳನ್ನು ಮಾತ್ರ ನೀಡಬೇಕಾಗುತ್ತದೆ. ಇದು ಎಲ್ಲ ರಾಜ್ಯ ಕ್ರಿಕೆಟ್ ಸಂಸ್ಥೆಗಳಿಗೆ ಅನ್ವಯಿಸುವ ಸಾಮಾನ್ಯ ನಿಯಮ.

ಆದರೆ ಐಪಿಎಲ್ ಲೀಗ್ ಪಂದ್ಯಗಳ ಆಯೋಜನೆಯ ವೇಳೆ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ನಿಗದಿತ 15 ಶೇಕಡಾ ಮಿತಿಗಿಂತ ಬಹಳ ಹೆಚ್ಚಾಗಿ ಉಚಿತ ಟಿಕೆಟ್‌ಗಳನ್ನು ಕೇಳುತ್ತಿದೆ ಎಂಬ ಮಾಹಿತಿ ಲಭಿಸಿತು. ಈ ಹಿನ್ನೆಲೆದಲ್ಲಿ ಅವರಿಗೆ ಇ–ಮೇಲ್ ಕಳುಹಿಸಿ ವಿವರಗಳನ್ನು ಕೇಳಿದ್ದೇವೆ. ಮೇ 2ರಂದು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯಿಂದ ಬಂದ ಉತ್ತರವನ್ನು ನೋಡಿ ಬೆಚ್ಚಿಬಿದ್ದೆವು ಎಂದರು. ಅವರು 15 ಶೇಕಡಾ ಉಚಿತ ಟಿಕೆಟ್‌ಗಳ ಜೊತೆಗೆ ತಮ್ಮ ಸದಸ್ಯರು, ಸಂಬಂಧಿತ ಕ್ಲಬ್‌ಗಳು ಹಾಗೂ ಇತರರಿಗಾಗಿ ಹೆಚ್ಚುವರಿ ದೊಡ್ಡ ಪ್ರಮಾಣದ ಟಿಕೆಟ್‌ಗಳನ್ನು ಕೇಳಿದ್ದರು. ಇನ್ನೂ ಆಶ್ಚರ್ಯದ ಸಂಗತಿಯೆಂದರೆ, ಸ್ಥಳೀಯ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಕರ್ನಾಟಕ ಸರ್ಕಾರಕ್ಕಾಗಿ 700 ಉಚಿತ ಟಿಕೆಟ್‌ಗಳನ್ನು ಕೂಡ ಬೇಡಿಕೆ ಇಟ್ಟಿದ್ದರು. ಹೀಗಾಗಿ 15 ಶೇಕಡಾ ಮಿತಿಯ ಹೊರತಾಗಿ 10,000 ಹೆಚ್ಚುವರಿ ಟಿಕೆಟ್‌ಗಳನ್ನು ಅವರು ಕೇಳುತ್ತಿದ್ದರು. ಪ್ಲೇಆಫ್ ಮತ್ತು ಫೈನಲ್ ಪಂದ್ಯಗಳ ಆತಿಥ್ಯ ಸಂಸ್ಥೆ ಬಿಸಿಸಿಐ ಆಗಿರುವುದರಿಂದ, ಐಪಿಎಲ್ ನಿಯಮಾವಳಿಗಳನ್ನು ಉಲ್ಲಂಘಿಸಿ ಅನುಮತಿಗಿಂತ ಹೆಚ್ಚು ಟಿಕೆಟ್‌ಗಳನ್ನು ನೀಡಲು ಸಾಧ್ಯವಿಲ್ಲ. ಆದ್ದರಿಂದ ಕರ್ನಾಟಕದಿಂದ ಪಂದ್ಯಗಳನ್ನು ಸ್ಥಳಾಂತರಿಸುವ ಕಠಿಣ ನಿರ್ಧಾರ ಕೈಗೊಳ್ಳಬೇಕಾಯಿತು ಎಂದು ಸೈಕಿಯಾ ಹೇಳಿದ್ದಾರೆ.

# ಪ್ಯಾಕ್ಸ್ ಸಿಲಿಕಾ ಉಪಕ್ರಮಕ್ಕೆ 15ನೇ ಸದಸ್ಯ ರಾಷ್ಟ್ರವಾಗಿ ನಾರ್ವೆ ಸೇರ್ಪಡೆ

**ವಾಷಿಂಗ್ಟನ್, ಮೇ 7:** ಕೃತಕ ಬುದ್ಧಿಮತ್ತೆ ವ್ಯವಸ್ಥೆಯನ್ನು ಬಲಪಡಿಸಲು ಮತ್ತು ನಿರ್ಣಾಯಕ ಖನಿಜಗಳ ಪೂರೈಕೆ ಸರಪಳಿಯನ್ನು ಸುರಕ್ಷಿತಗೊಳಿಸಲು ರೂಪಿಸಲಾದ ಅಂತರರಾಷ್ಟ್ರೀಯ ಪಾಲುದಾರಿಕೆ 'ಪ್ಯಾಕ್ಸ್ ಸಿಲಿಕಾ'ಗೆ ನಾರ್ವೆ ಅಧಿಕೃತವಾಗಿ ಸೇರ್ಪಡೆಗೊಂಡಿದೆ.




ಈ ಉಪಕ್ರಮದ ಸದಸ್ಯ ರಾಷ್ಟ್ರವಾಗಿ ನಾರ್ವೆಯು ವೈವಿಧ್ಯಮಯ ಖನಿಜ ಪೂರೈಕೆ ಸರಪಳಿಗಳನ್ನು ಅಭಿವೃದ್ಧಿಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಅಮೆರಿಕಕ್ಕೆ ನಾರ್ವೆಯ ರಾಯಭಾರಿ ಆನಿಕೆನ್ ಹುಯಿಟ್ಫೆಲ್ಡ್ ಅವರು ಈ ಘೋಷಣೆಗೆ ಸಹಿ ಹಾಕಿದರು. ಈ ಮೂಲಕ ನಾರ್ವೆಯು ಆಸ್ಟ್ರೇಲಿಯಾ, ಭಾರತ, ಜಪಾನ್, ಯುಕೆ ಮತ್ತು ಅಮೆರಿಕದಂತಹ ದೇಶಗಳನ್ನೊಳಗೊಂಡ ಈ ಒಕ್ಕೂಟದ 15ನೇ ಸದಸ್ಯ ರಾಷ್ಟ್ರವಾಗಿದೆ.

ಅಮೆರಿಕದ ಆರ್ಥಿಕ ವ್ಯವಹಾರಗಳ ಅಧೀನ ಕಾರ್ಯದರ್ಶಿ ಜೇಕಬ್ ಹೆಲ್ಬರ್ಗ್ ಅವರು ಇದನ್ನು "ಹೊಸ ಆರ್ಥಿಕ ಭದ್ರತೆಯ ಒಮ್ಮತ" ಎಂದು ಕರೆದಿದ್ದಾರೆ. 20ನೇ ಶತಮಾನವು ತೈಲ ಮತ್ತು ಉಕ್ಕಿನ ಮೇಲೆ ಅವಲಂಬಿತವಾಗಿದ್ದರೆ, 21ನೇ ಶತಮಾನವು ಕಂಪ್ಯೂಟಿಂಗ್ ಮತ್ತು ಅದಕ್ಕೆ ಬೇಕಾದ ಖನಿಜಗಳ ಮೇಲೆ ನಿಂತಿದೆ ಎಂದು ಅವರು ಹೇಳಿದ್ದಾರೆ.

ಸದಸ್ಯ ರಾಷ್ಟ್ರಗಳು ಇಂಧನ, ಕಚ್ಚಾವಸ್ತುಗಳು, ಸೆಮಿಕಂಡಕ್ಟರ್‌ಗಳು, ಡೇಟಾ ಮೂಲಸೌಕರ್ಯ ಮತ್ತು ಸುಧಾರಿತ ಎಐ ಮಾದರಿಗಳಾದ್ಯಂತ ಸಹಕಾರವನ್ನು ಹೆಚ್ಚಿಸಲು ಬದ್ಧವಾಗಿವೆ.

ನಂಬಲರ್ಹವಲ್ಲದ ಪೂರೈಕೆದಾರರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವುದು ಇದರ ಮುಖ್ಯ ಉದ್ದೇಶವಾಗಿದೆ. ತೈವಾನ್ ಅಧಿಕೃತವಾಗಿ ಸಹಿ ಮಾಡದಿದ್ದರೂ, ಪ್ರತ್ಯೇಕ ಜಂಟಿ ಹೇಳಿಕೆಯ ಮೂಲಕ ಈ ತತ್ವಗಳನ್ನು ಬೆಂಬಲಿಸಿದೆ.

ಒಟ್ಟಾರೆಯಾಗಿ, ಈ ಒಪ್ಪಂದವು ಮುಂದುವರಿದ ತಂತ್ರಜ್ಞಾನಗಳನ್ನು ಹಂಚಿಕೊಳ್ಳಲು ಮತ್ತು ಖಾಸಗಿ ವಲಯದ ಹೂಡಿಕೆಯ ಮೂಲಕ ಪೂರೈಕೆ ಸರಪಳಿಯನ್ನು ಹೆಚ್ಚು ಸ್ಥಿತಿಸ್ಥಾಪಕವಾಗಿಸಲು ಉದ್ದೇಶಿಸಿದೆ.